ಸಂಪುಟ: 05 ಸಂಚಿಕೆ: 03 ಪುಟಗಳು: 08 ಸೋಮವಾರ 17 ಮಾರ್ಚ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ವಿನ್ಯಾಸಗಾರರು ಬೇಕಾಗಿದ್ದಾರೆ

ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9448225696

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com



ಕೈ ಕಮಲ ಮಧ್ಯ ಗುತ್ತಿಗೆ ಮೀಸಲು ಗುದ್ದಾಟ

- ಸಿದ್ದರಾಮಯ್ಯ ಜಾತಿ-ಜಾತಿಗಳ ಮಧ್ಯ ಜಗಳ ತಂದಿಡುವ ದುಸ್ಸಾಹಸ
- ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ
- ಕೋತಿ ಮೊಸರು ತಿಂದು ಮೇಕೆ ಬಾಯಿಗೆ ಸವರಿದಂತೆ' ಎಂದು ವಿಜಯೇಂದ್ರ ವಾಗ್ದಾಳಿ
- ಸರ್ಕಾರಿ ಗುತ್ತಿಗೆಯಲ್ಲಿ ಕೇವಲ ಮುಸ್ಲಿಮರಿಗೆ ಮಾತ್ರ ಮೀಸಲಾತಿ ಎಂದು ಹೇಳಿದವರು ಯಾರು.. ಡಿ.ಕೆ.ಶಿವಕುಮಾರ್

ಮೀಸಲಾತಿ ಜಟಾಪಟಿ

1. ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ. 4ರಷ್ಟು ಮೀಸಲಾತಿ : ಬಿಜೆಪಿ ತೀವ್ರ ಆಕ್ಷೇಪ
2. ಮುಸ್ಲಿಮರಿಗೆ ಬಹುಪಾಲು ಇತರರಿಗೆ ಅಲ್ಪಪಾಲು" ಎಂಬ ನೀತಿ ಅನುಸರಿಸುತ್ತಿದೆ: ವಿಜಯೇಂದ್ರ
3. ಸರ್ವ ಜನಾಂಗದ ಶಾಂತಿಯ ತೋಟಕ್ಕೆ ಬೆಂಕಿ ಇಡಲು ಹೊರಟಿದೆ ಎಂದು ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವ ಮೂಲಕ ಜಾತಿ ಜಾತಿಗಳ ನಡುವೆ ಜಗಳ ಹಚ್ಚುವ, ಒಡಕು ಮೂಡಿಸುವ ದುಸ್ಸಾಹಸ ಮತ್ತು ಷಡ್ಯಂತ್ರಕ್ಕೆ ಸಿಎಂ ಸಿದ್ದರಾಮಯ್ಯ ಕೈಹಾಕಿದ್ದಾರೆ. ಮುಸ್ಲಿಂರ ಓಲೈಕೆ ದುರ್ದೈವದ ಸಂಗತಿ. ಇದನ್ನು ಬಿಜೆಪಿ ಬಲವಾಗಿ ಖಂಡಿಸುತ್ತದೆ. ಸದನದ ಹೊರಗೆ ಮತ್ತು ಒಳಗೆ ಎರಡೂ ಕಡೆ ಇದರ ವಿರುದ್ಧ ಉಗ್ರ ಹೋರಾಟ ಮಾಡಲಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಎಚ್ಚರಿಸಿದರು.



ನಗರದ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಬಂದ ಮೇಲೆ ಸಿದ್ದರಾಮಯ್ಯ ಅವರು ತಮ್ಮ 16ನೇ ಬಜೆಟ್ ಮಂಡಿಸಿದ್ದಾರೆ. ಅದರಲ್ಲಿ ಸರ್ಕಾರಿ ಗುತ್ತಿಗೆಯಲ್ಲಿ ಶೇ.4ರಷ್ಟು ಅಲ್ಪಸಂಖ್ಯಾತರಿಗೆ ಮೀಸಲಿಡುವುದಾಗಿ ಘೋಷಿಸಿದ್ದರು. ಅದೇ ರೀತಿ ನಿನ್ನೆ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನವನ್ನು ತೆಗೆದುಕೊಂಡಿದ್ದಾರೆ. ಸಂವಿಧಾನದಲ್ಲಿ ಧರ್ಮದ ಆಧಾರದಲ್ಲಿ ಮೀಸಲಾತಿ ಕೊಡುವ ಬಗ್ಗೆ ಉಲ್ಲೇಖವಾಗಿಲ್ಲ. ಹಾಗಾಗಿ, ಈ ಅಸಂವಿಧಾನಾತ್ಮಕ ತೀರ್ಮಾನವನ್ನು ನಾವು ಖಂಡಿಸುತ್ತೇವೆ, ಪ್ರಜಾಪ್ರಭುತ್ವ ವಿರೋಧಿ ನಿಲುವನ್ನು ವಿರೋಧಿಸುತ್ತೇವೆ ಎಂದರು. ಸದನದೊಳಗೆ ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ರಾಜ್ಯ ಸರ್ಕಾರದ ಕಿವಿ ಹಿಂಡುವ ಕೆಲಸ ಮಾಡುತ್ತಿದ್ದೇವೆ. ಹಣಕಾಸಿನ ಮುಗ್ಗಟ್ಟಿದೆ ಅಂತಾ ಬಿಜೆಪಿ ಘೋಷಿಸಿದ್ದ ವಿಶ್ವವಿದ್ಯಾಲಯಗಳನ್ನು ಮುಚ್ಚುವ ನಿರ್ಧಾರಕ್ಕೆ ಈ ಸರ್ಕಾರ ಬಂದಿತ್ತು. ಯಾವಾಗ ಸದನದಲ್ಲಿ ಈ ವಿಷಯ ನಾವು ಚರ್ಚಿಸಿದೆವೋ, ಮುಂದೆ ನಾವು ಹೋರಾಟಕ್ಕೆ ಇಳಿಯುತ್ತೇವೆ ಎಂಬುದನ್ನು ಮನಗಂಡು ಸಿಎಂ ಸಿದ್ದರಾಮಯ್ಯ ಅವರು ವಿವಿಗಳನ್ನು ಮುಚ್ಚುವ ನಿರ್ಧಾರ ಕೈಗೊಂಡಿಲ್ಲ ಎಂದು ಮೊನ್ನೆ ಸದನದಲ್ಲಿ ಹೇಳಿಕೆ ನೀಡಿದ್ದಾರೆ. ಆ ನಿರ್ಧಾರದಿಂದ ಒಂದು ಹೆಜ್ಜೆ ಹಿಂದೆ ಸರಿದಿದ್ದಾರೆ. ಇದು ನಮ್ಮ ಹೋರಾಟದ ಪರಿಣಾಮ ಎಂದು ಸಮರ್ಥಿಸಿಕೊಂಡರು. ಮೈಕ್ರೋ ಫೈನಾನ್ಸ್ ಹಾವಳಿ ಕುರಿತು ಸದನದಲ್ಲಿ ಚರ್ಚೆ ಆಗಿದೆ. ಈ ಕುರಿತು ಒಂದು ಬಿಲ್ ಕೂಡ ಪಾಸ್ ಆಗಿದೆ. ಬಿಗಿಯಾದ ಕಾನೂನು ಅನುಷ್ಠಾನಕ್ಕೆ ತರುತ್ತೇವೆ. ಫೈನಾನ್ಸ್‌ಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳುವುದಾಗಿ ಸರ್ಕಾರ ಹೇಳಿದೆ. ಈಗಾಗಲೇ ಸಾಕಷ್ಟು ಸಾವು ನೋವುಗಳು ಆಗಿವೆ. ಹಾಗಾಗಿ, ಸರ್ಕಾರ ಎಚ್ಚೆತ್ತುಕೊಂಡು ಬಡವರಿಗೆ ಅನ್ಯಾಯ ಆಗುತ್ತಿರುವುದನ್ನು ಸರಿಪಡಿಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷರು ಆಗ್ರಹಿಸಿದರು.

ರಾಜ್ಯ ಸರ್ಕಾರದಿಂದ ಅಲ್ಪಸಂಖ್ಯಾತರ ತುಷ್ಟೀಕರಣ : ಉತ್ತರ ಕರ್ನಾಟಕಕ್ಕೆ ಅನುಕೂಲ ಆಗಬೇಕು ಅಂತಾ ನೀರಾವರಿ ಯೋಜನೆಗೆ ಹಿಂದಿನ ಬಿಜೆಪಿ ಸರ್ಕಾರ 19 ಸಾವಿರ ಕೋಟಿ ಅನುದಾನ ನೀಡಿತ್ತು. ಕಾಂಗ್ರೇಸ್ ನಡಿಗೆ ಕೃಷ್ಣೆಯ ಕಡೆಗೆ ಪಾದಯಾತ್ರೆ ಕೈಗೊಂಡು 50 ಸಾವಿರ ಕೋಟಿ ರೂ. ನೀರಾವರಿ ಯೋಜನೆಗೆ ನೀಡುವುದಾಗಿ ಹೇಳಿದ್ದರು. ಅದನ್ನು ಕೂಡ ಸಿದ್ದರಾಮಯ್ಯನವರು ಮರೆತಿದ್ದಾರೆ. ಶಾಸಕರ ಕ್ಷೇತ್ರಗಳಿಗೆ ಅನುದಾನ ನೀಡುತ್ತಿಲ್ಲ. ಕಾಂಗ್ರೇಸ್ ಸರ್ಕಾರ ರಾಜ್ಯದ ಅಭಿವೃದ್ಧಿ ಬಗ್ಗೆ ಕಿಂಚಿತ್ತೂ ಕಾಳಜಿ ತೋರಿಸಿಲ್ಲ. ಎಲ್ಲೂ ಕೂಡ ಅನುದಾನ ಬಿಡುಗಡೆ ಮಾಡುತ್ತಿಲ್ಲ. ಸರ್ಕಾರ ಅಲ್ಪಸಂಖ್ಯಾತರ ತುಷ್ಟೀಕರಣ ರಾಜಕಾರಣ ಮಾಡುತ್ತಿದೆ ಎಂದು ಬಿ ವೈ ವಿಜಯೇಂದ್ರ ಹರಿಹಾಯ್ದರು. ಶನಿವಾರ ನಡೆದ ಚುನಾವಣೆಯಲ್ಲಿ ಬೆಳಗಾವಿ ಮಹಾನಗರ ಪಾಲಿಕೆ ಮೇಯರ್ ಆಗಿ ಮಂಗೇಶ ಪವಾರ್, ಉಪಮೇಯರ್ ಆಗಿ ವಾಣಿ ಜೋಶಿ ಆಯ್ಕೆಯಾಗಿದ್ದಾರೆ. ಅವರಿಗೆ ನಾನು ಅಭಿನಂದನೆ ಸಲ್ಲಿಸುತ್ತೇವೆ. ಅವರ ನೇತೃತ್ವದಲ್ಲಿ ಬೆಳಗಾವಿಯಲ್ಲಿ ಅತೀ ಹೆಚ್ಚು ಕೆಲಸ ಕಾರ್ಯಗಳು ಆಗಲಿ. ಅದರ ಜೊತೆಗೆ ಎಲ್ಲ ಸಮಾಜ, ವರ್ಗ ಹಾಗೂ ಭಾಷಿಕರನ್ನು ಒಟ್ಟಿಗೆ ತೆಗೆದುಕೊಂಡು ಹೋಗಲಿ ಎಂದು ಸಲಹೆ ನೀಡಿದರು.

ಬಿಬಿಎಂಪಿ ಚುನಾವಣೆ ನಡೆಸಲು ಸರ್ಕಾರ ತಯಾರಿದೆ

ಬಿಬಿಎಂಪಿ ಚುನಾವಣೆಗೆ ಸರ್ಕಾರ ತಯಾರಿದೆಯೇ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಖಂಡಿತವಾಗಿ ತಯಾರಿದೆ. ಎಷ್ಟು ದಿನ ನಾವು ತಪ್ಪಿಸಿಕೊಂಡು ಇರಲು ಸಾಧ್ಯ ಎಂದು ಹೇಳಿದರು. ಬೆಂಗಳೂರು ಮಹಾನಗರ ಪಾಲಿಕೆಗೆ ಸ್ಪರ್ಧೆ ಮಾಡಿದ ಅಭ್ಯರ್ಥಿಗಳ ಸಭೆಯನ್ನು ಕರೆಯಲಾಗಿದೆ. ನಂತರ ಎಲ್ಲಾ ಪಕ್ಷದವರನ್ನು ಸಭೆಗೆ ಕರೆಯಲಾಗುವುದು. ಅವರಲ್ಲಿಯೂ ಕೆಲವೊಬ್ಬರು ಅನಧಿಕೃತವಾಗಿ ಬಿಬಿಎಂಪಿ ಚುನಾವಣೆ ಕುರಿತಾಗಿ ಸಲಹೆ ನೀಡಿದ್ದಾರೆ. ಈಗ ಅಧಿಕೃತವಾಗಿ ಸಲಹೆಗಳನ್ನು ಪಡೆಯಲಾಗುವುದು ಎಂದರು.

ಮಾ.22 ರಂದು ತಮಿಳುನಾಡಿಗೆ ಪ್ರಯಾಣ

ಕ್ಷೇತ್ರ ಪುನರ್ ವಿಂಗಡಣೆ ವಿರೋಧಿ ಸಭೆಯಲ್ಲಿ ಭಾಗವಹಿಸುತ್ತೀರ ಎಂದು ಕೇಳಿದಾಗ, ನನಗೆ ಹಾಗೂ ಮುಖ್ಯಮಂತ್ರಿಗಳಿಗೆ ತಮಿಳುನಾಡಿನ ಸಿಎಂ ಆಹ್ವಾನ ನೀಡಿದ್ದರು. ಹೈಕಮಾಂಡ್ ಹಾಗೂ ಮುಖ್ಯಮಂತ್ರಿಗಳು ಮಾ.22 ರಂದು ತಮಿಳುನಾಡಿನಲ್ಲಿ ನಡೆಯುವ ಸಭೆಗೆ ಭಾಗವಹಿಸಿ ಎಂದು ನಿರ್ದೇಶನ ನೀಡಿದ್ದಾರೆ ಎಂದು ಹೇಳಿದರು. ಮುಖ್ಯಮಂತ್ರಿಗಳಿಗೆ ಮೊಣಕಾಲಿನ ನೋವು ಇರುವ ಕಾರಣಕ್ಕೆ ವೈದ್ಯರ ಸಲಹೆಯ ಮೇರೆಗೆ ಅವರು ಬರುತ್ತಿಲ್ಲ. ಪಕ್ಷ ಹಾಗೂ ಸರ್ಕಾರದ ವತಿಯಿಂದ ನಾನು ಸಭೆಯಲ್ಲಿ ಭಾಗವಹಿಸುವೆ. ಕ್ಷೇತ್ರ ಪುನರ್ ವಿಂಗಡಣೆ ಬಗ್ಗೆ ದೇಶದಲ್ಲಿ ದೊಡ್ಡ ಪ್ರಮಾಣದ ಚರ್ಚೆ ನಡೆಯುತ್ತಿದೆ. ನಾವುಗಳು ನಮ್ಮ ಹಕ್ಕುಗಳನ್ನು ಹಾಗೂ ಸಂಖ್ಯೆಗಳನ್ನು ಬಿಟ್ಟುಕೊಡಲು ತಯಾರಿಲ್ಲ. ಪಕ್ಷದ ನಿಲುವಿನ ಬಗ್ಗೆ ಮಾ.18 ರಂದು ಚರ್ಚೆ ನಡೆಸಿ, ನಿಲುವನ್ನು ತಿಳಿಸುತ್ತೇವೆ ಎಂದರು.



ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ ಎಂದು ಹೇಳಿದವರು ಯಾರು..:

ಅಲ್ಪಸಂಖ್ಯಾತರು ಹಾಗೂ ಹಿಂದುಳಿದವರಿಗೆ ನೀಡಲು ಸರ್ಕಾರ ನಿರ್ಧಾರ ಮಾಡಿದೆ. ಅಲ್ಪಸಂಖ್ಯಾತರು ಎಂದರೆ ಕ್ರಿಶ್ಚಿಯನ್, ಜೈನ, ಪಾರ್ಸಿ, ಸಿಖ್ ಹೀಗೆ ಎಲ್ಲರೂ ಸೇರುತ್ತಾರೆ. ಈ ಹಿಂದೆ ಪರಿಶಿಷ್ಟ ಜಾತಿ, ಪಂಗಡವರಿಗೆ ಗುತ್ತಿಗೆ ಮೀಸಲಾತಿ ನೀಡುವಂತೆ ತಿದ್ದುಪಡಿ ಮಾಡಿದ್ದೆವು ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ತಿಳಿಸಿದರು. ಕೆಪಿಸಿಸಿ ಕಚೇರಿ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮುಸ್ಲಿಮರಿಗೆ ಗುತ್ತಿಗೆಯಲ್ಲಿ ಶೇ.4 ರಷ್ಟು ಮೀಸಲಾತಿ ನೀಡಲು ಮಾಡಿರುವ ತೀರ್ಮಾನದ ಕುರಿತು ಪ್ರತಿಕ್ರಿಯಿಸಿ, ಕೇವಲ ಎರಡು ಕೋಟಿ ಮೊತ್ತಕ್ಕೆ ಮಾತ್ರ ಒಪ್ಪಿಗೆ ನೀಡಲಾಗಿದೆ. ಇದಕ್ಕಿಂತ ಹೆಚ್ಚಿನ ಮೊತ್ತದ ಕಾಮಗಾರಿ ನಡೆಸಲು ಸಾಧ್ಯವಿಲ್ಲ. ನಾವು ಬೇರೆ ಯಾರ ಹಕ್ಕನ್ನು ಇಲ್ಲಿ ಕಸಿದುಕೊಳ್ಳುತ್ತಿಲ್ಲ. ಅವರಿಗೂ ನಾವು ಬದುಕು ಕೊಡಬೇಕಲ್ಲವೇ.. ಎಂದರು. ಬಿಜೆಪಿಯು ಗುತ್ತಿಗೆ ಮೀಸಲಾತಿಯನ್ನು ಮತ ಬ್ಯಾಂಕ್ ರಾಜಕಾರಣ ಎಂದಿರುವ ಬಗ್ಗೆ ಪ್ರತಿಕ್ರಿಯಿಸಿ, ಅವರು ನಮ್ಮನ್ನು ನೆನಪಿಸಿಕೊಳ್ಳುತ್ತಾ ಇರಬೇಕು. ಆಗಲೇ ನಾವು ಗಟ್ಟಿಯಾಗವುದು ಎಂದು ತಿರುಗೇಟು ನೀಡಿದರು.

ರವಿಶಂಕರ್ ಪ್ರಸಾದ್ ಕಿಡ್ತಿ

ರಾಹುಲ್ ಗಾಂಧಿ ಸೂಚನೆ ಮೇರೆಗೆ ರಾಜ್ಯದಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡಲಾಗಿದೆ ಎಂದು ಬಿಜೆಪಿ ನಾಯಕ ರವಿಶಂಕರ್ ಪ್ರಸಾದ್ ವಾಗ್ದಾಳಿ ನಡೆಸಿದರು. ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ 4% ಮಿಸಲಾತಿ ವಿಚಾರಕ್ಕೆ ಪ್ರತಿಕ್ರಿಯಿಸಿ, ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ರಾಜ್ಯ ಸರ್ಕಾರದ ಈ ನೀತಿಗೆ ಬಿಜೆಪಿ ವಿರುದ್ಧವಾಗಿದೆ ಎಂದರು. ನಾವು ಅದನ್ನು ವಿರೋಧಿಸುತ್ತಲೇ ಇರುತ್ತೇವೆ . ಭಾರತೀಯ ಸಂವಿಧಾನದ ಅಡಿಯಲ್ಲಿ ಧರ್ಮಾಧಾರಿತ ಮೀಸಲಾತಿಗೆ ಅವಕಾಶವಿಲ್ಲ. ಸರ್ಕಾರಿ ಗುತ್ತಿಗೆಯಲ್ಲಿ ಮೀಸಲಾತಿ ಸಂಪೂರ್ಣವಾಗಿ ಸಂವಿಧಾನ ಬಾಹಿರವಾದದ್ದು. ಸಾಮಾಜಿಕ ಹಿಂದುಳಿದಿರುವಿಕೆಯ ಆಧಾರದ ಗುತ್ತಿಗೆ ಅನುಮತಿ ಇದೆ. ಆದ್ರೆ ಧಾರ್ಮಿಕ ಸಮುದಾಯಕ್ಕೆ ನೇರವಾಗಿ ಮೀಸಲಾತಿಗೆ ಅವಕಾಶವಿಲ್ಲ. ಇದು ಕಾಂಗ್ರೇಸ್‌ನ ವೋಟ್ ಬ್ಯಾಕ್ ರಾಜಕಾರಣದ ಹೊಸ ಆಯಾಮ ಎಂದೂ ಹರಿಹಾಯ್ದರು.4% ನೋಡೊದಕ್ಕೆ ಚಿಕ್ಕದು ಎನ್ನಿಸಬಹುದು. ಮುಂದೆ ಇದು ದೊಡ್ಡ ದಾಗಲಿದೆ. ರಾಹುಲ್ ಗಾಂಧಿ ಸೂಚನೆ ಮೇರೆ ಮೀಸಲಾತಿ ನೀಡಲಾಗಿದೆ. ವೋಟ್ ಬ್ಯಾಂಕ್ ರಾಜಕಾರಣದಲ್ಲೂ ಸ್ಪರ್ಧೆ ಶುರುವಾಗಿದೆ ಎಂದು ಕಿಡಿ ಕಾರಿದರು.

ಡಿಕೆಶಿ ಔತಣಕೂಟದಲ್ಲಿ ಎಲ್ಲರೂ ಭಾಗಿಯಾಗಿದ್ದರು, ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ

• ಉದಯವಾಹಿನಿ, ಬೆಳಗಾವಿ

ರಾಜ್ಯ ಕಾಂಗ್ರೇಸ್‌ನಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ, ಡಿಕೆಶಿ ಅವರು ಕರೆದಿದ್ದ ಔತಣಕೂಟದಲ್ಲಿ ಪಕ್ಷದ ಎಲ್ಲಾ ಶಾಸಕರು ಭಾಗವಹಿಸಿದ್ದರು ಎಂದು ಸಚಿವ ಎಂಬಿ ಪಾಟೀಲ್ ಅವರು ಹೇಳಿದರು. ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ ಶಿವಕುಮಾರ್ ಐದು ವರ್ಷ ಪೂರೈಸಿದ ಕಾರಣ ಕಾಂಗ್ರೇಸ್ ಪಕ್ಷದ ಸಚಿವರು, ಶಾಸಕರಿಗೆ ಔತಣಕೂಟ ಏರ್ಪಡಿಸಿದ್ದರು. ಇದಕ್ಕೆ ಪರಮೇಶ್ವರ್ ಭಾಗವಹಿಸಿರಲಿಲ್ಲ, ಏಕೆಂದರೆ, ಅವರ ಆಪ್ತರೊಬ್ಬರು ನಿಧನರಾಗಿದ್ದ ಕಾರಣ ಅವರ ಬರಲು ಸಾಧ್ಯವಾಗಲಿಲ್ಲ ಎಂದು ಸ್ಪಷ್ಟಪಡಿಸಿದರು. ಕಾಂಗ್ರೇಸ್ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ, ವಿಪಕ್ಷದವರು ಸುಮ್ಮನೇ ವಿವಾದಗಳನ್ನೆಬ್ಬಿಸುತ್ತಾರೆ. ಈ ಭೋಜನಾಕೂಟ ದಲ್ಲಿ ಮುಖ್ಯಮಂತ್ರಿ ಸೇರಿದಂತೆ, ಸಚಿವ ಸತೀಶ್ ಜಾರಕಿಹೊಳಿ, ಸಹಕಾರ ಸಚಿವ ಕೆ.ಎನ್.ರಾಜಣ್ಣ ಭಾಗವಹಿಸುವ ಮೂಲಕ ಈ ವಿವಾದಗಳಿಗೆ ತೆರೆ ಎಳೆದಿದ್ದಾರೆ ಎಂದು ತಿಳಿಸಿದರು. ಅಧಿವೇಶನ ನಡೆದಾಗ ಸಾಮಾನ್ಯವಾಗಿ ಸಚಿವರು, ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಔತಣಕೂಟ ಆಯೋಜಿಸುತ್ತಾರೆ. ಇದರಲ್ಲಿ ವಿಶೇಷವೇನೂ ಇಲ್ಲ ಎಂದರು. ಕೆಪಿಸಿಸಿಯ ಮುಖ್ಯಸ್ಥರು ಯಾರು ಎಂಬುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸುತ್ತದೆ. ರಾಜ್ಯ ಮಟ್ಟದಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆ ಯಾವುದೇ ಚರ್ಚೆ ನಡೆಯುವುದಿಲ್ಲ ಎಂದು ಹೇಳಿದರು.

ಆಸ್ತಿ ತೆರಿಗೆ 88% ರಷ್ಟು ಸಂಗ್ರಹ 2.25 ಲಕ್ಷ ಇ ಖಾತಾ ವಿತರಣೆ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿಯು 2024-25ನೇ ಸಾಲಿನಲ್ಲಿ ಆಸ್ತಿ ತೆರಿಗೆಯಿಂದ 5,210 ಕೋಟಿ ರೂ. ಸಂಗ್ರಹಿಸುವ ಗುರಿ ಹೊಂದಿತ್ತು. ಆದರೆ, ಈವರೆಗೆ 4604 ಕೋಟಿ ರೂ (ಶೇ 88.36) ವಸೂಲಾಗಿದೆ. ಪಾಲಿಕೆಯಲ್ಲಿ ಶನಿವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್, ಆರ್ಥಿಕ ವರ್ಷ ಅಂತ್ಯಕ್ಕೆ 15 ದಿನಗಳಷ್ಟೇ ಬಾಕಿ ಉಳಿದಿದ್ದು, ಬಾಕಿ ಆಸ್ತಿ ತೆರಿಗೆ ವಸೂಲಿಗೆ ತಕ್ಷಣವೇ ಕ್ರಮ ಕೈಗೊಳ್ಳಬೇಕು, ಎಂದು ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ವಲಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಕಟ್ಟುನಿಟ್ಟಿನ ಸೂಚನೆ ನೀಡಿದರು. 2024-25ರಲ್ಲಿ 5,210 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹದ ಗುರಿ ಹೊಂದಲಾಗಿತ್ತು. ಈವರೆಗೆ 4,604 ಕೋಟಿ ರೂ. ವಸೂಲಾಗಿದ್ದು, ಶೇ. 88.36ರಷ್ಟು ಗುರಿ ಸಾಧಿಸಲಾಗಿದೆ. ಈ ಕೂಡಲೇ ಆಯಾ ವಲಯ ವ್ಯಾಪ್ತಿಯಲ್ಲಿ ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಸಂಸ್ಥೆಗಳು, ಉದ್ದಿಮೆಗಳಿಗೆ ಭೇಟಿ ನೀಡಿ ಬಾಕಿ ವಸೂಲಿ ಮಾಡಬೇಕು. ತಿಂಗಳಾಂತ್ಯದೊಳಗೆ ನಿಗದಿತ ಗುರಿಯಂತೆ ತೆರಿಗೆ ಸಂಗ್ರಹಿಸಲು ಕ್ರಮ ಕೈಗೊಳ್ಳಬೇಕು, ಎಂದು ಸೂಚಿಸಿದರು.

ಮುಸ್ಲಿಂ ಮನಸ್ಥಿತಿ ಹೊಂದಿರುವ ಹಿಂದೂಗಳೇ ದೇಶಕ್ಕೆ ಗಂಡಾಂತರ

• ಉದಯವಾಹಿನಿ, ಬೆಂಗಳೂರು

ಮುಸ್ಲಿಮರಿಗೆ ಗುತ್ತಿಗೆ ಮೀಸಲಾತಿ ವಿಚಾರವಾಗಿ ಬಿಜೆಪಿ ಪರಿಷತ್ ಸದಸ್ಯ ಛಲವಾದಿ ನಾರಾಯಣ ಸ್ವಾಮಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿರುವ ಛಲವಾದಿ ನಾರಾಯಣ ಸ್ವಾಮಿ, ಮುಸ್ಲಿಮರಿಂದ ದೇಶಕ್ಕೆ ಗಂಡಾಂತರವಿಲ್ಲ. ಆದರೆ ಮುಸ್ಲಿಂ ಮನಸ್ಥಿತಿ ಹೊಂದಿರುವ ಈ ಹಿಂದೂಗಳಿಂದ ದೇಶಕ್ಕೆ ಗಂಡಾಂತರ ಇದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಂವಿಧಾನದ ಪ್ರಕಾರ ಧಾರ್ಮಿಕ ಮೀಸಲಾತಿ ಕೊಡಲು ಅವಕಾಶ ಇಲ್ಲ. ಈ ಹಿಂದೆಯೂ ಮುಸ್ಲಿಮರಿಗೆ 4% ಮೀಸಲಾತಿ ಇದ್ದದ್ದನ್ನು ಬಸವರಾಜ ಬೊಮ್ಮಾಯಿ ಸಿಎಂ ಆಗಿದ್ದಾಗ ಹಿಂದಕ್ಕೆ ಪಡೆಯಲಾಯಿತು. ಕಾಂಗ್ರೇಸ್ ನವರು ಅಧಿಕಾರಕ್ಕೆ ಬಂದ ಮೇಲೆ ಮುಸ್ಲಿಮರಿಗೆ ಮೀಸಲಾತಿ ಕೊಡುವುದಾಗಿ ಹೇಳಿ ಈಗ ಇದರ ಭಾಗವಾಗಿ ಗುತ್ತಿಗೆಯಲ್ಲೂ ಮೀಸಲಾತಿ ಕೊಟ್ಟಿದ್ದಾರೆ. ಇದರ ವಿರುದ್ಧ ನಾವು

ಬೆಂಗಳೂರು ಕಿಡ್ನಿ ಫೌಂಡೇಷನ್ ವತಿಯಿಂದ ಕಿಡ್ನಿ ಸುರಕ್ಷತೆಗೆ ಜಾಗೃತಿ ಜಾಥ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕಿಡ್ನಿ ಫೌಂಡೇಷನ್ ವತಿಯಿಂದ ಕಿಡ್ನಿ ಆರೋಗ್ಯದ ಕುರಿತು ಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ಶಂಕರ ಕ್ಯಾನ್ಸರ್ ಆಸ್ಪತ್ರೆಯಿಂದ ಜಾಥ ಕಾರ್ಯಕ್ರಮದಲ್ಲಿ ಬೆಂಗಳೂರು ಕಿಡ್ನಿ ಫೌಂಡೇಷನ್ ಅಧ್ಯಕ್ಷರಾದ ಡಾ॥ ಶ್ರೀ ರಾಮ್ ರವರು ಚಾಲನೆ ನೀಡಿದರು. ಸಾವಿರಾರು ಜನರು ಕಿಡ್ನಿ ಸುರಕ್ಷತೆ ಜಾಥದಲ್ಲಿ ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಡಾ॥ ಶ್ರೀರಾಮ್ ರವರು ಮಾತನಾಡಿ ಹೃದಯದಂತೆ ಕಿಡ್ನಿ ಸಹ ಮನುಷ್ಯನಿಗೆ ಬೇಕಾದ ಬಹು ಮುಖ್ಯವಾದ ಅಂಗ. ಸಕ್ಕರೆ ಪ್ರಮಾಣ ಮತ್ತು ಬಿ.ಪಿ.ಸಮ ಪ್ರಮಾಣದಲ್ಲಿ ಇರಬೇಕು ಮತ್ತು ವಂಶಪಾರಂಪಯ್ಯವಾಗಿ ಕಿಡ್ನಿ ಸಮಸ್ಯೆ ಇರುವವರು ಇರುತ್ತಾರೆ ಪ್ರಥಮ ಹಂತದಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು. ಪ್ರತಿಯೊಬ್ಬ ಪ್ರತಿದಿನ ವಾಕಿಂಗ್ ಮ ತ್ತು ಉತ್ತಮ ಆಹಾರ ಸೇವನೆ ಹಾಗೂ ಚನ್ನಾಗಿ ನಿದ್ರೆ ಮಾಡಬೇಕು. ಕರೀದ ಪದಾರ್ಥ ಮತ್ತು ರಾಸಯುನಿಕ ಯುತ ಆಹಾರ ಸೇವನೆ, ಧೂಮಪಾನ, ಮದ್ಯಪಾನ ಬೀಡಬೇಕು. ಆರೋಗ್ಯವಂತ ಕಿಡ್ನಿ ಸುರಕ್ಷತೆ ವೈದ್ಯರು ಹೇಳುವ ಸಲಹೆ ಪಡೆದು ಆರೋಗ್ಯವಂತರಾಗಿ ಇರಿ ಎಂದು ಹೇಳಿದರು.

ಹರಿದಾಸ ಮಂಜರಿ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ

ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಮಾರ್ಚ್ 20, ಗುರುವಾರ ಸಂಜೆ 5-30ಕ್ಕೆ ಹರಿದಾಸ ಮಂಜರಿ. ಶ್ರೀಮತಿ ವೈಷ್ಣವಿ ಕೊಪ್ಪ ಅವರ ಗಾಯನಕ್ಕೆ ಶ್ರೀ ಮಧುಸೂದನ್ ಕೊಪ್ಪ (ತಬಲಾ), ಶ್ರೀ ಭರತ್ (ಹಾರ್ಮೋನಿಯಂ) ಶ್ರೀ ಹನುಮೇಶ್ ಆಚಾರ್ (ಕೊಳಲು), ಶ್ರೀ ವಿನೀತ್ ಜೋಶಿ (ತಾಳ) ಇವರುಗಳು ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

ಮೈಸೂರು ರಸ್ತೆಯಲ್ಲಿ ಸರಣಿ ಅಪಘಾತ: ಓರ್ವ ದುರ್ಮರಣ

• ಉದಯವಾಹಿನಿ, ಬೆಂಗಳೂರು

ಮೈಸೂರು ರಸ್ತೆಯ ಬ್ಯಾಟರಾಯನಪುರ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಸ್ಯಾಟಲೈಟ್ ಬಸ್ ನಿಲ್ದಾಣದ ಬಳಿ ಸರಣಿ ಅಪಘಾತ ಸಂಭವಿಸಿದ್ದು, ಘಟನೆಯಲ್ಲಿ ಓರ್ವ ಸಾವನ್ನಪ್ಪಿರುವ ಘಟನೆ ನಡೆದಿದೆ. ಘಟನೆಯಲ್ಲಿ ಮೃತಪಟ್ಟ ವ್ಯಕ್ತಿಯನ್ನು ತಮಿಳುನಾಡು ಮೂಲದ ಜಗನ್ ಎಂದು ಗುರ್ತಿಸಲಾಗಿದೆ. ಘಟನೆಯಲ್ಲಿ . ಪಾದಚಾರಿ ಮನೋಜ್ (20) ಮತ್ತು ಆಟೋರಿಕ್ಷಾ ಚಾಲಕ ಚಂದಾ ಪಾಷಾ (25) ಗಾಯಗೊಂಡಿದ್ದಾರೆ. ಅಪಘಾತದಲ್ಲಿ ವಾಹನ ಸಂಪೂರ್ಣವಾಗಿ ಜಖಂಗೊಂಡಿದೆ. ಬೆಳಗ್ಗೆ 4 ಗಂಟೆ ಸುಮಾರಿಗೆ ಮೈಸೂರು ರಸ್ತೆಯ ಹೊಸಗುಡ್ಡದಹಳ್ಳಿಯಿಂದ ಬಾಪೂಜಿನಗರದ ಕಡೆಗೆ ಹೋಗುತ್ತಿದ್ದ ಕ್ಯಾಂಟರ್ ವಾಹನವು ಸ್ಯಾಟಲೈಟ್ ಬಸ್ ನಿಲ್ದಾಣದ ಬಳಿ ಚಾಲನನ ನಿಯಂತ್ರಣ ತಪ್ಪಿ ಸರಣಿ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಕ್ಯಾಂಟರ್ ಮೂರು ಕ್ಯಾಬ್, ಮೂರು ಆಟೋ ಹಾಗೂ ಒಂದು ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಕ್ಯಾಂಟರ್ ವಾಹನದ ಚಾಲಕ ಜಗನ್ ಗಂಭೀರವಾಗಿ ಗಾಯಗೊಂಡಿದ್ದು, ಕೂಡಲೇ ಆತನನ್ನು ವಿಕ್ಟೋರಿಯಾ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಬೆಳಿಗ್ಗೆ ಮೃತಪಟ್ಟಿದ್ದಾನೆ. ಗಾಯಗೊಂಡಿರುವ ಇಬ್ಬರಿಗೆ ಚಿಕಿತ್ಸೆ ಮುಂದುವರೆದಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ಸಂಬಂಧ ಬ್ಯಾಟರಾಯನಪುರ ಸಂಚಾರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಸಂಧ್ಯಾಕಾಲದಲ್ಲಿ ಪೋಷಕರನ್ನು ಆಸ್ಪತ್ರೆಯಲ್ಲಿ ಬಿಟ್ಟು ಹೋಗುತ್ತಿರುವ ಮಕ್ಕಳಿಗೆ ಸರ್ಕಾರದಿಂದ ಬಿಗ್ ಶಾಕ್

• ಉದಯವಾಹಿನಿ, ಬೆಂಗಳೂರು

ಸಂಧ್ಯಾಕಾಲದಲ್ಲಿ ತಂದೆ-ತಾಯಿಯರನ್ನೇ ಅನಾಥರನ್ನಾಗಿ ಮಾಡುತ್ತಿರುವ ಪರಿಪಾಠ ಹೆಚ್ಚಾಗಿದೆ. ಇಂಥ ಅಮಾನವೀಯ ಕೃತ್ಯಗಳನ್ನು ತಡೆಗಟ್ಟಲು ವೈದ್ಯಕೀಯ ಶಿಕ್ಷಣ ಇಲಾಖೆ ಮುಂದಾಗಿದೆ. ಕರ್ನಾಟಕದಲ್ಲಿ ಇತ್ತೀಚೆಗೆ ವೃದ್ಧ ಪೋಷಕರನ್ನು ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಬಿಟ್ಟು ಹೋಗುತ್ತಿರುವ ಉದಾಹರಣೆಗಳು ಹೆಚ್ಚಾಗಿದೆ. ಅದೂ ಆಸ್ತಿಯನ್ನು ತಮ್ಮ ಹೆಸರಿಗೆ ಬರೆಯಿಸಿಕೊಂಡ ಪೋಷಕರನ್ನು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಗೆ ಬಿಟ್ಟು ಮಕ್ಕಳು ನಾಪತ್ತೆಯಾಗುತ್ತಿದ್ದಾರೆ. ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ (ಬಿಐಎಂಎಸ್) ಒಂದರಲ್ಲೇ 150 ಕ್ಕೂ ಹೆಚ್ಚು ಹಿರಿಯ ನಾಗರಿಕರನ್ನು ಮಕ್ಕಳು ತೊರೆದ ಪ್ರಕರಣಗಳು ವರದಿಯಾಗಿವೆ. ರಾಜ್ಯಾದ್ಯಂತ ಇತರ ವೈದ್ಯಕೀಯ ಸಂಸ್ಥೆಗಳಲ್ಲಿ ಇಂಥ 100 ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ. ಈ ವಿಷಯವನ್ನು ಅರಿತ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ, ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್, ತೀವ್ರ ಬೇಸರ ವ್ಯಕ್ತಪಡಿಸಿದರಲ್ಲದೇ, ಕೂಡಲೇ ವಿಲ್‌ಗಳುತ್ತ ಆಸ್ತಿ ವರ್ಗಾವಣೆಗಳನ್ನು ರದ್ದುಗೊಳಿಸುವಂತೆ ಕ್ರಮ ಕೈಗೊಳ್ಳಲು ಸಚಿವರು ಆದೇಶ ನೀಡಿದ್ದಾರೆ ಕಳೆದ ಒಂದು ವಾರದಿಂದ ವಿಕಾಸ ಸೌಧದಲ್ಲಿ ರಾಜ್ಯದ ವಿವಿಧ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರು, ಇತರ ಸದಸ್ಯರ ಸಭೆ ನಡೆಸಿ ಮಾಹಿತಿ ಪಡೆದುಕೊಂಡಿದ್ದಾರೆ. ಈ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದ ಸಚಿವರು, ಈ ಕುರಿತ ಪ್ರಕರಣಗಳು ಕಂಡು ಬಂದ ಕೂಡಲೇ ವೈದ್ಯಕೀಯ ಶಿಕ್ಷಣ ನಿರ್ದೇಶಕರು (ಡಿಎಂಇ) ಕೂಡಲೇ ಸಹಾಯಕ ಆಯುಕ್ತರಿಗೆ (ಕಂದಾಯ ಉಪವಿಭಾಗ) ದೂರುಗಳನ್ನು ಸಲ್ಲಿಸುವಂತೆ ಸೂಚನೆ ನೀಡಿದರು.

SCSP/TSP ಅನುದಾನ ಬಳಸಿ ಪ್ರತ್ಯೇಕ ಜನಗಣತಿ ನಡೆಸಿ

• ಉದಯವಾಹಿನಿ, ಬೆಂಗಳೂರು

SCSP/TSP ಅನುದಾನಗಳನ್ನು ಬಳಸಿಕೊಂಡು ತಮ್ಮ ಸಮುದಾಯದ ಜನಗಣತಿ ನಡೆಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪರಿಶಿಷ್ಟ ಜಾತಿಯ ಸಚಿವರು ಹಾಗೂ ನಾಯಕರು ಆಗ್ರಹಿಸಿದ್ದಾರೆ. ಕೆಲ ದಿನಗಳ ಹಿಂದಷ್ಟೇ ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಅವರ ನಿವಾಸದಲ್ಲಿ ನಾಯಕರು ಸಭೆ ನಡೆಸಿದರು, ಸೋಮವಾರ ಸಂಜೆ ಮತ್ತೊಂದು ಸಭೆ ನಡೆಯುವ ಸಾಧ್ಯತೆ ಇದ್ದು, ನಂತರ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ, ಮನವಿ ಸಲ್ಲಿಸಲು ನಿರ್ಧರಿಸಿದ್ದಾರೆಂದು ಮೂಲಗಳು ತಿಳಿಸಿವೆ. ಗೃಹ ಸಚಿವ ಡಾ. ಜಿ. ಪರಮೇಶ್ವರ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಮತ್ತು ಹಿಂದುಳಿದ ವರ್ಗಗಳ ಸಚಿವ ಶಿವರಾಜ್ ತಂಗಡಗಿ ಸೇರಿದಂತೆ ಇತರರು ಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಸರ್ಕಾರಿ ಉದ್ಯೋಗ ಗಳಲ್ಲಿ ಮೀಸಲಾತಿ ನೀಡಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳನ್ನು ಉಪವರ್ಗೀಕರಿಸುವ ಹಕ್ಕು ರಾಜ್ಯಗಳಿಗಿದೆ ಎಂದು ಸುಪ್ರೀಂಕೋರ್ಟ್ ಈ ಹಿಂದೆ ತೀರ್ಪು ನೀಡಿತ್ತು.

ಅತಿ ಕಾಮ ಮನುಷ್ಯನ ಶ್ರೇಯಸ್ಸಿಗೆ ಪೂರಕವಲ್ಲ: ಬಂಜಗೆರೆ ಜಯಪ್ರಕಾಶ್

ಪುರುಷೋತ್ತಮ ದಾಸ್ ಹೆಗ್ಗಡೆ ರಚಿತ ಯಯಾತಿ ಕಾದಂಬರಿಯನ್ನು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಕಾಮ ಎನ್ನುವುದು ಚಿವಿಂಗ್ ಗಮ್ ರೀತಿ. ಮೊದಲು ಜಿಗಿಯುವಾಗ ಚೆನ್ನಾಗಿರುತ್ತದೆ. ಅದೇ ರೀತಿ ಅತಿ ಕಾಮ ಅತಿರೇಖವಾದದ್ದು, ಇದು ಮನಷ್ಯನ ಶ್ರೇಯಸ್ಸಿಗೆ ಪೂರಕವಲ್ಲ ಎಂದು ಲೇಖಕ, ಸಂಸ್ಕೃತಿ ಚಿಂತಕ ಬಂಜಗೆರೆ ಜಯಪ್ರಕಾಶ್ ಹೇಳಿದ್ದಾರೆ.

ಪುರುಷೋತ್ತಮ ದಾಸ್ ಹೆಗ್ಗಡೆ ರಚಿತ ''ಯಯಾತಿ'' ಕಾದಂಬರಿಯನ್ನು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಬಿಡುಗಡೆ ಮಾಡಿ ಮಾತನಾಡಿದ ಅವರು, ಎಲ್ಲಿ ಸಾಮರಸ್ಯದ ದಾಂಪತ್ಯ ಇರುವುದಿಲ್ಲವೋ ಅಲ್ಲಿ ಸಂಸಾರ ದೀರ್ಘಕಾಲ ನಡೆಯುವುದಿಲ್ಲ, ಹೆಣ್ಣು ಗಂಡು ನಡುವಿನ ಪ್ರೇಮ ಮೊದಲಿಗೆ ಆಕರ್ಷಣೆಯಾದರೂ ಕ್ರಮೇಣ ಗೌರವ, ಪರಸ್ಪರ ವಿಶ್ವಾಸ ಮೂಡುವಂತಾಗಬೇಕು. ಆರೈಕೆಯ ಭಾವನೆಯ ಜೊತೆಗೆ ಸಂಬಂಧ ಮಾಗುತ್ತಾ ಮಾಗುತ್ತಾ ಪ್ರೌಢವಾಗುತ್ತಾ ಸಾಗಬೇಕು. ಇಲ್ಲವಾದಲ್ಲಿ ಒಲುಮೆಗಿಂತ ಸಂಘರ್ಷ ಜಾಸ್ತಿಯಾಗುತ್ತದೆ ಎಂದರು.

ಎಲ್ಲಾ ಕಾಲದಲ್ಲೂ ಮನುಷ್ಯನಿಗೆ ಮೂರು ಅಭೀಪ್ಸೆಗಳು ಇರುತ್ತವೆ. ನನಗೆ ಮುಪ್ಪು ಬರಬಾರದು ಎನ್ನುವುದು. ಯೋಗ ಶಾಸ್ತ್ರವೂ ಕೂಡ ದೇಹವನ್ನು ವಜ್ರಕಾಯ ಮಾಡಿಕೊಳ್ಳುವ ಸಿದ್ಧಿ ವಿದ್ಯೆಯಾಗಿದೆ. ಚಿರ ಯುವಕನಾಗಿರಬೇಕು ಎಂದು ಬಯಸುವುದು ಸಹಜ. ಎರಡನೆಯದು ಕಾಮ. ಅತಿ ಕಾಮ ನಪುಂಸಕತ್ವಕ್ಕೂ ಕಾರಣವಾಗುತ್ತದೆ. ಆದರೆ ಮಾಂಸಹಾರಿಗಳು

ಉದಯವಾಹಿನಿ ಚಿತ್ರ

ಪ್ರಾಣಿಗಳ ವೃಷಣಗಳನ್ನೂ, ಸಸ್ಯಹಾರಿಗಳು ನುಗ್ಗೆ ಕಾಯಿಯನ್ನೂ ತಿಂದರೆ ಕಾಮ ಉತ್ತೇಜನವಾಗುತ್ತದೆ ಎನ್ನುವ ನಂಬಿಕೆ ಇದೆ. ಕಾಮ ಎನ್ನುವುದು ಸ್ಪರ್ಧೆಯಲ್ಲ, ದೇಹದ ಮೂಲಕ ಆಡುವ ಆಟವೂ ಅಲ್ಲ. ಪರಸ್ಪರ ಒಲಿದು, ನಿಲಿದು ನಡೆಸುವ ಅನುಭೂತಿ. ಸಾಂಸರಿಕ ಜೀವನದ ಹೊರಗಡೆ ನಡೆಯುವ ಇಂತಹ ಕ್ರಿಯೆಗಳಿಗೆ ಯಯಾತಿ ಕಥೆ ಪ್ರಸ್ತುತವಾಗುತ್ತದೆ ಎಂದರು.

ಬಂಜಗೆರೆ ಜಯಪ್ರಕಾಶ್ ಹೇಳಿಕೆ

ಕಾಮ ಮನುಷ್ಯನ ಹಂಬಲ ಹೆಚ್ಚಿಸುತ್ತದೆ. ನಾವು ಯೌವ್ವನವನ್ನು ಬೇಗ ಆಹ್ವಾನಿಸುತ್ತೇವೆ. ಆದರೆ ಮುಪ್ಪನ್ನು ಬೇಗ ಒಪ್ಪಿಕೊಳ್ಳುವುದಿಲ್ಲ. ಇದು ಮನುಷ್ಯನ ಮನೋರೋಗ. ಯಯಾತಿಯನ್ನು ಲೇಖಕರು ಹೊಸದಾಗಿ ಕಟ್ಟಿಕೊಟ್ಟಿದ್ದಾರೆ. ಕಾಮವನ್ನೇ ಗೆದ್ದ ಯತಿ ಇದ್ದಾನೆ, ಕಾಮವನ್ನೇ ಸದಾ ಬಯಸುವ ಯಯಾತಿ ಇದ್ದಾನೆ ಎಂದು ತಿಳಿಸಿದರು. ನಿಮ್ಹಾನ್ಸ್‌ನ ಮಾನಸಿಕ ಚಿಕಿತ್ಸಾ ವಿಭಾಗದ ಪ್ರಾಧ್ಯಾಪಕರಾದ ಡಾ. ಎಂ. ಮಂಜುಳಾ ಮಾತನಾಡಿ, ಮನೋವಿಜ್ಞಾನದ ಸಿದ್ಧಾಂತಗಳನ್ನು ಯಯಾತಿ ಕಥೆಯಲ್ಲಿ ಸೂಕ್ತ ರೀತಿಯಲ್ಲಿ ಅಡಕಗೊಳಿಸಲಾಗಿದೆ. ನಾನಾ ಆಯಾಮಗಳಲ್ಲಿ ಲೇಖಕರು ಮಾನಸಿಕ ಸ್ಥಿತಿಗತಿಗಳನ್ನು ವಿಶ್ಲೇಷಣೆ ಮಾಡಿದ್ದಾರೆ. ಕಥಾ ವಸ್ತುವಿನಲ್ಲಿ ಮಾನವೀಕರಣವನ್ನು ಕಾಣಬಹುದಾಗಿದೆ. ಇಷ್ಟವಾಗದ ವಿಷಯಗಳ ವಿಚಾರದಲ್ಲಿ ಸಿಗ್ಮಂಡ್ ಫ್ರಾಯ್ಡ್‌ನ ಸಿದ್ಧಾಂತಗಳನ್ನು ಸಹ ಅನಾರಣಗೊಳಿಸಲಾಗಿದೆ. ನಮ್ಮನ್ನು ನಾವು ರಕ್ಷಿಸಿಕೊಳ್ಳುವ ರಕ್ಷಣಾ ವಿಧಾನಗಳಿಗೂ ಇಲ್ಲಿ ಒತ್ತು ನೀಡಲಾಗಿದೆ ಎಂದರು. ಕಾದಂಬರಿಕಾರ ಪುರುಷೋತ್ತಮ ದಾಸ್ ಹೆಗ್ಗಡೆ ಮಾತನಾಡಿ, ಮನುಷ್ಯನಿಗೆ ಸಾವಿನ ಬಗ್ಗೆ ಅತಿ ಹೆಚ್ಚು ಭಯವಿದ್ದು, ಇತ್ತೀಚೆಗೆ ಈ ಕುರಿತು 3 ಲಕ್ಷಕ್ಕೂ ಅಧಿಕ ಲೇಖನಗಳು, ಸಂಶೋಧನಾ ಪ್ರಬಂಧಗಳು ಪ್ರಕಟವಾಗಿವೆ. ಮನುಷ್ಯನ ಚಿರ ಯೌವನ ಕಾಪಾಡಲು 700ಕ್ಕೂ ಅಧಿಕ ನವೋದ್ಯಮ ಕಂಪೆನಿಗಳು ಜಗತ್ತಿನಾದ್ಯಂತ ಕಾರ್ಯನಿರ್ವಹಿಸುತ್ತಿವೆ. ಪ್ರೋಟಿನ್‌ಗಳ ಮೂಲಕ ಯೌವ್ವನವನ್ನು ಕಾಪಿಟ್ಟುಕೊಳ್ಳುವ, ಮಕ್ಕಳು, ಮೊಮ್ಮಕ್ಕಳ ರಕ್ತ, ಪ್ಲೇಟ್ಲೇಟ್ ಗಳನ್ನು ವರ್ಗಾಯಿಸಿಕೊಂಡು ಯೌವನ ಉಳಿಸಿಕೊಳ್ಳುವ ಕೆಲಸ ನಡೆಯುತ್ತಿದೆ. ಇಂತಹ ವ್ಯಕ್ತಿತ್ವದವರನ್ನು ಯಯಾತಿ ಸಿಂಡ್ರೋಮ್ ಗಳು ಎನ್ನಲಾಗುತ್ತದೆ.

> ನಾವು ಸುಳ್ಳನ್ನೇ ಪದೇ ಪದೇ ಹೇಳಿ ಸತ್ಯ ಮಾಡುವ ಸತ್ಯೋತ್ತರ ಕಾಲದಲ್ಲಿದ್ದು, ಈಗಲೂ ನಮ್ಮ ಮುಂದೆ ಯಯಾತಿಗಳಿದ್ದಾರೆ. 20 ನೇ ಶತಮಾನದಲ್ಲಿ ಚೀನಾದ ನಾಯಕ ಮಾವೋ ಇದೇ ಗುಂಪಿಗೆ ಸೇರಿದವನು. 19 ನೇ ಶತಮಾನದಲ್ಲಿ ಮಹಾತ್ಮಾಗಾಂಧೀಜಿ ಹೆಣ್ಣು ಮಕ್ಕಳ ಜೊತೆ ಮಲಗಿ ಕಾಮ ನಿಯಂತ್ರಣದ ಬಗ್ಗೆ ಪ್ರಯೋಗ ಮಾಡಿ ಜಗತ್ತಿಗೆ ಮಾದರಿಯಾದರು. ಪ್ರಯೋಗಕ್ಕೆ ಒಳಗಾದ ಹೆಣ್ಣು ಮಕ್ಕಳು ಗಾಂಧೀಜಿಯನ್ನು ತಂದೆ ತಾಯಿಯಂತೆ ಅಕ್ಕರೆಯಿಂದ ಕಂಡರೆ, ಮಾವೋ ಜೊತೆ ಬೇರೆಯದೇ ಅನುಭವವಿತ್ತು. ಗಾಂಧೀಜಿ ಕೊಠಡಿ ಬಾಗಿಲು ಸದಾ ತೆರೆದಿರುತ್ತಿತ್ತು. ಆದರೆ ಮಾವೋ ಬಾಗಿಲು ಸದಾ ಮುಚ್ಚಿರುತ್ತಿತ್ತು. ಇಂತಹ ಹತ್ತು ಹಲವು ಪಾತ್ರಗಳು ನಮ್ಮ ಮುಂದೆ ಹಾದುಹೋಗುತ್ತವೆ. ಪೌರಾಣಿಕ ಕಥಾ ಹಂದರ ನಮಗೆ ನೈತಿಕ ಶಿಕ್ಷಣ ನೀಡುತ್ತದೆ ಎಂದು ಹೇಳಿದರು.
>
> -ವಿಮರ್ಶಕ ಎಚ್. ದಂಡಪ್ಪ

ಈ ವಲಯದಲ್ಲಿರುವವರನ್ನು ಅಮರತ್ವದ ವ್ಯಾಪಾರಿಗಳು ಎಂದು ಕರೆಯಲಾಗುತ್ತದೆ. ಹೀಗಾಗಿ ಯಯಾತಿಗಳು ನಮ್ಮ ಮುಂದೆ ಈಗಲೂ ಇದ್ದಾರೆ ಎಂದರು.

ಹಾಲಿನ ದರ ಏರಿಕೆಗೆ ಹೋಟೆಲ್ ಸಂಘಗಳ ವಿರೋಧ

• ಉದಯವಾಹಿನಿ, ಬೆಂಗಳೂರು

ನಂದಿನಿ ಹಾಲು ದರ ಏರಿಕೆ ಪ್ರಸ್ತಾಪಕ್ಕೆ ಕರ್ನಾಟಕ ರಾಜ್ಯ ಹೋಟೆಲ್‌ಗಳ ಸಂಘ ಭಾರಿ ವಿರೋಧ ವ್ಯಕ್ತಪಡಿಸಿದೆ.

ಈ ಸಂಬಂಧ ರಾಜ್ಯ ಸರಕಾರ ಹಾಗೂ ಕರ್ನಾಟಕ ಹಾಲು ಮಹಾಮಂಡಳಗಳಿಗೆ ಪತ್ರ ಬರೆದಿರುವ ಸಂಘದ ಅಧ್ಯಕ್ಷ ಜಿ.ಕೆ ಶೆಟ್ಟಿ, ಒಂದೊಮೆ ದರ ಹೆಚ್ಚಳ ಮಾಡಿದರೆ ಹೋಟೆಲ್ ಉದ್ಯಮದ ಮೇಲೆ ಅದು ದೊಡ್ಡ ಮಟ್ಟದ ನಕಾರಾತಕ ಪರಿಣಾಮ ಬೀರಲಿದೆ ಎಂಬ ಕಳವಳ ವ್ಯಕ್ತಪಡಿಸಿದ್ದಾರೆ.

ಕಾಫಿ ಪುಡಿ ದರ ಆಕಾಶಕ್ಕೇರಿದೆ. ಈಗ ಹಾಲಿನ ಬೆಲೆ ಹೆಚ್ಚಳಗೊಂಡರೆ ಚಹಾ, ಕಾಫಿ ಯಂತಹ ನಾನಾ ಬಿಸಿ ಪಾನೀಯಗಳ ಬೆಲೆ ಏರಿಕೆ ಹೋಟೆಲ್ ಮಾಲೀಕರಿಗೆ ಅನಿವಾರ್ಯ

ಉದಯವಾಹಿನಿ ಚಿತ್ರ

ವಾಗಲಿದೆ. ಇದು ರಾಜ್ಯದಲ್ಲಿ ಲಕ್ಷಾಂತರ ಕುಟುಂಬಗಳಿಗೆ ಜೀವನಾಧಾರವಾಗಿರುವ ಹಾಗು ಸರಕಾರ ಹಾಗು ಸ್ಥಳೀಯ ಸಂಸ್ಥೆಗಳಿಗೆ ದೊಡ್ಡ ಮಟ್ಟದ ತೆರಿಗೆ ಮೂಲವಾಗಿರುವ ಹೋಟೆಲ್ ಉದ್ಯಮ ಕ್ಷೇತ್ರಕ್ಕೆ ಕಂಟಕ ಪ್ರಾಯವಾಗುವ ಸಾಧ್ಯತೆ ಇದೆ ಎಂದು ಅವರು ಹೇಳಿದ್ದಾರೆ. ಹೋಟೆಲ್‌ಗಳು ತಮ ಗ್ರಾಹಕರಿಗೆ ಆಹಾರ ಸುರಕ್ಷತಾ ನೀತಿಗೆ ಅನುಗುಣವಾಗಿ ಎಲ್ಲ ಶುಚಿತ್ವ ಹಾಗು ಗುಣಮಟ್ಟದ ನೀತಿಗಳನ್ನು ಅನುಸರಿಸುತ್ತಾ ಗುಣಮಟ್ಟದ ಚಹಾ, ಕಾಫಿ, ಹಾಗು ಇತರ ಪಾನೀಯಗಳನ್ನು ಒದಗಿಸುತ್ತವೆ. ಹಾಲಿನ ದರ ಹೆಚ್ಚಳಗೊಂಡರೆ, ಇವುಗಳ ಬೆಲೆ ಏರಿಕೆ ಅನಿವಾರ್ಯವಾಗಲಿದೆ. ಆದರೆ ಕೆಲವರು ಸುರಕ್ಷತಾ ಮಾನದಂಡ ಗಳನ್ನು ಅನುಸರಿಸದೆ ಮಾರಾಟ ಮಾಡಲಾಗುವ ಚಹಾ, ಕಾಫಿ ಸೇವನೆ ಆರಂಭಿಸಬಹುದು. ಇದು ಸಾರ್ವಜನಿಕ ಆರೋಗ್ಯದ ಮೇಲೆ ದೊಡ್ಡ ಮಟ್ಟದ ಪ್ರತಿಕೂಲ ಪರಿಣಾಮ ಬೀರಬಹುದು ಎಂದು ಜಿ.ಕೆ ಶೆಟ್ಟಿ ಅವರು ಎಚ್ಚರಿಸಿದ್ದಾರೆ. ಸರಕಾರ ಸಾರ್ವಜನಿಕ ಆರೋಗ್ಯ ಮತ್ತು ಹೋಟೆಲ್ ಉದ್ಯಮದ ಹಿತಾಸಕ್ತಿಗಮನದಲ್ಲಿಟ್ಟುಕೊಂಡು, ಹಾಲಿನ ಬೆಲೆ ಏರಿಕೆ ಪ್ರಸ್ತಾಪವನ್ನು ತಕ್ಷಣ ಕೈ ಬಿಡುವಂತೆ ಅವರು ಆಗ್ರಹಿಸಿದ್ದಾರೆ

ಐಕ್ಯೂಎಸಿ ಸಹಯೋಗದೊಂದಿಗೆ ವಿಶೇಷ ಉಪನ್ಯಾಸ

• ಉದಯವಾಹಿನಿ, ಪಾಂಡವಪುರ

ಕರ್ನಾಟಕ ಸರ್ಕಾರ ಕಾಲೇಜು ಶಿಕ್ಷಣ ಇಲಾಖೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪಾಂಡವಪುರ ಇಲ್ಲಿ ಭೂಗೋಳಶಾಸ್ತ್ರ ವಿಭಾಗ, ಐಕ್ಯೂಎಸಿ ಘಟಕದ ಸಹಯೋಗದೊಂದಿಗೆ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಭೌಗೋಳಿಕ ಮಾಹಿತಿ ವ್ಯವಸ್ಥೆ ಮತ್ತು ಅದರ ಅನ್ವಯಿಕಗಳು ಎಂಬ ವಿಷಯದ ಮೇಲೆ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಮಧುಸೂದನ್ ಹೆಚ್ ಎಸ್ ರವರು ವಹಿಸಿಕೊಂಡಿದ್ದರು ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಡಾ. ಹನುಮಂತರಾಜು ಆರ್, ಸಹಾಯಕ ಪ್ರಾಧ್ಯಾಪಕರು, ಭೂಗೋಳಶಾಸ್ತ್ರ ವಿಭಾಗ ದ ರೂರಲ್ ಕಾಲೇಜ್ ಕನಕಪುರ ಇವರು ಆಗಮಿಸಿದ್ದರು. ಇವರು ಭೌಗೋಳಿಕ ಮಾಹಿತಿ ವ್ಯವಸ್ಥೆ ಮತ್ತು ಅದರ ಅನ್ವಯಿಕ ಕ್ಷೇತ್ರಗಳು ಹಾಗೂ ಬಿ.ಎ ನಂತರದಲ್ಲಿ ಸ್ನಾತಕೋತ್ತರ ಪದವಿಯಲ್ಲಿನ ವಿಷಯದ ಆಯ್ಕೆಯ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಸುಧೀರ್ಘಕಾಲ ನಡೆಸಿಕೊಟ್ಟರು.

ಉದಯವಾಹಿನಿ ಚಿತ್ರ

ಕಾರ್ಯಕ್ರಮದ ನಿರೂಪಣೆಯನ್ನು ಅಂತಿಮ ಬಿ.ಎ ವಿದ್ಯಾರ್ಥಿಗಳು ಅವರು ನಡೆಸಿಕೊಟ್ಟರು ಸ್ವಾಗತವನ್ನು ಭೂಮಿಕ, ಅತಿಥಿಗಳ ಪರಿಚಯವನ್ನು ಪ್ರಜ್ವಲ್, ವಂದನಾರ್ಪಣೆಯನ್ನು ಸಂಜನಾರವರು ನೆರವೇರಿಸಿಕೊಟ್ಟರು. ವಿಭಾಗದ ಮುಖ್ಯಸ್ಥರಾದ ಡಾ. ದೀಪು ಬಿ.ಪಿ, ವಿನೋದ ಟಿ ಪಿ, ಹಾಗೂ ಕಾಲೇಜಿನ ಇತರ ವಿಭಾಗದ ಮುಖ್ಯಸ್ಥರು ಹಾಗೂ ಅಧ್ಯಾಪಕ ವೃಂದದವರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಅನ್ಯಾಯದ ವಿರುದ್ಧ ಪ್ರಶ್ನೆ ಮಾಡಿ

• ಉದಯವಾಹಿನಿ, ಕೋಲಾರ

ಮಹಿಳೆಯರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸಬಲರಾಗಬೇಕಾದರೆ ಕಡ್ಡಾಯವಾಗಿ ಶಿಕ್ಷಣ ನೀಡಬೇಕು. ಘನತೆಯುಕ್ತ ಬದುಕು ಹಕ್ಕು ಆಗಬೇಕು. ಜೊತೆಗೆ ಅನ್ಯಾಯದ ವಿರುದ್ಧ ಪ್ರಶ್ನೆ ಮಾಡುವ ಮನಸ್ಥಿತಿ ಎಲ್ಲಾ ಮಹಿಳೆಯರಲ್ಲಿ ಬರಬೇಕಾಗಿದೆ ಎಂದು ಜನವಾದಿ ಮಹಿಳಾ ಸಂಘಟನೆಯ ರಾಜ್ಯ ಉಪಾಧ್ಯಕ್ಷೆ ಗೌರಮ್ಮ ತಿಳಿಸಿದರು ನಗರದ ಪತ್ರಕರ್ತರ ಭವನದಲ್ಲಿ ಸಿಐಟಿಯು ನೇತೃತ್ವದ ದುಡಿಯುವ ಮಹಿಳೆಯರ ಸಮನ್ವಯ ಸಮಿತಿಯಿಂದ 17ನೇ ವರ್ಷದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಭ್ರೂಣ ಹತ್ಯೆಗಳು, ಮಾರ್ಯಾದೆಗೇಡು ಹತ್ಯೆಗಳಿಗೆ ಕಠಿಣ ಶಿಕ್ಷೆ ಆಗಬೇಕು. ಸಭೆ ಸಮಾರಂಭಗಳಲ್ಲಿ ಮಹಿಳೆಯರಿಗೆ ಗೌರವಿಸಿದರೆ ಸಾಲದು; ಅವರ ಬದುಕಿಗೆ ದಾರಿಯಾಗಿರಲು ಆರ್ಥಿಕವಾಗಿ ಬೆಂಬಲಿಸಬೇಕು. 8 ಗಂಟೆ ದುಡಿಮೆ ಬದಲಿಗೆ 12 ಗಂಟೆ ಮಾಡುವುದನ್ನು ಎಲ್ಲಾ ಮಹಿಳೆಯರು ವಿರೋಧಿಸಬೇಕು' ಎಂದು ತಿಳಿಸಿದರು.

ಉದಯವಾಹಿನಿ ಚಿತ್ರ

ಮಹಿಳೆಯರ ಮೇಲೆ ನಿರಂತರ ದೌರ್ಜನ್ಯ, ಶೋಷಣೆ ನಡೆಯುತ್ತಲೇ ಇದೆ. ಅಂಕಿ ಅಂಶಗಳ ಪ್ರಕಾರ ದೂರು ದಾಖಲಾದರೂ ಶಿಕ್ಷೆ ಮಾತ್ರ ಕಡಿಮೆ. ಹೆಚ್ಚು ಘಟನೆಗಳು ನಡೆಯುತ್ತಿವೆ. ರಾಜಕೀಯ ರಂಗದಲ್ಲಿ ಮಹಿಳೆ ಪ್ರಮುಖ ಪಾತ್ರವಹಿಸಬೇಕು. ಮಹಿಳಾ ಮೀಸಲಾತಿಗೆ ನಿರಂತರ ಶ್ರಮಿಸಬೇಕು ಎಂದರು.

ಕ್ಷೇತ್ರಗಳ ಪುನರ್ ವಿಂಗಡಣೆ: ಕೇಂದ್ರದಿಂದ ಅರ್ಧ ಸತ್ಯ

ಕೇಂದ್ರ ಸರ್ಕಾರ ಅನುಸರಿಸುತ್ತಿರುವ ನೀತಿಯೂ ಒಕ್ಕೂಟ ವ್ಯವಸ್ಥೆಗೆ ಧಕ್ಕೆ

• ಉದಯವಾಹಿನಿ, ಮೈಸೂರು

ಲೋಕಸಭೆ ಕ್ಷೇತ್ರಗಳ ಪುನರ್ ವಿಂಗಡಣೆಯ ವಿಚಾರವಾಗಿ ಕೇಂದ್ರ ಸರ್ಕಾರ ಕೇವಲ ಅರ್ಧ ಸತ್ಯ ಮಾತ್ರ ಹೇಳುತ್ತಿದೆ ಎಂದು ಎಐಸಿಸಿ ರಾಷ್ಟ್ರೀಯ ವಕ್ತಾರ ಹಾಗೂ ಹಿರಿಯ ವಕೀಲ ಅಭಿಷೇಕ್ ಮನು ಸಿಂಗ್ ಆರೋಪ ಮಾಡಿದರು.

ರಾಷ್ಟ್ರೀಯತೆಗೆ ಒಂದು

ರಾಷ್ಟ್ರೀಯತೆ ವಿಚಾರ ಬಂದಾಗ ನಾವು ಪಕ್ಷ ಬೇಧ ಮರೆತು ಒಂದೂಗೂಡಿ ಒಗ್ಗಟ್ಟು ಪ್ರದರ್ಶನ ಮಾಡುತ್ತೇವೆ. ಆದರೆ ಪ್ರಚಾರ ಕೋಸ್ಕರ, ಕೇವಲ ಒಂದು ಫೋಟೋ ಗೋಸ್ಕರ ನಡೆಯುವ ಘಟನೆಗಳನ್ನು ಖಂಡಿಸುತ್ತೇವೆ ಎಂದು ಸಿಂಗ್ ಅವರು ಅಮೇರಿಕಾದ ಸುಂಕ ಹೆಚ್ಚಳ ವಿಚಾರವಾಗಿ ಪ್ರತಿಕ್ರಿಯೆ ನೀಡಿದರು.

ನಗರದ ಇಂದಿರಾ ಕಾಂಗ್ರೇಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರ ಪುನರ್ ವಿಂಗಡಣೆ ಕುರಿತು ಯಾವ ಪಕ್ಷಗಳ ಸಭೆಯನ್ನು ಕರೆದಿಲ್ಲ. ಭಾಗಿದಾರರ ಜತೆ ಮಾತುಕತೆ ನಡೆಸಿಲ್ಲ. ತಾವೇ ಮೂವರು ಕುಳಿತುಕೊಂಡು ನಿರ್ಣಯ ಮಾಡಿಕೊಂಡು ವಿಂಗಡಣೆ ಕಾರ್ಯಕ್ಕೆ ಮುಂದಾಗಿದ್ದಾರೆ. ಕ್ಷೇತ್ರ ಪುನರ್ ವಿಂಗಡಣೆ ಮಾಡುತ್ತೇವೆ. ಆದರೆ ಸಂಖ್ಯೆ ಹೆಚ್ಚಳವಾಗುವುದಿಲ್ಲ ಎನ್ನುತ್ತಾರೆ. ಸಂಖ್ಯೆ ಹೆಚ್ಚಳವಾಗುವುದಿಲ್ಲ ಎಂದರೆ ಒಬ್ಬರಿಂದ ಕಿತ್ತು ಮತ್ತೊಬ್ಬರಿಗೆ ನೀಡಬೇಕು. ಅಲ್ಲದೇ ಉತ್ತರ ಭಾರತದ ರಾಜ್ಯಗಳಲ್ಲಿ ಕ್ಷೇತ್ರಗಳು ಹೆಚ್ಚಳವಾಗುವ ಬಗ್ಗೆ ಕೇಂದ್ರದ ಗೃಹ ಸಚಿವ ಅಮಿತ್ ಶಾ ಮೌನವಾಗಿದ್ದಾರೆ ಎಂದು ಅವರು ತಿಳಿಸಿದರು.

ಉದಯವಾಹಿನಿ ಚಿತ್ರ

ಅಮಿತ್ ಶಾ ಮೌನ

ಕ್ಷೇತ್ರ ಪುನರ್ ವಿಂಗಡಣೆ ವಿಚಾರವಾಗಿ ಕೇಂದ್ರ ಸರ್ಕಾರ ಅನುಸರಿಸುತ್ತಿರುವ ನೀತಿಯೂ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರಲಿದೆ. ಕರ್ನಾಟದಲ್ಲಿ ಮುಖ್ಯ ಮಂತ್ರಿಯಾಗಿದ್ದ ಎಸ್.ಆರ್.ಬೊಮ್ಮಾಯಿ ಪ್ರಕರಣದಲ್ಲಿ ಒಕ್ಕೂಟ ವ್ಯವಸ್ಥೆ ಬಗ್ಗೆ ಸುಪ್ರೀಂ ಕೋರ್ಟ್ ನೀಡಿದ ತೀರ್ಪಿಗೆ ವ್ಯತಿರಿಕ್ತವಾಗಿ ಕ್ಷೇತ್ರ ಪುನರ್ ವಿಂಗಡಣೆ ನಡೆಯುತ್ತಿದೆ ಎಂದು ದೂರಿದರು.

ಇವಿಎಂ ತಕರಾರು ಇಲ್ಲ: ವಿದ್ಯುನ್ಮಾನ ಮತ ಯಂತ್ರಗಳ (ಇವಿಎಂ) ಬಗ್ಗೆ ನಮ್ಮದೇನೂ ತಕರಾರು ಇಲ್ಲ. ಆದರೆ ಚುನಾವಣೆ ಪ್ರಕ್ರಿಯೆಯಲ್ಲಿ ಅವುಗಳು ಬಳಕೆಯಾಗುತ್ತಿರುವ ಬಗ್ಗೆ ಮಾತ್ರ ತಕರಾರು ಇದೆ. ಲಕ್ಷಾಂತರ ಯಂತ್ರಗಳಲ್ಲಿ ಕೇವಲ ಶೇ.15ರಷ್ಟು, ಶೇ.23ರಷ್ಟು ಮಾತ್ರ ಪರಿಶೀಲನೆ ಮಾಡುತ್ತೇವೆ ಎನ್ನುತ್ತಾರೆ. ಆದರೆ ಉಳಿದ ಯಂತ್ರಗಳನ್ನು ಏಕೆ ಪರಿಶೀಲನೆ ಮಾಡಬಾರದು ಎನ್ನುವುದು ನಮ್ಮ ಪ್ರಶ್ನೆಯಾಗಿದೆ. ಮಹಾರಾಷ್ಟ್ರದಲ್ಲಿ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಯ ನಡುವಿನ ಅಂತರದಲ್ಲಿ ಸುಮಾರು 43 ಲಕ್ಷ ಮತಗಳು ಹೆಚ್ಚಾಗಿವೆ. ಇಂತಹ ಘಟನೆಗಳು ಅನುಮಾನಕ್ಕೆ ದಾರಿ ಮಾಡಿಕೊಡುತ್ತವೆ ಎಂದು ತಮ್ಮ ನಡೆಯನ್ನು ಸ್ಪಷ್ಟಪಡಿಸಿದರು.

ಕರ್ನಾಟಕದಲ್ಲಿ ಉತ್ತಮ ಆಡಳಿತ

ಕರ್ನಾಟಕ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೇಸ್ ಸರ್ಕಾರವು ಉತ್ತಮವಾದ ಆಡಳಿತವನ್ನು ನೀಡುತ್ತಿದೆ. ಕಾಂಗ್ರೇಸ್‌ನ ತತ್ವ -ಸಿದ್ಧಾಂತಗಳಿಗೆ ಅನುಸಾರವಾಗಿ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಸವಣ್ಣನ ಕಾಯಕತತ್ವದ ಆಶಯದಂತೆ ನಡೆಯುತ್ತಿದೆ ಎಂದು ರಾಜ್ಯ ಸರ್ಕಾರವನ್ನು ಬಣ್ಣಿಸಿದ ಸಿಂಗ್, ಅಧಿಕಾರದ ಹಂಚಿಕೆಗಾಗಿ ರಾಜ್ಯದಲ್ಲಿ ಕಿತ್ತಾಟ ನಡೆಯುತ್ತಿದೆ ಎಂದು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತ, ಇದೆಲ್ಲ ಮಾಧ್ಯಮದ ಸೃಷ್ಟಿಯಾಗಿದೆ. ವಿಷಯಕ್ಕೆ ಮಸಾಲೆ ಹಾಕಿ ತೋರಿಸಲಾಗುತ್ತದೆ. ರಾಜ್ಯದಲ್ಲಿ ಅಂತಹ ಯಾವುದೇ ಕಿತ್ತಾಟವಿಲ್ಲ. ಅದು ಅಲ್ಲದೇ ಈ ವಿಚಾರ ನಮ್ಮ ವ್ಯಾಪ್ತಿಯನ್ನು ಮೀರಿದ್ದು, ಇದನ್ನೆಲ್ಲ ದೊಡ್ಡವರು ನೋಡಿಕೊಳ್ಳುತ್ತಾರೆ ಎಂದರು.

ಅವೈಜ್ಞಾನಿಕ ಅರೆಬರೆ ಹೂಳು ತೆಗೆಯುವ ಕಾಮಗಾರಿ

ಹನೂರು: ಕಬಿನಿ ಕಾಲುವೆಯಲ್ಲಿ ಅವೈಜ್ಞಾನಿಕ ಅರೆಬರೆ ಹೂಳು ತೆಗೆದಿರುವುದಕ್ಕೆ ನೀರು ಹರಿಬಿಟ್ಟು ಕಬಿನಿ ಇಲಾಖೆಯ ಅಧಿಕಾರಿಗಳು ಗುತ್ತಿಗೆದಾರರು ಲಕ್ಷಾಂತರ ರೂ. ಹಣ ದುರುಪಯೋಗಮಾಡಿಕೊಳ್ಳುತ್ತಿದ್ದಾರೆ ಎಂದು ಸ್ಥಳೀಯ ಸಾರ್ವಜನಿಕರು ಆರೋಪ ಮಾಡಿದ್ದಾರೆ.

ಕೊಳ್ಳೇಗಾಲ ತಾಲ್ಲೂಕಿನ ಗುಂಡಾಲ್ ಜಲಾಶಯದ ಬಲದಂಡೆ ನಾಲೆಯು ಕಾಮಗೆರೆ ಗ್ರಾಮದ ಮೂಲಕ ಹಾದು ಹೋಗುವ ಕಾಲುವೆಯಲ್ಲಿ ಹೂಳು ತೆಗೆಯಲಾಗಿದೆ. ಮೇಲ್ನೋಟಕ್ಕೆ ಕಾಲುವೆಯಲ್ಲಿನ ಅರೆಬರೆ ಹೂಳು ತೆಗೆದು ನೀರು ಮುಂದೆ ಹರಿದು ಹೋಗಲು ದಾರಿ ಮಾಡಿ ಈ ತಕ್ಷಣದಿಂದಲೇ ನೀರನ್ನು ಹರಿಬಿಡಲಾಗಿದೆ. ಗುಂಡಾಲ್ ಜಲಾಶಯದ ಬಲದಂಡೆ ನಾಲೆಯ ಮೂಲಕ ಜಮೀನುಗಳಿಗೆ ಕೆರೆ ಕಟ್ಟೆಗಳಿಗೆ ನೀರು ಹರಿಬಿಡಲು ಕಬಿನಿ ಇಲಾಖೆಯ ಅಧಿಕಾರಿಗಳು ತರಾತುರಿಯಲ್ಲಿ ಹೂಳು ತೆಗೆಯುವ ಕೆಲಸ ಮಾಡಿದ್ದಾರೆ. ಆದರೆ ಗುತ್ತಿಗೆದಾರ ಜೆ.ಸಿ.ಬಿ ಯಂತ್ರದ ಮೂಲಕ ಅರೆಬರೆ ಹೂಳು ತೆಗೆದು ಹಾಕಲಾಗಿದೆ.

ಕಾಮಗೆರೆ ಗ್ರಾಮದ ಒಳಗೆ ಹಾದು ಹೋಗಿರುವ ಕಬಿನಿ ಕಾಲುವೆಯು ಬಹುತೇಕ ಮುಚ್ಚಿ ಹೋಗಿದ್ದು ಗಿಡ ಗಂಟಿಗಳು ಬೆಳೆದಿದೆ. ಆದರೆ ಕಬಿನಿ ಇಲಾಖೆಯ ಅಧಿಕಾರಿಗಳು ವರ್ಷಕ್ಕೆ ಮೂರು ನಾಲ್ಕು ಬಾರಿ ಕಾಲುವೆಯ ಹುಳು ತೆಗೆಯುವ ಕೆಲಸಕ್ಕಾಗಿ ಲಕ್ಷಾಂತರ ರೂ. ಅನುದಾನವನ್ನು ಬಳಕೆ ಮಾಡಿ ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಇತ್ತೀಚೆಗೆ ಮೂರ್ನಾಲ್ಕು ತಿಂಗಳ ಹಿಂದೆ ಕಾಲುವೆಯಲ್ಲಿ ಹೂಳು ತೆಗೆಯಲಾಗಿತ್ತು. ಅವಾಗಲೂ ಅರೆಬರೆ ಹೂಳುತೆಗೆಯುವ ಕೆಲಸ ಮಾಡಿದ್ದಾರೆ. ಇದರಿಂದ ಲಕ್ಷಾಂತರ ರೂ. ಹಣ ಕಬಿನಿ ಇಲಾಖೆಯ ಅಧಿಕಾರಿಗಳು ಗುತ್ತಿಗೆದಾರರ ಜೇಬು ಸೇರುತ್ತದೆ ಹೊರತು ಕಾಲುವೆಯಲ್ಲಿ ಹೂಳು ಮಾತ್ರ ಹಾಗೆ ಇರುತ್ತದೆ.

ಕಾಲುವೆಯಲ್ಲಿ ಪ್ರತಿ ಬಾರಿಯೂ ಜೆಸಿಬಿ ಯಂತ್ರದಿಂದ ಹೂಳು ತೆಗೆಯುವಾಗ ಕಾಲುವೆಯಲ್ಲಿನ ಮಣ್ಣನು ಹೊರಗೆ ತೆಗೆದು ಹಾಕದೆ. ಗಿಡಗಂಟಿಗಳು ಒಂದಿಷ್ಟು ಮಣ್ಣನ್ನು ತೆಗೆದು ಅಲ್ಲೇ ಅಕ್ಕ ಪಕ್ಕದಲ್ಲೇ ಹಾಕಿ ಮೇಲ್ನೋಟಕ್ಕೆ ಅಷ್ಟೇ ಕಾಲುವೆಯಲ್ಲಿ ಹೂಳು ತೆಗೆದಿರುವಂತೆ ಕಾಣುವ ಹಾಗೆ ಮಾಡುತ್ತಿರುವುದು ಪ್ರತ್ಯಕ್ಷವಾಗಿಯೇ ಕಂಡು ಬರುತ್ತದೆ. ಕಾಲುವೆಯಲ್ಲಿ ಅವೈಜ್ಞಾನಿಕ ಅರೆಬರೆ ಹೂಳುತೆಗೆದು ನೀರು ಹರಿಬಿಟ್ಟು ಹಣ ದುರ್ಬಳಕೆಯಾಗಿರುವ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳು. ಸನ್ಮಾನ್ಯ ಶಾಸಕರು ಇತ್ತ ಗಮನ ಹರಿಸಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ತಿಳಿಸಿದ್ದಾರೆ.

ಉದಯವಾಹಿನಿ ಚಿತ್ರ

ಕಾಮಗಾರಿಗೆ ಹಿಡಿದ ಕನ್ನಡಿ

ನಾಲೆಯಲ್ಲಿ ತೆಗೆಯುವ ಗಿಡಗಂಟಿಗಳು ಬೇರೆಡೆಗೆ ತೆಗೆದು ಹಾಕದೆ ಅಲ್ಲೇ ಹಾಕುವುದರಿಂದ. ಒಂದೆರಡು ದಿನ ಕಳೆದಂತೆ ಮತ್ತೆ ಎಲ್ಲಾ ಕಾಲುವೆಯೊಳಗೆ ಸೇರುತ್ತದೆ. ಇದರಿಂದ ಕಬಿನಿ ಇಲಾಖೆಯ ಅಧಿಕಾರಿಗಳು ಪದೇ ಪದೇ ಹುಳು ತೆಗೆಯುವ ನೆಪದಲ್ಲಿ ಲಕ್ಷಾಂತರ ರೂ. ಸರ್ಕಾರದ ಹಣ ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಅವೈಜ್ಞಾನಿಕ ಅರೆಬರೆ ಹೂಳು ತೆಗೆಯುವ ಕಾಮಗಾರಿಗೆ ಹಿಡಿದ ಕನ್ನಡಿಯಾಗಿದೆ.

ಪ್ರದೀಪ್ ಈಶ್ವರ್ ಮಾತು ಶೋಭೆ ತರಲ್ಲ

• ಉದಯವಾಹಿನಿ, ಶಿಡ್ಲಘಟ್ಟ

ಬೆಂಗಳೂರಿನಲ್ಲಿ ನಡೆದ ರಾಜ್ಯಮಟ್ಟದ ಶ್ರೀಯೋಗಿ ಕೈವಾರ ತಾತಯ್ಯ ಜಯಂತಿಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ಅವರು ಆಡಿದ ಮಾತು ಮತ್ತು ಮಾತಾಡಿದ ರೀತಿ ಅವರಿಗೆ ಶೋಭೆಯಲ್ಲ ಎಂದು ಬಿಜೆಪಿ ಮುಖಂಡ, ನಗರಸಭೆ ಸದಸ್ಯ ಎಸ್.ರಾಘವೇಂದ್ರ ಹೇಳಿದರು. ಸಮುದಾಯದ ಮುಖಂಡ ಪಿ.ಸಿ.ಮೋಹನ್ ಸೇರಿದಂತೆ ಹಲವರಿದ್ದ ವೇದಿಕೆಯಲ್ಲಿ ಪ್ರದೀಪ್ ಈಶ್ವರ್ ಅವರು ಆಡಿದ ಮಾತುಗಳು ನಮ್ಮೆಲ್ಲರಿಗೂ ತುಂಬಾ ನೋವಾಗಿದೆ.

ಕಾರ್ಯಕ್ರಮ ನಿಮ್ಮಪ್ಪಂದಲ್ಲ ಎನ್ನುವಂತ ಮಾತು ಮತ್ತು ಅದನ್ನು ಹೇಳಿದ ರೀತಿ ಖಂಡನೀಯ. ಅವರು ಈ ಕೂಡಲೆ ಕ್ಷಮೆಯಾಚಿಸಬೇಕೆಂದು ಭಾನುವಾರ ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಿದರು.

ಪಿ.ಸಿ.ಮೋಹನ್ ಅವರು ಅಧಿಕಾರದಲ್ಲಿದ್ದಾಗ ಮಾಡಿದ ಸಾಧನೆ, ಸಮುದಾಯಕ್ಕೆ ಮಾಡಿದ ಒಳಿತನ್ನು ಹೇಳಿಕೊಳ್ಳುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದ ಅವರು, 'ಪ್ರದೀಪ್ ಈಶ್ವರ್ ಅವರು ಕೂಡ ನಮ್ಮ ಸಮುದಾಯಕ್ಕೆ ಕೊಡುಗೆ ಕೊಟ್ಟು ಅವೆಲ್ಲವನ್ನು ವೇದಿಕೆಗಳಲ್ಲಿ ಹೇಳಿಕೊಳ್ಳಲಿ ನಮ್ಮ ಅಭ್ಯಂತರವೇನಿಲ್ಲ ಎಂದರು.

ಪ್ರದೀಪ್ ಈಶ್ವರ್ ಅವರು ಸಮುದಾಯಕ್ಕೆ ರಾಜಕೀಯ ಮತ್ತು ಉದ್ಯೋಗದಲ್ಲಿ ಮೀಸಲಾತಿ ಕೊಡಿಸಲಿ, ಅವರ ಭಾವಚಿತ್ರ ಇಟ್ಟುಕೊಂಡು ಪೂಜಿಸುತ್ತೇವೆ ಎಂದು ಸವಾಲು ಹಾಕಿದರು.

ಅವರ ರೋಷ ಆವೇಶವನ್ನು ನಮ್ಮ ಸಮುದಾಯದ ಅಭಿವೃದ್ಧಿಗೆ ಪ್ರದರ್ಶಿಸಲಿ ಎಂದು ಕೋರಿದರು.

ಸಮುದಾಯದ ಮುಖಂಡರಾದ ಸೋಮಶೇಖರ್, ಎ.ರಮೇಶ್, ನಂದುಕಿಷನ್, ಕೆ.ನರೇಶ್, ಮಾತೃಶ್ರೀ ಮೋಹನ್, ಚಲುವರಾಜ್ ಸುಬ್ರಮಣಿ ಹರೀಶ್ ಅಶ್ವತ್ ಕುಮಾರ್ ಹಾಜರಿದರು.

ಉದಯವಾಹಿನಿ ಚಿತ್ರ

ಬಿಜೆಪಿ ಸರ್ಕಾರ ಕೈವಾರ ತಾತಯ್ಯ ಜಯಂತಿಗೆ ರಜೆ ಘೋಷಣೆ ಮಾಡಿತು. 3ಎ ಪ್ರವರ್ಗದಲ್ಲಿದ್ದ ಬಲಿಜ ಸಮುದಾಯವನ್ನು ಶೈಕ್ಷಣಿಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರವರ್ಗ 2ಎಗೆ ಸೇರಿಸುವಲ್ಲಿ ಪಿ.ಸಿ.ಮೋಹನ್ ಅವರದ್ದು ಬಹಳ ಶ್ರಮ ಇದೆ

-ಮಹೇಶ್, ಮುಖಂಡ

ಸಮಾಜದ್ರೋಹಿಗಳ ದಮನಕ್ಕೆ ವಿಶೇಷ ತಂಡ: ಡಿವೈಎಸ್ಪಿ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಶ್ರೀರಂಗಪಟ್ಟಣ

ಸಮಾಜಘಾತಕ ಶಕ್ತಿಗಳ ದಮನಕ್ಕೆ ವಿಶೇಷ ತಂಡ ರಚಿಸಲಾಗುತ್ತಿದ್ದು, ರೌಡಿಶೀಟರ್‌ಗಳು ಹಳೆಯ ಚಾಳಿ ಬಿಟ್ಟು ಸರಿ ಮಾರ್ಗದಲ್ಲಿ ನಡೆಯಬೇಕು ಎಂದು ಡಿವೈಎಸ್ಪಿ ಶಾಂತಮಲ್ಲಪ್ಪ ಹೇಳಿದರು.

ಪಟ್ಟಣ ಪೊಲೀಸ್ ಠಾಣೆ ಆವರಣದಲ್ಲಿ ಭಾನುವಾರ ರೌಡಿಗಳ ಪರೇಡ್ ನಡೆಸಿ ಅವರು ಮಾತನಾಡಿದರು. ರಾತ್ರಿ ಗುಂಪುಗೂಡುವುದು, ಜನ್ಮದಿನ ಆಚರಿಸುವುದು, ಮಚ್ಚು ಲಾಂಗು ಹಿಡಿದು ತಿರುಗಾಡುವಂತಿಲ್ಲ. ಮಾದಕ ವಸ್ತುಗಳ ಬಳಕೆ, ಸಾಗಣೆ ಮಾಡುವುದು ಕಂಡು ಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಡ್ರಗ್ಸ್ ಪೆಡ್ಡರ್‌ಗಳ ಬಗ್ಗೆ ಮಾಹಿತಿ, ರೌಡಿ ಶೀಟಗಳಿಂದ ಬೆದರಿಕೆ ಇದ್ದರೂ ಮಾಹಿತಿ ನೀಡಬೇಕು ಎಂದರು.

ಸಿಪಿಐಗಳಾದ ಬಿ.ಎಸ್. ಪ್ರಕಾಶ್, ವಿವೇಕಾನಂದ, ಬಿ.ಎನ್. ಪುನೀತ್, ಪಿಎಸ್ ಐ ಗಳಾದ ಎಂ.ಆರ್. ಬ್ಯಾಳಿ, ರಮೇಶ್ ಕರ್ಕಿಕಟ್ಟಿ, ವಿನೋದಕುಮಾರ್, ರಕ್ಷಿತಾ, ಸುಷ್ಮಾ ಹಾಜರಿದ್ದರು.

750 ಕೋಟಿ ವೆಚ್ಚದಲ್ಲಿ ಹೆದ್ದಾರಿ ಕಾಮಗಾರಿ

• ಉದಯವಾಹಿನಿ, ಶಿರಾ

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತಾಲ್ಲೂಕಿನಲ್ಲಿ 750 ಕೋಟಿ ವೆಚ್ಚದಲ್ಲಿ 2 ಪ್ರತ್ಯೇಕ ಕಾಮಗಾರಿ ಕೈಗೊಳ್ಳುತ್ತಿರುವುದಾಗಿ ಶಾಸಕ ಟಿ.ಬಿ.ಜಯಚಂದ್ರ ಹೇಳಿದರು. ರಾಷ್ಟ್ರೀಯ ಹೆದ್ದಾರಿ 69ರ ಶಿರಾದಿಂದ ಬಡವನಹಳ್ಳಿ ನಡುವೆ 585 ಕೋಟಿ ವೆಚ್ಚದಲ್ಲಿ 20.20ಕಿ.ಮೀ ಉದ್ದದ ಚತುಷ್ಪಥ ರಸ್ತೆ, ರಾಷ್ಟ್ರೀಯ ಹೆದ್ದಾರಿ 544 ಆಂಧ್ರಪ್ರದೇಶದ ಗಡಿಯಿಂದ ಶಿರಾ ನಗರದವರೆಗೆ 166 ಕೋಟಿ ವೆಚ್ಚದಲ್ಲಿ 13.50 ಕಿ.ಮೀ ಉದ್ದದ ಚತುಷ್ಪಥ ರಸ್ತೆ ಕಾಮಗಾರಿ ಕೈಗೊಳ್ಳುತ್ತಿರುವುದಾಗಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಉತ್ತರ ಮತ್ತು ಮಧ್ಯ ಕರ್ನಾಟಕ ಭಾಗದಿಂದ ಬೆಂಗಳೂರು ಅಂತರರ

ಅಂತರಾಳದಿಂದ... EDITORIAL

ಕಸ ವಿಲೇವಾರಿ: ಬೃಹತ್ ಗಾತ್ರದ ಈಗಿನ ಬಿಬಿಎಂಪಿ

ಬೆಂಗಳೂರಿನ ಕಸದ ಸಮಸ್ಯೆ. ಈಗ ಮತ್ತೆ ದೊಡ್ಡ ಸುದ್ದಿಯಾಗುತ್ತಿದೆ. ಈ ಹಿಂದೆ, ಮಾವಳ್ಳಿಪುರ ಕಸ ಸಂಗ್ರಹ ಘಟಕ ಬಂದ್ ಆದಾಗ, ಮಂಡೂರು ಭೂಭರ್ತಿ ಘಟಕ ತುಂಬಿಹೋದಾಗ, ಅಲ್ಲಿನ ರಸ್ತೆಗಳು ತ್ಯಾಜ್ಯ ಸಂಗ್ರಹ ಘಟಕಗಳಂತೆ ಗೋಚರಿಸಿ ಜಾಗತಿಕ ಮಟ್ಟದಲ್ಲಿ ದೊಡ್ಡ ಸುದ್ದಿಯಾಗಿತ್ತು. ಆಗಿನ ಮಾವಳ್ಳಿಪುರ-ಮಂಡೂರು

ಜಾಗದಲ್ಲಿ ಈಗ ಮಿಟ್ಟಗಾನಹಳ್ಳಿ-ಬೆಳ್ಳಹಳ್ಳಿ ಇವೆ. ಅಷ್ಟೇ ಬದಲಾವಣೆ. ಮಿಟ್ಟಗಾನಹಳ್ಳಿ ಭೂಭರ್ತಿ ಘಟಕದಲ್ಲಿ ಕಸ ವಿಲೇವಾರಿಯು ವೈಜ್ಞಾನಿಕವಾಗಿ ಆಗುತ್ತಿಲ್ಲ ಎಂದು ದೂರಿರುವ ಗ್ರಾಮಸ್ಥರು, ಕಸ ಹೊತ್ತು ತಂದಿರುವ 300ಕ್ಕೂ ಅಧಿಕ ಕಾಂಪ್ಯಾಕ್ಟರ್‌ಗಳನ್ನು ರಸ್ತೆಯಲ್ಲೇ ತಡೆದಿದ್ದಾರೆ. ನಾಲ್ಕು ದಿನಗಳಿಂದಲೂ ಕಸವನ್ನು ಘಟಕದಲ್ಲಿ ಸುರಿದು ಹೋಗಲು ಬಿಟ್ಟಿಲ್ಲ. ಕಾಂಪ್ಯಾಕ್ಟರ್‌ಗಳು ಮರಳಿ ಬಾರದಿರುವ ಕಾರಣ ಅವುಗಳಿಗೆ ಕಸ ವರ್ಗಾಯಿಸಲು ಸಾಧ್ಯವಾಗದೆ ಆಟೊ ಟಿಪ್ಪರ್‌ಗಳು ನಗರದ ರಸ್ತೆಗಳಲ್ಲಿ ಹಾಗೇ ನಿಂತಿವೆ. ಹೀಗಾಗಿ, ಹಲವು ವಾರ್ಡ್‌ಗಳಲ್ಲಿ ರಸ್ತೆಗಳ ಮೇಲೆಯೇ ಕಸ ಚೆಲ್ಲಾಪಿಲ್ಲಿಯಾಗಿ ಬಿದ್ದಿದೆ. ದುರ್ನಾತವೂ ಹರಡಿದೆ. ಬೆಂಗಳೂರಿನ ಜನಸಂಖ್ಯೆಯು ವಿಪರೀತ ಎನಿಸುವಷ್ಟು ಬೆಳೆದಿರುವುದು. ವಾರ್ಡ್ ಮಟ್ಟದಲ್ಲಿ ಡಂಪ್‌ಯಾರ್ಡ್ ಇಲ್ಲದಿರುವುದು, ದಿನದ 24 ಗಂಟೆ ಕೆಲಸದ ಸಂಸ್ಕೃತಿ ಬೆಳೆದಿರುವುದು, ಜೀವನಶೈಲಿಯಲ್ಲಿ ಭಾರಿ ಬದಲಾವಣೆ ಆಗಿರುವುದು, ಕಸ ವಿಲೇವಾರಿಗೆ ಕೇಂದ್ರೀಕೃತ ವ್ಯವಸ್ಥೆಯನ್ನೇ ಹೆಚ್ಚಾಗಿ ನೆಚ್ಚಿಕೊಂಡಿರುವುದು ಕಸದ ಸಮಸ್ಯೆಯ ಪ್ರಮುಖ ಕಾರಣಗಳನ್ನು ಹೀಗೆ ಪಟ್ಟಿ ಮಾಡಬಹುದು. ಈ ಸಮಸ್ಯೆಯು ಬಿಗಡಾಯಿಸುವಂತೆ ನೋಡಿಕೊಂಡಿದ್ದು ಮಾತ್ರ ರಾಜಕೀಯ ನಂಟು ಹೊಂದಿರುವ ಕಸದ ಮಾಫಿಯಾ ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಕಚೇರಿಯ ಪ್ರತಿ ಕಂಬವೂ ಉಸುರುತ್ತದೆ. ಕಸ ವಿಲೇವಾರಿ ಸಮಸ್ಯೆ ದೈತ್ಯಾಕಾರ ತಾಳಿದಾಗಲೆಲ್ಲ ಬಿಬಿಎಂಪಿಯು ಮೈಕೊಡವಿ ಮೇಲೆದ್ದಂತೆ ಒಂದಿಷ್ಟು ಚಟುವಟಿಕೆಗಳಲ್ಲಿ ತೊಡಗಿದಂತೆ ಮಾಡುವುದು, ನಂತರ ಮತ್ತೆ ಕುಂಭಕರ್ಣ ನಿದ್ರೆಗೆ ಜಾರುವುದು ದಶಕಗಳಿಂದ ನಡೆಯುತ್ತಿರುವ ವಿದ್ಯಮಾನ.

> **ಬೆಂಗಳೂರಿನ ಜನ ಬಿಬಿಎಂಪಿಯೇ ಎಲ್ಲಾವನ್ನೂ ಮಾಡಲಿ ಎಂದು ಮಿಶ್ರಕಸ ಕೊಡುವಂತಹ ಹೊಣೆಗೇಡಿತನ ಪ್ರದರ್ಶಿಸದೆ ಮೂಲದಲ್ಲೇ ಕಸ ಬೇರ್ಪಡಿಸುವಿಕೆ, ಗರಿಷ್ಠ ಮರುಬಳಕೆ, ಭೂಭರ್ತಿ ಘಟಕಕ್ಕೆ ಕನಿಷ್ಠ' ಎಂಬ ನಿಯಮ ಅಳವಡಿಸಿಕೊಳ್ಳಬೇಕು.**

ಶಾಶ್ವತ ಪರಿಹಾರಕ್ಕೆ ಕಾರಣವಾಗುವಂತಹ ಸುಸ್ಥಿರ ವ್ಯವಸ್ಥೆಯೊಂದನ್ನು ರೂಪಿಸುವಲ್ಲಿ ಆದು ಸಂಪೂರ್ಣವಾಗಿ ಸೋತಿದೆ. ರಾಜಧಾನಿಯ ಈ ಸಮಸ್ಯೆಗೆ ತಕ್ಕ ಪರಿಹಾರ ಒದಗಿಸಲು ಇದುವರೆಗೆ ಸರ್ಕಾರ ಕೂಡ ಇಚ್ಛಾಶಕ್ತಿಯನ್ನು ಪ್ರದರ್ಶಿಸಿಲ್ಲ. ಮಂಡೂರಿನಲ್ಲಿ ಸಮಸ್ಯೆ ಬಿಗಡಾಯಿಸಿದಾಗ ಮೂಲದಲ್ಲೇ ಕಸ ಬೇರ್ಪಡಿಸಬೇಕು. ವಿಕೇಂದ್ರೀಕೃತ ತ್ಯಾಜ್ಯ ನಿರ್ವಹಣೆ ಹಾಗೂ ವಿಲೇವಾರಿ ವ್ಯವಸ್ಥೆಯನ್ನು ಮಾಡಬೇಕು, ಪ್ರತಿ ವಾರ್ಡ್‌ನಲ್ಲಿ ಒಣಕಸ ಸಂಗ್ರಹ ಕೇಂದ್ರ ತೆರೆಯಬೇಕು ಮತ್ತು ಭೂಭರ್ತಿ ಮಾಡುವ ಕಸದ ಪ್ರಮಾಣವನ್ನು ಒಟ್ಟು ನಗರ ಕಸ ಉತ್ಪಾದನೆಯ ಶೇಕಡ 20ಕ್ಕೆ ಸೀಮಿತಗೊಳಿಸಬೇಕು ಎಂಬ ನಿರ್ಣಯಕ್ಕೆ ಬಿಬಿಎಂಪಿ ಬಂದಿತ್ತು. ಹದಿಮೂರು ವರ್ಷಗಳಷ್ಟು ಹಿಂದೆಯೇ ಕೈಗೊಂಡ ಈ ನಿರ್ಣಯಗಳನ್ನು ಒಂದುವೇಳೆ ಸಮರ್ಪಕವಾಗಿ ಅನುಷ್ಠಾನಕ್ಕೆ ತಂದಿದ್ದರೆ ಈ ವೇಳೆಗೆ ಕಸ ವಿಲೇವಾರಿಯ ಸಮಸ್ಯೆ ಬಹುಪಾಲು ನೀಗುತ್ತಿತ್ತು. ಬಹುತೇಕ ವಾರ್ಡ್ ಗಳಲ್ಲಿ ಒಣಕಸ ಸಂಗ್ರಹ ಕೇಂದ್ರಗಳನ್ನೇನೋ ತೆರೆಯಲಾಗಿದೆ. ಆದರೆ, ಮೂಲದಲ್ಲಿ ಕಸ ಬೇರ್ಪಡಿಸುವ ನಿಯಮ ಸರಿಯಾಗಿ ಜಾರಿಯಾಗದ ಕಾರಣ ಮಿಶ್ರಕಸ ಭೂಭರ್ತಿ ಘಟಕಗಳ ಕಡೆಗೆ ಹೋಗುತ್ತಿದೆಯೇ ವಿನಾ ಮರುಬಳಕೆ ಮಾಡಬಹುದಾದ ತ್ಯಾಜ್ಯ ವಸ್ತುಗಳು ಒಣಕಸ ಕೇಂದ್ರಗಳನ್ನು ತಲುಪುತ್ತಿಲ್ಲ. ಪಕ್ಕದ ಗೋವಾ ರಾಜ್ಯದ ಪಣಜಿ ನಗರದ ಉದಾಹರಣೆಯನ್ನೇ ನೋಡಿ. ಮರುಬಳಕೆ ಮಾಡಬಹುದಾದ ತ್ಯಾಜ್ಯವನ್ನು ಶಾಲೆಗೆ ತಂದರೆ ಮಕ್ಕಳಿಗೆ ಬಹುಮಾನ ನೀಡಲಾಗುತ್ತದೆ. ಅಲ್ಲಿನ ಕಾಲೊನಿಗಳಲ್ಲಿ ಹಸಿಕಸವನ್ನು ಗೊಬ್ಬರವಾಗಿ ಪರಿವರ್ತಿಸಲು ಮುನ್ಸಿಪಾಲಿಟಿ ವತಿಯಿಂದಲೇ ಮನೆಗಳ ಸಂಖ್ಯೆಗೆ ಅನುಗುಣವಾಗಿ ಗುಂಡಿಗಳನ್ನು ನಿರ್ಮಿಸಿಕೊಡಲಾಗುತ್ತದೆ. ಕಣ್ಣು ತೆರೆದು ನೋಡಿದರೆ ಸುತ್ತಲೂ ಇಂತಹ ಬೇಕಾದಷ್ಟು ಒಳ್ಳೆಯ ಮಾದರಿಗಳು ಕಾಣುತ್ತವೆ. ಬಿಬಿಎಂಪಿ ಈಗಲಾದರೂ ತನ್ನ ಹೊಣೆಯನ್ನು ಸರಿಯಾಗಿ ನಿಭಾಯಿಸಬೇಕು.

ರಾಮಾಯಣ

ಕೌಸಲ್ಯಾ ದೇವಿಯ ಶ್ರೀರಾಮನ ವನವಾಸಕ್ಕೆ ಒಪ್ಪಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ದಶರಥ ರಾಯನಿಗೆ ಅಧಿಪತ್ಯ ವಿಲ್ಲದಂತೆಯೂ ನಿನಗೆ ಅಧಿವತ್ಯವಾಗುವಂತೆಯೂ ಮಾಡಿದೆನಾದರೆ ನನ್ನ ಬಿಲ್ಲು ಬಾಣಗಳ ಸಾಮರ್ಥ್ಯವು ಪ್ರಕಟವಾಗುವುದು ಶ್ರೀರಾಮ, ನಿನಗೆ ಪಟ್ಟಾಭಿಷೇಕವಾಗುವಂತೆ ಈ ಕಾರ್ಯವನ್ನು ಈಡೇರಿಸಿ ನನ್ನ ಭುಜಗಳಿಗೆ ಶ್ರೀಗಂಧವನ್ನು ಅನುಲೇಪನ ಮಾಡುವೆನು. ನಾನು ಬಾಹುಪುರಿಯನ್ನು ತೊಟ್ಟದ್ದು. ದಾನಾರ್ಥವಾಗಿ ಅನೇಕ ದ್ರವ್ಯವನ್ನು ಕೊಟ್ಟದ್ದು, ಸ್ನೇಹಿತರನ್ನು ಪರಿಪಾಲಿಸಿದ್ದು ಮೊದಲಾದವು ಸಾರ್ಥಕವಾಗುವುವು. ನಿನ್ನ ಪಟ್ಟಾಭಿಷೇಕಕ್ಕೆ ವಿಘ್ನಮಾಡುವವರ ಸ್ನೇಹಿತರನ್ನೂ ಸಂಹರಿಸುತ್ತೇನೆ. ಅವರ ಕೀರ್ತಿಯನ್ನು ಅಪಹರಿಸುತ್ತೇನೆ. ನನ್ನ ಪುರುಷ ಸಾಮರ್ಥ್ಯದಿಂದ ನಿನಗೆ ಹೇಗೆ ರಾಜ್ಯಾಧಿಪತ್ಯವಾಗುವುದೋ ಹಾಗೆ ಯತ್ನಮಾಡುತ್ತೇನೆ. ನೀನು ನನಗೆ ಅಪ್ಪಣೆಯನ್ನು ಕೊಡು. ನಾನು ನಿನಗೆ ಕಿಂಕರನು'' ಎಂದು ಅತ್ಯಂತ ವಿನಯೋಕ್ತಿಗಳಿಂದ ಮಡಿದನು.

ಆ ಮಾತನ್ನು ಕೇಳಿ ರಘುಕುಲತಿಲಕನಾದ ಶ್ರೀರಾಮನು ಲಕ್ಷ್ಮಣನನ್ನು ಮೈದಡವಿ ಸಂತವಿಟ್ಟಿನು. ಮತ್ತು ಲಕ್ಷ್ಮಣನನ್ನು ಕುರಿತು ಲಕ್ಷ್ಮಣ, ನಾನು ತಂದೆಯ ಆಜ್ಞೆಯನ್ನು ಮೀರತಕ್ಕವನಲ್ಲ. ನಾನು ಸನ್ಮಾರ್ಗದಲ್ಲಿಯೇ ನಡೆಯತಕ್ಕವನು ಎಂದು ತಿಳಿದುಕೊ ಎಂಬುದಾಗಿ ಹೇಳಿದನು.

ಕೌಸಲ್ಯಾ ದೇವಿಯ ಶ್ರೀರಾಮನ ವನವಾಸಕ್ಕೆ ಒಪ್ಪಿದ್ದು: ಈ ಪ್ರಕಾರ ಸರ್ವಪ್ರಯತ್ನದಿಂದಲೂ ಶ್ರೀರಾಮನ ತನ್ನ ತಂದೆಯ ಆಜ್ಞೆಯನ್ನು ಪರಿಪಾಲಿಸಲು ನಿಶ್ಚಯಬುದ್ಧಿಯುಳ ವನಾಗಿರುವುದನ್ನು ತಿಳಿದು ಕೌಸಲ್ಯಾದೇವಿಯು ದುಃಖದಿಂದ ಕಣ್ಣೀರನ್ನು ಸುರಿಸುತ್ತ ನುಡಿದಳು: ಶ್ರೀರಾಮನು ಒಂದುಬಾರಿಯಾದರೂ ದುಃಖವನ್ನು ಕಂಡವನಲ್ಲ. ಸಮಸ್ತ ಪ್ರಾಣಿಗಳ ಸಂಗಡವೂ ಪ್ರಿಯವಚನಗಳನ್ನೇ ನುಡಿಯುವವನು. ನನ್ನ ಉದರದಲ್ಲಿ ದಶರಥರಾಯನಿಂದ ಅವತರಿಸಿದಂಥ ಶ್ರೀರಾಮನು ವನಪ್ರದೇಶದಲ್ಲಿ ನೆಲದಮೇಲೆ ಉದುರಿದ ಕಾಳುಗಳನ್ನು ತಿಂದುಕೊಂಡು ಹದಿನಾಲ್ಕು ವರುಷಗಳನ್ನು ಹೇಗೆ ಕಳೆಯುವನು ? ಯಾವನ ಊಳಿಗದ ಜನರು ಮೃಷ್ಟಾನ್ನವನ್ನು ಭುಜಿಸುತ್ತಿದ್ದಾರೆಯೋ ಅಂಥ ಶ್ರೀರಾಮನು ಗೆಡ್ಡೆಗೆಣಸು ಫಲಪರ್ಣಗಳಿಂದ ಹೇಗೆ ದಿನಗಳನ್ನು ಕಳೆಯುವನು? ದಶರಥರಾಯನು ತನಗೆ ಪ್ರಿಯನಾದ ಶ್ರೀರಾಮನನ್ನು ವನವಾಸಕ್ಕೆ ಕಳುಹಿಸುತ್ತಾನೆಂಬ ವೃತ್ತಾಂತವನ್ನು ಯಾರು ತಾನೆ ಕೇಳಿ ನಂಬುವರು? ಕೇಳಿದವರು ಯಾರು ಭಯಪಡದಿರುವರು? ಶ್ರೀರಾಮ, ನೀನು ಸಮಸ್ತ ಲೋಕಗಳಿಗೂ ಮನೋಹರನು. ಇಂಥ ನೀನು ಕಾಡಿಗೆ ಹೋಗುವುದನ್ನು ನೋಡಿದರೆ ದೈವವೇ ಬಲಶಾಲಿ, ಅದೇ ಎಲ್ಲಾವನ್ನೂ ನಡೆಸುವುದು ಎಂದು ತಿಳಿಯದಿರದು. ನಿನ್ನ ವಿಯೋಗ ದಿಂದುಂಟಾಗುವ ಶೋಕವೆಂಬ ಅಗ್ನಿಯು ಬೇಸಿಗೆಯಲ್ಲಿ ಒಣಗಿದ ಗಿಡಗಳನ್ನು ದಹಿಸುವಂತೆ ನನ್ನನ್ನು ದಹಿಸುವುದು. ಆದಕಾರಣ ಶ್ರೀರಾಮ, ನೀನು ಯಾವದಿಕ್ಕಿಗೆ ಹೋದರೂ ಕರುವನ್ನರಸಿಕೊಂಡು ಹೋಗುವ ಹಸುವಿನಂತೆ ನಿನ್ನ ಹಿಂದೆ ಬರುವೆನು 1 ಎಂದು ನುಡಿದಳು. ಪ್ರರುಷೋತ್ತಮನಾದ ಶ್ರೀರಾಮನು ಅತ್ಯಂತದುಃಖಪಡುತ್ತಿದ್ದ ಕೌಸಲ್ಯಾದೇವಿಯನ್ನು ನೋಡಿ ಅಮ್ಮ , ಕೈಕೇಯಾದೇವಿಯ ಮಾತಿನಿಂದ ಮರುಳಾದ ದಶರಥರಾಯನು. ನಾನು ವನಕ್ಕೆ ಹೋದಮೇಲೆ ಟೂ ಆತನನ್ನು ಬಿಟ್ಟು ನನ್ನ ಸಂಗಡ ಬಂದರೆ ಬದುಕಲಾರನು. ಅದಲ್ಲದೆ ಸ್ತ್ರೀಯರು ತಮ್ಮ ಪತಿಯನ್ನು ಪರಿತ್ಯಜಿಸಿ. ಮಹತ್ತಾದ ಪಾಪವೂ ನಿಂದೆಯೂ ಬರುವುವು. ಆದ್ದರಿಂದ ನೀನು ನಿನ್ನ ಪತಿಯಾದ ದಶರಥರಾಯನನ್ನು ಬಿಟ್ಟು ನನ್ನೊಡನೆ ಬರುವುದನ್ನು ನೆನೆಯಬೇಡ. ಎಷ್ಟರವರೆಗೆ ಜಗತ್ತತಿಯೂ ರಘುವಂಶೋದ್ಭಾ ಅನೂ ಆದ, ತಂಬೆ ದಶರಥರಾಯನು ಜೀವದಿಂದಿರುವನೋ ಅಷ್ಟರವರೆಗೆ ನೀನು ನಿನ್ನ. ಪತಿಯ ಸೇವಾಸತ್ಕಾರಗಳನ್ನು ಮಾಡಿಕೊಂಡಿರುವುದೇ ಶಾಶ ತವಾದ ಧರ್ಮ ಎಂದು ಹೇಳಿದನು.

ಮುಂದುವರಿಯುವುದು...

ಹಿಂದೂ ರಾಷ್ಟ್ರದ ಉದ್ಧಾರದೊಂದಿಗೆ ಬಂಟ್ವಾಳದ ಸ್ಪರ್ಶಾ ಕಲಾಮಂದಿರದಲ್ಲಿ ಪ್ರಾರಂಭವಾದ ಪ್ರಾಂತೀಯ ಹಿಂದೂ ರಾಷ್ಟ್ರ ಅಧಿವೇಶನ | ಹಿಂದೂಗಳ ಮೇಲೆ ಏಕಿಷ್ಟು ಆಘಾತ, ಆಕ್ರೋಶವೇ ಅಥವಾ ಹೆದರಿಕೆಯೇ: ಶ್ರೀ ಚಕ್ರವರ್ತಿ ಸೂಲಿಬೆಲೆ

ಸ್ವಾರ್ಥ ಮರೆತು ನಾವು ಪರಮಾರ್ಥದ ಕಡೆಗೆ ಹೋಗಬೇಕು

• ಉದಯವಾಹಿನಿ, ಬಂಟ್ವಾಳ
• ಶ್ರೀ ಮೋಹನ ಗೌಡ,

ಪರಿಶುದ್ಧ ಗಂಗೆ ಸ್ವರೂಪ ಹಿಂದೂ ಧರ್ಮ, ಈ ಹಿಂದೂ ಧರ್ಮದ ಮೇಲೆ ನಿರಂತರ ಆಘಾತ ನಡೆಯುತ್ತಿದೆ. ಹೋಳಿ ಇರಲಿ, ದೀಪಾವಳಿ ಇರಲಿ ಹಿಂದೂಗಳಲ್ಲಿ ಸಾಂಸ್ಕೃತಿಕ ಆಘಾತ ನಡೆಯುತ್ತಿದೆ.

ಹಿಂದೂಗಳ ಆಚರಣೆಯ ಬಗ್ಗೆ ಪ್ರಸಾರ ಮಾಧ್ಯಮಗಳ ಮುಖಾಂತರ ಅಪಹಾಸ್ಯ ಮಾಡಲಾಗುತ್ತಿದೆ. ಹಿಂದೂಗಳ ಶ್ರದ್ಧಾ ಕೇಂದ್ರಗಳಾದ ದೇವಸ್ಥಾನಗಳ ಮೇಲೆ ಆರೋಪಗಳನ್ನು ಮಾಡಲಾಗುತ್ತದೆ. ಹಿಂದೂ ಸಮಾಜ ಜಾಗೃತವಾದರೆ ಇತರ ಪಂಥೀ ಯರು ಏನೂ ಮಾಡಲು ಸಾಧ್ಯವಿಲ್ಲ. ಸಂತರ ಮೇಲೆ ಆರೋಪಗಳನ್ನು ಹಾಕಲಾಗುತ್ತದೆ, ಆಕ್ರಮಣಗಳನ್ನು ಮಾಡಲಾಗುತ್ತದೆ. ಎಡಪಂಥೀಯರು ಕ್ರಿಟಿಕಲ್ ರೇಸ್ ಥಿಯರಿ ಮುಖಾಂತರ ಹಿಂದೂಗಳನ್ನು ಜಾತಿ ಮತ ಪಂಥಗಳ ಹೆಸರಿನಲ್ಲಿ ವಿಭಜನೆಯನ್ನು ಮಾಡಲಾಗುತ್ತಿದೆ. ಅಮೇರಿಕಾದಿಂದ ಪ್ರಾಯೋಜಿತ ಮತಾಂತರ ಹಾಗೂ ದೇಶ ವಿರೋಧಿ ಷಡ್ಯಂತ್ರಕ್ಕೆ

ಉದಯವಾಹಿನಿ ಚಿತ್ರ

ಹಿಂದೂ ಸಮಾಜ ವ್ಯಾಪಕವಾಗಿ ಬಲಿಯಾಗುತ್ತಿದೆ. ಇದೆಲ್ಲದಕ್ಕೂ ಪರಿಹಾರವೆಂದರೆ ನಮ್ಮ ಧರ್ಮ ರಕ್ಷಣೆ ನಮ್ಮದೇ ಕರ್ತವ್ಯವಾಗಿದೆ ಎಂಬ ಅರಿವು ನಮ್ಮಲ್ಲಿ ನಿರ್ಮಾಣವಾಗಬೇಕು. ಧರ್ಮ ರಕ್ಷಣೆಗಾಗಿ ಸರ್ವಸ್ವದ ತ್ಯಾಗ ಮಾಡಲು ನಾವು ಸಿದ್ಧರಾಗಿರಬೇಕು ಎಂದು ಉಪಸ್ಥಿತ ಹಿಂದೂ ಬಾಂಧವರಿಗೆ ಚಕ್ರವರ್ತಿ ಸೂಲಿಬೆಲೆ ಇವರು ಕರೆ ನೀಡಿದರು. ಹಿಂದೂ ರಾಷ್ಟ್ರದ ಸ್ಥಾಪನೆಗಾಗಿ 16 ಮಾರ್ಚ್ 2025, ಭಾನುವಾರದಂದು ಸ್ಪರ್ಶಾ ಕಲಾ ಮಂದಿರ, ಬಿ. ಸಿ. ರೋಡ್, ಬಂಟ್ವಾಳದಲ್ಲಿ ಪ್ರಾಂತೀಯ ಹಿಂದೂ ರಾಷ್ಟ್ರ ಅಧಿವೇಶನವು ಶಂಖನಾದ ಮತ್ತು ವೇದಮಂತ್ರ ಪಠಣದೊಂದಿಗೆ ಪ್ರಾರಂಭಿಸಲಾಯಿತು. ಅಧಿವೇಶನದ ಉದ್ಘಾಟನೆಯನ್ನು ಅದಮಾರು ಮಠದ ಶ್ರೀ ಶ್ರೀಈ ಶಪ್ರಿಯತೀರ್ಥ ಶ್ರೀಪಾದರು, ಸನಾತನ ಸಂಸ್ಥೆಯ ಸಂತರಾದ ಪೂಜ್ಯ ರಮಾನಂದ ಗೌಡ, ಕರ್ನಾಟಕ ಉಚ್ಚ ನ್ಯಾಯಾಲಯದ ಹಿಂದುತ್ವ ನಿಷ್ಠ ವಕೀಲರಾದ ನ್ಯಾ. ಕೃಷ್ಣಮೂರ್ತಿ, ಯುವಾ ಬ್ರಿಗೇಡ್‌ನ ಸಂಸ್ಥಾಪ ಕರಾದ ಶ್ರೀ ಚಕ್ರವರ್ತಿ ಸೂಲಿಬೆಲೆ, ಉದ್ಯಮಿಗಳಾದ ಶ್ರೀ. ಎಂ. ಜೆ. ಶೆಟ್ಟಿ ಮತ್ತು ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ಸಮನ್ವಯಕರಾದ ಶ್ರೀ. ಗುರುಪ್ರಸಾದ್ ಗೌಡ ಇವರ ದಿವ್ಯ ಹಸ್ತಗಳಿಂದ ದೀಪ ಪ್ರಜ್ವಲನೆಯನ್ನು ಮಾಡಿ ಅಧಿವೇಶನದ ಉದ್ಘಾಟನೆಯನ್ನು ಮಾಡಲಾಯಿತು. ಸ್ವಾರ್ಥ ಮರೆತು ನಾವು ಪರಮಾರ್ಥದ ಕಡೆಗೆ ಹೋಗಬೇಕಾಗಿದೆ, ವಿವಿಧ ಸಂಘಟನೆ ಗಳೆಲ್ಲಾ ಸೇರಿ ಹಿಂದೂ ರಾಷ್ಟ್ರದೆಡೆಗೆ ಸಾಗಬೇಕಾಗಿದೆ. ಇದಕ್ಕಾಗಿ ನ್ಯಾಯ ವ್ಯವಸ್ಥೆಯನ್ನು ಅರಿತು ಕೊಂಡು ಅದರ ಸದುಪಯೋಗವನ್ನು ಮಾಡಬೇಕು. ನ್ಯಾಯ ವಾದಿಗಳು ತಮ್ಮ ಕರ್ತವ್ಯವೆಂದು ರಾಷ್ಟ್ರ ಮತ್ತು ಧರ್ಮದ ವಿಚಾರಗಳಲ್ಲಿ ದಿಟ್ಟ ಹೆಜ್ಜೆಗಳನ್ನಿಡಬೇಕು ಎಂದು ಉಪಸ್ಥಿತ ವಕೀಲರಿಗೆ ಕರೆ ನೀಡಿದರು.

> **ಅಧಿವೇಶನದಲ್ಲಿ ಹಿಂದೂ ರಾಷ್ಟ್ರ ಆಕ್ಷೇಪ ಮತ್ತು ಖಂಡನೆ, ಹಬ್ಬಗಳನ್ನು ಆಚರಿಸುವ ಯೋಗ್ಯ ಪದ್ಧತಿ ಮತ್ತು ಶಾಸ್ತ್ರ ಈ 2 ಗ್ರಂಥಗಳ ಇ-ಬುಕ್ ನ ಉದ್ಘಾಟನೆಯನ್ನು ಗಣ್ಯರ ಹಸ್ತದಿಂದ ಮಾಡಲಾಯಿತು**
> **- ಶ್ರೀ. ಕೃಷ್ಣಮೂರ್ತಿ, ನ್ಯಾಯವಾದಿ**

ಮುಖದ ಮೊಡವೆಗಳನ್ನು ಮನೆ ಮದ್ದಿನಿಂದಲೇ ಹೋಗಲಾಡಿಸುವ ಉಪಾಯ

ಮುಖದ ಮೇಲೆ ಮೊಡವೆಗಳಾಗುವುದು ಸಾಮಾನ್ಯವಾದ ಸಮಸ್ಯೆಗಳಾಗಿದ್ದು, ಇದಕ್ಕೆ ಕಾರಣಗಳು ಹಲವಾರು ಇರಬಹುದು. ಸಾಮಾನ್ಯವಾಗಿ ಮೊಡವೆಗಳು ಚರ್ಮದ ರಂಧ್ರಗಳಲ್ಲಿ ಎಣ್ಣೆ ಮತ್ತು ಸತ್ತ ಚರ್ಮದ ಕೋಶಗಳು ಮುಚ್ಚಿ ಹೋದಾಗ ಸಂಭವಿಸುತ್ತವೆ. ಇದರಿಂದಾಗಿ ಚರ್ಮದ ಮೇಲೆ ಮೊಡವೆಗಳು ಕಪ್ಪು ಚುಕ್ಕೆಗಳು ಮತ್ತು ಬಿಳಿ ಚುಕ್ಕೆಗಳು ರೂಪುಗೊಳ್ಳಲು ಪ್ರಾರಂಭಿಸುತ್ತವೆ. ಮೊಡವೆಗಳ ಸಮಸ್ಯೆ ಸಾಮಾನ್ಯವಾಗಿ ಹದಿಹರೆಯದಲ್ಲಿ ಹೆಚ್ಚಾಗಿ ಕಂಡುಬರುತ್ತವೆ. ಮೊಡವೆಗಳು ಕಾಣಿಸಿಕೊಳ್ಳಲು ಕಳಪೆ ಆಹಾರ ಪದ್ಧತಿ, ಜೀವನಶೈಲಿಯ ಬದಲಾವಣೆ, ಒತ್ತಡ ಇತ್ಯಾದಿ ಕಾರಣಗಳಿಂದ ತೊಂದರೆಗೊಳಗಾಗುತ್ತಾರೆ. ಮೊಡವೆಗಳು ಮುಖದ ಸೌಂದರ್ಯವನ್ನು ಹಾಳು ಮಾಡುತ್ತವೆ. ಈ ಸಮಸ್ಯೆಯನ್ನು ಪರಿಹರಿಸಲು ವಿವಿಧ ಸೌಂದರ್ಯ ಉತ್ಪನ್ನಗಳನ್ನು ಮತ್ತು ಚಿಕಿತ್ಸೆಗಳ ಮೊರೆ ಹೋಗುತ್ತಾರೆ. ಈ ಸೌಂದರ್ಯ ಉತ್ಪನ್ನಗಳು ಮೊಡವೆಗಳ ಸಮಸ್ಯೆಗಳನ್ನು ಮತ್ತಷ್ಟು ಪ್ರಚೋದಿಸಬಹುದು. ಆದ್ದರಿಂದ ಇದಕ್ಕಾಗಿ ಮನೆಮದ್ದುಗಳ ಪರಿಹಾರವನ್ನು ಪ್ರಯತ್ನಿಸುವುದು ಉತ್ತಮ.

ರೋಸ್ ವಾಟರ್ ಬಳಸಿ: ರೋಸ್ ವಾಟರ್ ಕೂಡ ಚರ್ಮದ ಸಮಸ್ಯೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ . ಇದ ರಲ್ಲಿ ಚರ್ಮವನ್ನು ತೇವಗೊಳಿಸುವ ಗುಣಗಳಿವೆ. ನಿಮ್ಮ ಚರ್ಮವು ಶುಷ್ಕತೆಯಿಂದ ಕೂಡಿದ್ದಲ್ಲಿ, ನೀವು ಮೊಡವೆಯನ್ನು ಪರಿಹರಿಸಲು ರೋಸ್ ವಾಟರ್ ಅನ್ನು ಬಳಸಬಹುದು. ರೋಸ್ ವಾಟರ್ ನಿಮ್ಮ ಚರ್ಮವನ್ನು ಆರೋಗ್ಯಯುತಗೊಳಿಸುತ್ತದೆ. ಮತ್ತು ಚರ್ಮದ ಪಿಊ ಮಟ್ಟವನ್ನು ಸಮತೋಲನದಲ್ಲಿರಿಸುತ್ತದೆ. ರೋಸ್ ವಾಟರ್ ಬಳಸುವುದರಿಂದ ಅದು ಚರ್ಮದಲ್ಲಿನ ಕಿರಿಕಿರಿಯನ್ನು ಶಮನಗೊಳಿಸುತ್ತದೆ. ಇದನ್ನು ನೀವು ಕ್ಲೆನ್ಸರ್ ಅಥವಾ ಟೋನರ್ ಆಗಿಯೂ ಬಳಸಬಹುದು. ನಿಯಮಿತವಾಗಿ ರೋಸ್ ವಾಟರ್ ಅನ್ನು ಅನ್ವಯಿಸುವುದರಿಂದ ನೀವು ನಿಮ್ಮ ಮುಖದ ಕಲೆಗಳು ಮತ್ತು ಮೊಡವೆಗಳನ್ನು ಸಂಪೂರ್ಣವಾಗಿ ಹೋಗಲಾಡಿಸ ಬಹುದು.

ಮೊಡವೆಗಳನ್ನು ಗುಣಪಡಿಸಲು ತರಕಾರಿ ಜ್ಯೂಸ್ ಕುಡಿಯಿರಿ: ತರಕಾರಿ ಜ್ಯೂಸ್ ಗಳು ಆರೋಗ್ಯಕ್ಕೆ ತುಂಬಾ ಲಾಭದಾಯಕವಾಗಿದೆ. ನೀವು ತರಕಾರಿ ಜ್ಯೂಸ್ ಅನ್ನ

ಏ.10 ರವರೆಗೆ ಎಲ್.ಎಲ್.ಸಿ. ಕಾಲುವೆಗೆ ಕುಡಿಯುವ ನೀರು ಬಿಡಲು ಮನವಿ

• ಉದಯವಾಹಿನಿ, ಬಳ್ಳಾರಿ

ಎಲ್.ಎಲ್.ಸಿ. ಕಾಲುವೆಗೆ ಏ.10ರ ವರೆಗೆ ಕುಡಿಯುವ ನೀರು ಬಿಡಲು ತುಂಗಭದ್ರ ರೈತ ಸಂಘ ಮನವಿ ಮಾಡಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದು, ಜಿಲ್ಲೆಯ ಕಂಪ್ಲಿ-ಕುರುಗೋಡು-ಸಿರುಗುಪ್ಪ ಮತ್ತು ಬಳ್ಳಾರಿ ಗ್ರಾಮಾಂತರದಲ್ಲಿ ತುಂಗಭದ್ರ ಬಲದಂಡೆ ಕೆಳಮಟ್ಟದ ಕಾಲುವೆ (ಎಲ್.ಎಲ್.ಸಿ) ಅಡಿಯಲ್ಲಿ ಸುಮಾರು ಎರಡು ಲಕ್ಷ ಎಕರೆ ರೈತರು ಭತ್ತವನ್ನು ಬೆಳೆದಿರುತ್ತಾರೆ. ವಾತಾವರಣದ ವೈಪಲ್ಯದಿಂದಾಗಿ ಬೆಳೆಗಳ ಬೆಳವಣಿಗೆ ನಿಧಾನಗತಿಯಲ್ಲಿರುವುದರಿಂದ ಒಡೆ ಬರುವುದು ಮತ್ತು ತೆನೆ ಬಿಚ್ಚುವುದು ತಡವಾಗುತ್ತಿರುವುದರಿಂದ ಬೆಳೆಗಳು ಸಂಪೂರ್ಣವಾಗಿ ಬರಲು ಏಪ್ರೀಲ್-10ರವರೆಗೆ ನೀರು ಬೇಕಾಗಿರುತ್ತದೆ. ಈ ಕಾಲುವೆಗೆ ಆಂಧ್ರ ಪ್ರದೇಶ ಪಾಲಿನ ನೀರು ಏಪ್ರೀಲ್-10 ರವರೆಗೂ ಪಡೆಯುತ್ತಿದ್ದಾರೆ. ಆವರೊಂದಿಗೆ ನಮ್ಮ ಪಾಲಿನ ನೀರನ್ನು ಬಿಟ್ಟರೆ ಮಾತ್ರ ಬೆಳೆಗಳು ಬರುತ್ತವೆ. ಇಲ್ಲವಾದರೆ ಎರಡು ಲಕ್ಷ ಎಕರೆಯಲ್ಲಿ ಬೆಳೆದಿರುವ ರೈತರ ಬೆಳೆಗಳು ನಷ್ಟ ಹೊಂದಲಿದ್ದಾರೆ.

ನಿತ್ಯವು ಜಲಾಶಯದಿಂದ ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು ಜಿಲ್ಲೆಗಳ ಎಲ್ಲಾ ಕಾಲುವೆಗಳಿಗೂ ಒಟ್ಟಾರೆಯಾಗಿ 7072 ಕ್ಯೂಸಸ್ ನೀರನ್ನು ಬಿಡಲಾಗುತ್ತಿದೆ. ಐ.ಸಿ.ಸಿ. ತೀರ್ಮಾನದ


ಉದಯವಾಹಿನಿ ಚಿತ್ರ

ಪ್ರಕಾರ ಈ ತಿಂಗಳ ಕೊನೆಯವರೆಗೂ ನಿತ್ಯವು 7072 ಕ್ಯೂಸಸ್ ನೀರು ಬಿಟ್ಟರೆ 10.608 ಟಿ.ಎಮ್.ಸಿ. ನೀರು ಮಾತ್ರ ಬಳಕೆಯಾಗಿ ಇನ್ನೂ ಜಲಾಶಯದಲ್ಲಿ ಎಲ್ಲಾರ ಪಾಲಿನ 11.00 ಟಿ.ಎಮ್.ಸಿ. ನೀರು ಉಳಿಯಲಿದೆ. ಕಾರಣ ನಮ್ಮ ಬೆಳೆಗಳಿಗೂ ಸಹ ಏಪ್ರೀಲ್-10ರವರೆಗೆ ನೀರು ಬೇಕಾಗಿರುವುದರಿಂದ ತಾವುಗಳು ತಕ್ಷಣ ಜಿಲ್ಲೆಯ ಜನಪ್ರತಿನಿಧಿಗಳ, ನೀರಾವರಿ ಅಧಿಕಾರಿಗಳ, ಕೃಷಿ ಅಧಿಕಾರಿಗಳ ಮತ್ತು ತುಂಗಭದ್ರ ಮಂಡಳಿ ಅಧಿಕಾರಿಗಳ ಸಭೆ ಕರೆದು ಎಲ್.ಎಲ್.ಸಿ.ಕಾಲುವೆಗೆ ಆಂಧ್ರ ಪ್ರದೇಶದ ದಿನ ನಿತ್ಯದ 850 ಕ್ಯೂಸಸ್ ನೀರಿನೊಂದಿಗೆ ನಮ್ಮ ಕರ್ನಾಟಕದ ಪಾಲಿನ 600 ಕ್ಯೂಸಸ್ ನೀರು ಬಿಡಲು ಕ್ರಮ ಕೈಗೊಳ್ಳಬೇಕೆಂದು ತುಂಗಭದ್ರ ರೈತ ಸಂಘದ ಜಿಲ್ಲಾ, ತಾಲ್ಲೂಕು, ಗ್ರಾಮ ಘಟಕಗಳ ಪದಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ.

ಮನವಿ ಪತ್ರ ಸಲ್ಲಿಸಿದ ಸಂದರ್ಭದಲ್ಲಿ ಮುಖಂಡರಾದ ಮುಷ್ಟಗಟ್ಟೆ ಭೀಮನಗೌಡ, ಶ್ರೀಧರಗಡ್ಡೆ ವೀರನಗೌಡ, ಡಾ. ಜಿ ಪುರುಷೋತ್ತಮಗೌಡ ಜಿಲ್ಲಾಧ್ಯಕ್ಷರು ಕೊಂಚಿಗೇರಿ ಗೋವಿಂದಪ್ಪ, ದರೂರು ವೀರಭದ್ರನಾಯ್ಕ, ಶಾನವಾಸಾಪುರ ಚಂದ್ರಶೇಖರ್ ಗೌಡ, ಎಮ್ಮಿಗನೂರು ರಾಜಸಾಬ್, ಸಂಗನಕಲ್ಲು ದೊಡ್ಡ ದಾಸಪ್ಪ, ಮೋಕಾ ಸಣ್ಣ ಅಂಜಿನಪ್ಪ ಖಾಜ ವಲಿಸಾಬ್, ತಿಪ್ಪೇರುದ್ರಗೌಡ, ಇದ್ದರು.

ಅಕ್ರಮ ಸಿಲಿಂಡರ್ ಭರ್ತಿ ಜೈಲು ಶಿಕ್ಷೆ, ದಂಡ

• ಉದಯವಾಹಿನಿ, ಕಲಬುರಗಿ

ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ಅಕ್ರಮವಾಗಿ ಸಂಗ್ರಹಿಸಿಟ್ಟುಕೊಂಡು ಆಟೋಗಳಿಗೆ ಗ್ಯಾಸ್ ತುಂಬಿಸುತ್ತಿದ್ದ ಆರೋಪ ಸಾಬೀತಾಗಿದ್ದರಿಂದ ನಗರದ ಭೀಮಣ್ಣ ಮುತ್ತಣ್ಣ ಕಟ್ಟಿಮನಿ ಎಂಬಾತನಿಗೆ ಇಲ್ಲಿನ ಮೂರನೇ ಹೆಚ್ಚುವರಿ ಜೆಎಂಎಫ್‌ಸಿ ನ್ಯಾಯಾಲಯವು 3 ತಿಂಗಳು ಸಾದಾ ಜೈಲು ಶಿಕ್ಷೆ ಹಾಗೂ 10 ಸಾವಿರ ದಂಡ ವಿಧಿಸಿ ಆದೇಶ ಹೊರಡಿಸಿದೆ.

2022ರ ಮೇ 9ರಂದು ತಾಜಸುಲ್ತಾನಪುರ ಕ್ರಾಸ್‌ನಿಂದ ಅಳಂದ ಚೆಕ್ ಪೋಸ್ಟ್‌ಗೆ ಹೋಗುವ ದಾರಿಯ ಖಾಲಿ ಜಾಗದಲ್ಲಿ ಅಪರಾಧಿ ಭೀಮಣ್ಣ ಮೋಟರ್ ಪಂಪ್‌ನಿಂದ ಆಟೋಗಳಿಗೆ ಗ್ಯಾಸ್ ತುಂಬುತ್ತಿದ್ದ. ಈ ಬಗ್ಗೆ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿದಾಗ ಆತ ಸ್ಥಳದಿಂದ ಪರಾರಿಯಾಗಿದ್ದ. ನಂತರ ಗ್ಯಾಸ್ ತುಂಬಲು ಬಳಸುತ್ತಿದ್ದ ಸಲಕರಣೆಗಳನ್ನು ಜಪ್ತಿ ಮಾಡಲಾಯಿತು.

ದೂರುದಾರರು ಹಾಗೂ ಸಾಕ್ಷಿಗಳ ಹೇಳಿಕೆಯನ್ನು ಆಧರಿಸಿ ಭೀಮಣ್ಣ ಈ ಕೃತ್ಯ ಎಸಗಿದ್ದಾನೆ ಎಂಬ ತೀರ್ಮಾನಕ್ಕೆ ಬಂದ ನ್ಯಾಯಾಧೀಶ ದಸ್ತಗೀರಸಾಬ್ ಅಬ್ದುಲ್ ರಜಾಕ್ ಮುಲ್ಲಾ ಅವರು ಅಪರಾಧಿಗೆ ಜೈಲು ಶಿಕ್ಷೆ ಹಾಗೂ ದಂಡವನ್ನು ವಿಧಿಸಿದರು. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕ ಶಿವಶರಣಪ್ಪ ಹೋತಪೇಟ ಅವರು ವಾದ ಮಂಡಿಸಿದ್ದರು.

ಅತಿ ದೊಡ್ಡ ಡ್ರಗ್ಸ್ ಬೇಟೆ 75 ಕೋಟಿ ಮೌಲ್ಯದ ಮಾದಕ ವಸ್ತು ವಶಕ್ಕೆ

• ಉದಯವಾಹಿನಿ, ಮಂಗಳೂರು

ರಾಜ್ಯದ ಇತಿಹಾಸದಲ್ಲೇ ಅತಿ ದೊಡ್ಡ ಡ್ರಗ್ಸ್ ಜಾಲವನ್ನು ಮಂಗಳೂರು ಸಿಸಿಬಿ ಪೊಲೀಸರು ಭೇದಿಸಿದ್ದಾರೆ. ಪ್ರಕರಣದಲ್ಲಿ ಆಫ್ರಿಕಾ ಮೂಲದ ಇಬ್ಬರು ಮಹಿಳೆಯನ್ನು ಬಂಧಿಸಿದ್ದಾರೆ.

37.5 ಕೆಜಿ ತೂಕದ ಎಂಡಿಎಂಎ ಅನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಲಾಸ್ಟ್ ಕಸ್ಟಮರ್ ರೇಟ್ ಪ್ರಕಾರ, 74 ಕೋಟಿ ಮೌಲ್ಯದ ಎಂಡಿಎಂಎ ವಶಕ್ಕೆ ಪಡೆಯಲಾಗಿದೆ. ಪ್ರಕರಣ ಸಂಬಂಧ ದಕ್ಷಿಣ ಆಫ್ರಿಕಾ ಮೂಲದ ಇಬ್ಬರು ಮಹಿಳೆಯರನ್ನು

ಉದಯವಾಹಿನಿ ಚಿತ್ರ

ಪೊಲೀಸರು ಬಂಧಿಸಿದ್ದಾರೆ. ಕಳೆದ ಐದು ತಿಂಗಳಿಂದ ಈ ಬೃಹತ್ ಕಾರ್ಯಾಚರಣೆ ನಡೆದಿದೆ. ರಾಜ್ಯದ ಅತ್ಯಂತ ದೊಡ್ಡ ಡ್ರಗ್ಸ್ ಜಾಲ ಇದಾಗಿದೆ. ಡ್ರಗ್ಸ್ ಮಾಫಿಯಾದ ಕಿಂಗ್ ಪಿನ್ ಅಬ್ದುಲ್ ಫೈಸಲ್‌ನನ್ನು ಬಂಧಿಸಲಾಗಿದ್ದು, ಸಜೀವ ಗುಂಡುಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಈ ಕುರಿತು ಮಂಗಳೂರು ಪೊಲೀಸ್ ಕಮಿಷನರ್ ಅನುಪಮ್ ಅಗರ್ವಾಲ್ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಮಂಗಳೂರು ಸಿಸಿಬಿ ಪೊಲೀಸರು ದೊಡ್ಡ ಕಾರ್ಯಾಚರಣೆ ನಡೆಸಿದ್ದಾರೆ. ರಾಜ್ಯದ ಇತಿಹಾಸದಲ್ಲೇ ಇದು ದೊಡ್ಡ ಪ್ರಮಾಣದ ಡ್ರಗ್ಸ್ ವಶಪಡಿಸಿದ್ದೇವೆ. 6 ತಿಂಗಳ ಹಿಂದೆ ಮಂಗಳೂರಿನ ಪಂಪ್ ವೆಲ್ ಬಳಿ ಹೈದರ್ ಎಂಬವನನ್ನು ಬಂದಿಸಿದ್ದೆವು. ಆತನಿಂದ 15 ಗ್ರಾಂ ಡ್ರಗ್ ವಶಪಡಿಸಿದ್ದೆವು. ಆತನಿಗೆ ಡ್ರಗ್ಸ್ ಪೂರೈಕೆ ಮಾಡುತ್ತಿದ್ದವರ ಬಂಧನಕ್ಕೆ ಸಿಸಿಬಿ ಪೊಲೀಸರು ಆರು ತಿಂಗಳಿನಿಂದ ಕಾರ್ಯಾಚರಣೆ ಮಾಡುತ್ತಿದ್ದರು ಎಂದು ತಿಳಿಸಿದ್ದಾರೆ.

ಆಸ್ತಿ ಬರೆಯಿಸಿಕೊಂಡು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಗೆ ಬಿಟ್ಟು ಮಕ್ಕಳು ನಾಪತ್ತೆ: ಪ್ರಕರಣ ಹೆಚ್ಚಳಕ್ಕೆ ಬ್ರೇಕ್

ತಂದೆ-ತಾಯಂದಿರನ್ನೇ ಅನಾಥರನ್ನಾಗಿ ಮಾಡುತ್ತಿರುವ ಪರಿಪಾಠ ಹೆಚ್ಚಾಗಿದೆ

• ಉದಯವಾಹಿನಿ, ಕಲಬುರಗಿ

ಇಂದಿನ ಯಾಂತ್ರೀಕೃತ ಹಾಗೂ ತಂತ್ರಜ್ಞಾನ ಜೀವನದಲ್ಲಿ ಭಾವನೆಗಳು ಹಾಗೂ ಸಂಬಂಧಗಳು ಮರೆಯಾಗುತ್ತಿರುವುದು ಬೇಸರದ ಸಂಗತಿ. ಇದು ಯಾವ ಮಟ್ಟಕ್ಕೆ ಹೋಗಿದೆ ಎಂದರೆ ಜನ್ಮ ನೀಡಿದ ತಂದೆ-ತಾಯಂದಿರನ್ನೇ ಅನಾಥರನ್ನಾಗಿ ಮಾಡುತ್ತಿರುವ ಪರಿಪಾಠ ಹೆಚ್ಚಾಗಿದೆ. ಇಂಥ ಅಮಾನವೀಯ ಕೃತ್ಯಗಳಿಗೆ ''ಬ್ರೇಕ್'' ಹಾಕಲು ವೈದ್ಯಕೀಯ ಶಿಕ್ಷಣ ಇಲಾಖೆ ಮುಂದಾಗಿದೆ. ಕರ್ನಾಟಕದಲ್ಲಿ ಇತ್ತೀಚೆಗೆ ವೃದ್ಧಪೋಷಕ



ರನ್ನು ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಬಿಟ್ಟು ಹೋಗುತ್ತಿರುವ ಉದಾಹರಣೆಗಳು ಹೆಚ್ಚಾಗಿದೆ. ಅದೂ ಆಸ್ತಿಯನ್ನು ತಮ್ಮ ಹೆಸರಿಗೆ ಬರೆಯಿಸಿಕೊಂಡ ಪೋಷಕರನ್ನು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಗೆ ಬಿಟ್ಟು ಮಕ್ಕಳು ನಾಪತ್ತೆಯಾಗುತ್ತಿದ್ದಾರೆ.

ಕಳೆದ ಒಂದು ವಾರದಿಂದ ವಿಕಾಸಸೌಧದಲ್ಲಿ ರಾಜ್ಯದ ವಿವಿಧ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರು ಹಾಗೂ ಇತರ ಸದಸ್ಯರ ಸಭೆ ನಡೆಸಿ ಮಾಹಿತಿ ಪಡೆದುಕೊಂಡಿದ್ದಾರೆ.

ತಮ್ಮ ಮಕ್ಕಳ ಪರವಾಗಿ ಮಾಡಿದ ವಿಲ್‌ಗಳು ಮತ್ತು ಆಸ್ತಿ ವರ್ಗಾವಣೆಗಳನ್ನು ರದ್ದುಗೊಳಿಸುವಂತೆ ಪರಿತ್ಯಕ್ತ ಪೋಷಕರಿಗೆ ಸಚಿವರು ಕರೆ ನೀಡಿದರು. ತಮ್ಮ ಮಕ್ಕಳು ನಮ್ಮನ್ನು ನೋಡಿಕೊಳ್ಳಲು ಆಗದೇ, ತೊರೆದಿದ್ದಾರೆ. ಕೆಲವರು ಆರ್ಥಿಕ ಸಂಕಷ್ಟಗಳಿಂದ ನಮ್ಮನ್ನು ಇಲ್ಲಿ ಬಿಟ್ಟಿದ್ದಾರೆ. ನಮ್ಮ ಆಸ್ತಿಗಳನ್ನು ತಮ್ಮ ಹೆಸರಿಗೆ ವರ್ಗಾಯಿಸಿಕೊಂಡ ನಂತರ ಮಕ್ಕಳು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಗೆ ಸೇರಿಸಿ ಹೊರಟುಹೋಗಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಊಟ, ವಸತಿ, ಆಶಯ ಉಚಿತವಾಗಿ ಸಿಗುತ್ತದೆ ಎಂಬ ಉದ್ದೇಶದಿಂದ ನಮ್ಮನ್ನು ಇಲ್ಲಿ ಬಿಟ್ಟುಹೋಗಿದ್ದಾರೆ ಎಂದು ಪರಿತ್ಯಕ್ತ ಪೋಷಕರು ತಿಳಿಸಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇಂಥ ಪರಿತ್ಯಕ್ತ ಹಿರಿಯ ನಾಗರಿಕರನ್ನು ಬಿಐಎಂಎಸ್ ಅಧಿಕಾರಿಗಳು ಬೆಳಗಾವಿ ಮತ್ತು ಸುತ್ತಮುತ್ತಲಿನ 70 ಹಿರಿಯ ನಾಗರಿಕರ ನಿವೃತ್ತಿ ಗೃಹಗಳಲ್ಲಿ ಅಥವಾ ವೃದ್ಧಾಶ್ರಮಗಳಲ್ಲಿ ಆಶ್ರಯ ಕಲ್ಪಿಸಿಕೊಟ್ಟಿದ್ದಾರೆ. ಆದರೆ ಇನ್ನೂ ಅನೇಕರು ಆಸ್ಪತ್ರೆಗಳಲ್ಲಿಯೇ ಇದ್ದಾರೆ.

ಈ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದ ಸಚಿವರು, ಈ ಕುರಿತ ಪ್ರಕರಣಗಳು ಕಂಡು ಬಂದ ಕೂಡಲೇ ವೈದ್ಯಕೀಯ ಶಿಕ್ಷಣ ನಿರ್ದೇಶಕರು (ಡಿಎಂಇ) ಕೂಡಲೇ ಸಹಾಯಕ ಆಯುಕ್ತರಿಗೆ (ಕಂದಾಯ ಉಪವಿಭಾಗ) ದೂರುಗಳನ್ನು ಸಲ್ಲಿಸುವಂತೆ ಸೂಚನೆ ನೀಡಿದರು.

ಪಾಟೀಲ್ ತೀವ್ರ ಬೇಸರ

ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ (ಬಿಐಎಂಎಸ್) ಒಂದರಲ್ಲೇ, 150 ಕ್ಕೂ ಹೆಚ್ಚು ಹಿರಿಯ ನಾಗರಿಕರನ್ನು ಮಕ್ಕಳು ತೊರೆದ ಪ್ರಕರಣಗಳು ವರದಿಯಾಗಿವೆ. ರಾಜ್ಯಾದ್ಯಂತ ಇತರ ವೈದ್ಯಕೀಯ ಸಂಸ್ಥೆಗಳಲ್ಲಿ ಇಂಥ 100 ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ. ಈ ವಿಷಯವನ್ನು ಅರಿತ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್, ತೀವ್ರ ಬೇಸರ ವ್ಯಕ್ತಪಡಿಸಿದರಲ್ಲದೇ, ಕೂಡಲೇ ವಿಲ್‌ಗಳು ಮತ್ತು ಆಸ್ತಿ ವರ್ಗಾವಣೆಗಳನ್ನು ರದ್ದುಗೊಳಿಸುವಂತೆ ಕ್ರಮ ಕೈಗೊಳ್ಳಲು ಸಚಿವರು ಆದೇಶ ನೀಡಿದ್ದಾರೆ.

ಅಧಿಕಾರಿಗಳಿಗೆ ಸೂಚನೆ

ಹಿರಿಯ ನಾಗರಿಕರ ಕಾಯ್ದೆಯಡಿ ಕಾನೂನು ಕ್ರಮ ವೈದ್ಯಕೀಯ ಸಂಸ್ಥೆಗಳ ನಿರ್ದೇಶಕರು ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ, 2007 ರ ಅಡಿಯಲ್ಲಿ ಸಹಾಯಕ ಆಯುಕ್ತರು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ದೂರುಗಳನ್ನು ಸಲ್ಲಿಸಬೇಕು ಎಂದು ಡಾ. ಪಾಟೀಲ್ ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಪ್ರೀತಿ ಭಾವೈಕ್ಯತೆಗೆ ಸಾಕ್ಷಿಯಾಗಿದೆ

• ಉದಯವಾಹಿನಿ, ಸೈದಾಪುರ

ರಂಜಾನ ತಿಂಗಳು ಪ್ರತಿಯೊಬ್ಬ ಮುಸ್ಲಿಂರಿಗೆ ಪವಿತ್ರ ತಿಂಗಳಾಗಿದ್ದೂ ಈ ಸಂದರ್ಭದಲ್ಲಿ ಆಯೋಜನೆ ಮಾಡಿದ ಈ ವಿದಧ ಕಾರ್ಯ ಪ್ರೀತಿ ಭಾವೈಕ್ಯತೆಗೆ ಸಾಕ್ಷಿಯಾಗಿದೆ ಎಂದು ಜಾಮಿಯ ಮಸೀದ ಉಪಾಧ್ಯಕ್ಷ ಅಲ್ಲಾಭಾಷಾ ಹಿಚ್ಚೇರಿ ಅಭಿಪ್ರಾಯಪಟ್ಟರು.

ಉದಯವಾಹಿನಿ ಚಿತ್ರ

ಪಟ್ಟಣದ ಜಾಮೀಯಾ ಮಸೀದ ನಲ್ಲಿ ರಮಜಾನ ನಿಮಿತ್ತ ಮುಸ್ಲಿಂ ಭಾಂದವರಿಗೆ ಪ್ರಕಾಶ ರಾಠೋಡ ಹಮ್ಮಿಕೊಂಡ ಇಫ್ತಾಯರ ಕೂಟದಲ್ಲಿ ಭಾಗವಹಿಸಿ ಮಾತನಾಡಿದರು, ಎಲ್ಲರೂ ಕೂಡಿ ಹಬ್ಬಗಳನ್ನು ಆಚರಣೆ ಮಾಡುವುದರಿಂದ ಸಮಾಜದಲ್ಲಿ ಸಂತೋಷ ನೆಮ್ಮದಿ ಶಾಂತಿ ಸದಾಕಾಲ ನೆಲಸಲಿದೆ. ಪ್ರತಿ ವರ್ಷದಂತೆ ಈ ವರ್ಷವು ಆಯೋಜನೆ ಮಾಡಿದ್ದಾರೆ.

ಇವರಿಗೆ ಸೇವಾ ಮಾಡುವ ಹೆಚ್ಚಿನ ಅವಕಾಶ ಇನ್ನೂ ದೊರೆಯಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಧರ್ಮಗುರುಗಳಾದ ಮುಸ್ತಾಕ ಆಲಂ, ಕಾರ್ಯದರ್ಶಿಗಳಾದ ಅಬ್ದುಲ್ ಆಫೀಜ್, ಕುಂದನ ಕುಮಾರ, ಅನಿಲಕುಮಾರ, ತಾಸಿನ, ನಿಜಾಮುದ್ದೀನ, ಆಶ್ಪಾಕ್ ಸೇರಿದಂತೆ ಇತರರಿದ್ದರು.

ಒಂದು ಹೆಣ್ಣು ತನ್ನ ಕುಟುಂಬದ ಸಹಕಾರ ಇಲ್ಲದಿದ್ದರೆ ಎನನ್ನೂ ಮಾಡಲು ಸಾಧ್ಯವಿಲ್ಲ

ಸಾಧನೆಯ ಶಿಖರಕ್ಕೆರಲು ಕುಟುಂಬದ ಸಹಕಾರ ಅಗತ್ಯ: ಲಡ್ಡಾ ನ್ಯಾಯವಾದಿ

• ಉದಯವಾಹಿನಿ, ವಾಡಿ

ಕುಟುಂಬ ಸಹಕಾರ,ಬೆಂಬಲ ಇದ್ದರೆ ಹೆಣ್ಣು ಯಾವುದೇ ಸಮಸ್ಯೆಯನ್ನು ಎದುರಿಸಿ ತನ್ನ ಕ್ಷೇತ್ರದಲ್ಲಿ ಸಾಧನೆ ಮಾಡಬಲ್ಲಳು ಎಂದು ಹಿರಿಯ ನ್ಯಾಯವಾದಿ ಮಮತಾ ಲಡ್ಡಾ ಹೇಳಿದರು.

ಹಲಕರ್ಟಿಯ ಕಟ್ಟಿಮನಿ ಹಿರೇಮಠದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲ್ಲೂಕ ಘಟಕ ಚಿತ್ತಾಪುರ ಇವರ ನೇತೃತ್ವದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ಒಂದು ಹೆಣ್ಣು ತನ್ನ ಕುಟುಂಬದ ಸಹಕಾರ ಇಲ್ಲದಿದ್ದರೆ ಎನನ್ನೂ ಮಾಡಲು ಸಾಧ್ಯವಿಲ್ಲ, ಸಾಮಾಜಿಕ ಕಟ್ಟುಪಾಡುಗಳಿಗೆ ಜೋತುಬಿದ್ದು ಕುಟುಂಬದಲ್ಲಿ ಮಹಿಳೆಯರನ್ನು ಕಡೆಗಣಿಸಲಾಗುತ್ತಿದೆ.

ಮಹಿಳೆಯರ ಸಬಲೀಕರಣಕ್ಕಾಗಿ ಸರ್ಕಾರ ಅನೇಕ ಯೋಜನೆಗಳು ಜಾರಿಗೊಳಿಸಿದೆ,ಮಹಿಳಾ ಪರವಾಗಿ ಅನೇಕ ಕಾನೂನು ಜಾರಿಗೊಳಿಸಿದ ಪ್ರಯುಕ್ತ ಮಹಿಳೆ ಇಂದು ಎಲ್ಲಾ ಕ್ಷೇತ್ರಗಳಲ್ಲಿ ಮಹತ್ತರ ಸಾಧನೆ ಮಾಡುತ್ತಿದ್ದಾರೆ. ಆದರೂ ಸಮಾಜದಲ್ಲಿ ಮಹಿಳೆಯರ

ಉದಯವಾಹಿನಿ ಚಿತ್ರ

ಮೇಲಿನ ದೌರ್ಜನ್ಯ ಪ್ರಕರಣಗಳು ಕಡಿಮೆ ಆಗುತ್ತಿಲ್ಲ,

ವಾಡಿ ರೈಲ್ವೆ ಎಸ್‌ಐ ಅನಿತಾ ರಾಚಯ್ಯ ಸ್ವಾಮಿ ಮಾತನಾಡಿ ಹಿಂದಿನ ದಿನಗಳಲ್ಲಿ ಇದ್ದ ಲಿಂಗ ತಾರತಮ್ಯ ಇಂದು ಕಾನೂನಾತ್ಮಕ ನಿಷೇಧಿಸಲಾಗಿದೆ, ಮನೆಯಲ್ಲಿ ಹೆಣ್ಣು ಹುಟ್ಟಿದರೆ ಒಂದು ಕಣ್ಣು ಹುಟ್ಟಿದಂತೆ ಎಂದು ಸಂಭ್ರಮಿಸುವ ಕಾಲ ಬಂದಿದೆ, ಇಂದು ಬದಲಾದ ಸಾಮಾಜಿಕ ವ್ಯವಸ್ಥೆಯಲ್ಲಿ ಹೆಣ್ಣು ಮಕ್ಕಳು ರಾಜಕೀಯ, ಶೈಕ್ಷಣಿಕ, ವೈಜ್ಞಾನಿಕ, ವೈದ್ಯಕೀಯ, ಹಾಗೂ ಕಾನೂನು ಕ್ಷೇತ್ರದಲ್ಲಿ ಮಹತ್ತರ ಸಾಧನೆಗಳನ್ನು ಮಾಡುತ್ತಿದ್ದಾರೆ.ಮಹಿಳೆ ಎಷ್ಟೇ ಎತ್ತರಕ್ಕೆ ಬೆಳೆದರೂ ತನ್ನ ಕುಟುಂಬ,ಸಮಾಜವನ್ನು ಮರತಿಲ್ಲ ಎಂದು ಹೇಳಿದರು.

ಮಕ್ಕಳಿಗೆ ತಾಯಿಯೇ ಮೋದಲ ಗುರು ಆಗಿದ್ದು ಮಕ್ಕಳಿಗೆ ಸ್ವಯಂ ರಕ್ಷಣೆ ಬಗ್ಗೆ ಕಲಿಸಬೇಕು. ಹೆಣ್ಣು ಮಕ್ಕಳಿಗೆ ಮನೆಯಲ್ಲಿ ಗುಡ್ ಟಚ್, ಬ್ಯಾಡ್ ಟಚ್ ಬಗ್ಗೆ ತಿಳಿಸಿಕೊಡಬೇಕು, ಮಕ್ಕಳು ಪ್ರತಿಯೋಂದು ವಿಷಯವನ್ನು ತನ್ನ ತಾಯಿಯ ಬಳಿ ಮುಕ್ತವಾಗಿ ಹಂಚಿಕೊಳ್ಳಬೇಕು, ಇದರಿಂದಾಗ ಕೆಲವೊಂದು ಅಹಿತಕರ ಘಟನೆಗಳನ್ನು ತಪ್ಪಿಸಬಹುದಾಗಿದೆ ಎಂದು ಹೇಳಿದರು.

ಇನ್ನೊಂದೆಡೆ ನ್ಯಾಯಾಲಯಗಳಲ್ಲಿ ವಿಚ್ಛೇದನ ಪ್ರಕರಣಗಳು ಹೆಚ್ಚಾಗುತ್ತಿರುವುದೂ ಕಳವಳಕಾರಿ ಸಂಗತಿಯಾಗಿದೆ. ಇಂದಿನ ಕಾನೂನು ವ್ಯವಸ್ಥೆ ಮಹಿಳೆಯರಿಗೆ ನ್ಯಾಯ ನಿಡುವಲ್ಲಿ ಮುಸ್ಲಿಂ, ಹಿಂದೂ, ಕ್ರಿಶ್ಚಿಯನ್ ಎಂದು ಜಾತಿ ಧರ್ಮದ ನೇಲೆಯಲ್ಲಿ ನ್ಯಾಯ ಪರಿಗಣಿಸುವ ಪದ್ಧತಿ ಜಾರಿಯಲ್ಲಿದೆ. ಆದ್ದರಿಂದ ಎಲ್ಲಾ ವರ್ಗದ ಮಹಿಳೆಯರಿಗೆ ಎಕ ರೂಪವಾಗಿ ನ್ಯಾಯ ನಿಡಲು ಏಕರೂಪ ನಾಗರಿಕ ಸಂಹಿತೆ ಜಾರಿಗೆ ತರಲಾಗುತ್ತಿದೆ

**-ಮಮತಾ ಲಡ್ಡಾ, ಹಿರಿಯ ನ್

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು.

ವೃಷಭ ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು.

ಮಿಥುನ ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ.

ಕರ್ಕಾಟಕ ನಿಮ್ಮ ಚೈತನ್ಯವನ್ನು ಹೆಚ್ಚಿಸಲು ನಿಮ್ಮ ಮನಸ್ಸಿನಲ್ಲಿ ಒಂದು ಪ್ರಕಾಶಮಾನವಾದ ಸುಂದರವಾದ ಮತ್ತು ಅದ್ಭುತವಾದ ಚಿತ್ರವನ್ನು ಕಲ್ಪಿಸಿಕೊಳ್ಳಿ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು.

ಸಿಂಹ ಧೀರ್ಘಕಾಲೀನ ಅನಾರೋಗ್ಯದ ಜೊತೆ ಹೋರಾಡುವಾಗ ಆತ್ಮ ವಿಶ್ವಾಸ ಶೌರ್ಯದ ಮೂಲವೆಂದು ತಿಳಿದಿರಿ. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ.

ಕನ್ಯಾ ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ. ವೃತ್ತಿ ಅವಕಾಶಗಳನ್ನು ಹೆಚ್ಚಿಸಲು ನಿಮ್ಮ ವೃತ್ತಿಪರ ಶಕ್ತಿಯನ್ನು ಬಳಸಿ. ನಿಮ್ಮ ಚಟುವಟಿಕೆಯ ಕ್ಷೇತ್ರದಲ್ಲಿ ನೀವು ಯಶಸ್ಸು ಸಾಧಿಸುವ ಸಾಧ್ಯತೆಯಿದೆ.

ತುಲಾ ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು.

ವೃಶ್ಚಿಕ ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

ಧನಸ್ಸು ಜ್ಯೋತಿಶ್ಶಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು.

ಮಕರ ಯಾರಾದರೂ ನಿಮಗೆ ಅಸಮಾಧಾನವುಂಟುಮಾಡಬಹುದಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಈ ಅನಾವಶ್ಯಕವಾದ ಚಿಂತೆಗಳು ಮತ್ತು ಉದ್ವೇಗಗಳು ದೇಹದ ಮೇಲೆ ಖಿನ್ನತೆಯ ಪರಿಣಾಮ ಬೀರಬಹುದು.

ಕುಂಭ ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿ ಸುವುದರಿಂದ ಅವುಗಳನ್ನು ತಡೆಯಬೇಕು.

ಮೀನ ಇಂದು ನೀವು ಒಬ್ಬಗುಪ್ತ ಎದುರಾಳಿಯನ್ನು ಹೊಂದಿರುತ್ತೀರಿ ಅವರು ನಿಮ್ಮನ್ನು ತಪ್ಪಾಗಿ ಸಾಬೀತುಪಡಿಸುವುದನ್ನು ಪ್ರೀತಿಸುತ್ತಾರೆ. ಪ್ರತಿಯೊಬ್ಬರೂ ಇಂದು ನಿಮ್ಮ ಸ್ನೇಹಿತರಾಗಯಸುತ್ತಾರೆ ಮತ್ತು ನಿಮಗೆ ಇದರಿಂದ ಸಂತೋಷವೆನಿಸುತ್ತದೆ.

ಐದನೇ ಮಹಡಿಯಿಂದ ಬಿದ್ದು ಬಾಲಕ ಸಾವು

• ಉದಯವಾಹಿನಿ, ಮಂಗಳೂರು

ಅಪಾರ್ಟ್‌ಮೆಂಟ್‌ನ ಐದನೇ ಮಹಡಿಯಿಂದ ಬಿದ್ದು 13 ವರ್ಷದ ಬಾಲಕ ಸಾವನ್ನಪ್ಪಿರುವ ಘಟನೆ ಮಂಗಳೂರಿನ ಮೇರಿಹಿಲ್‌ನ ಮಾತಾ ರೆಸಿಡೆನ್ಸಿ ಅಪಾರ್ಟ್‌ಮೆಂಟ್‌ನಲ್ಲಿ ಜರುಗಿದೆ. 6ನೇ ತರಗತಿ ಓದುತ್ತಿದ್ದ ಸಮರ್ಜಿತ್ ಭಂಡಾರಿ (13) ಮೃತ ಮಗು. ಮುಂಜಾನೆ 5.30 ರಿಂದ 5.50 ರ ನಡುವೆ ಘಟನೆ ನಡೆದಿದ್ದು, ಕಾರಣಾಂತರಗಳಿಂದ ಬಾಲಕ ಅಪಾರ್ಟ್‌ಮೆಂಟ್‌ನ 5ನೇ ಮಹಡಿಗೆ ಮುಂಜಾನೆ ತೆರಳಿದ್ದ. ಮೃತ ಬಾಲಕನ ತಂದೆ ಸುದೇಶ್ ಭಂಡಾರಿ ಉದ್ಯಮಿ ಎನ್ನಲಾಗಿದೆ.

ಮಹಡಿಯಿಂದ ಬಿದ್ದಿದ್ದರಿಂದ ತಲೆ ಹಾಗೂ ಬೆನ್ನಿಗೆ ಗಂಭೀರ ಗಾಯಗಳಾಗಿವೆ. ತಕ್ಷಣ ಬಾಲಕನನ್ನು ಆಸ್ಪತ್ರೆಗೆ ಸಾಗಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಆತ ಮೃತಪಟ್ಟಿದ್ದಾನೆ.

ಬಾಲಕನ ಸಾವಿನ ಕುರಿತು ಹಲವಾರು ಅನುಮಾನಗಳು ವ್ಯಕ್ತವಾಗಿದೆ.

ಕಾರ್ಕಳ: ಮೀನು ಸಾಗಾಟದ ಲಾರಿ ಪಲ್ಟಿ

• ಉದಯವಾಹಿನಿ, ಕಾರ್ಕಳ

ಮೀನು ಸಾಗಾಟದ ಲಾರಿಯೊಂದು ಚಾಲಕನ ನಿಯಂತ್ರಣ ತಪ್ಪಿ ರಸ್ತೆಗೆ ಉರುಳಿದ ಘಟನೆ ಸಾಣೂರು ಗ್ರಾಮದ ಪುಕ್ಕೇರಿ ಬೈಪಾಸ್‌ನಲ್ಲಿ ಗುರುವಾರ ಮಧ್ಯಾಹ್ನ ಸಂಭವಿಸಿದೆ. ಅಪಘಾತದಿಂದ ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮಲ್ಪೆಯಿಂದ ಮೀನನ್ನು ತುಂಬಿಸಿಕೊಂಡ ಲಾರಿ ಕಾರ್ಕಳ, ಮೂಡುಬಿದಿರೆ ಕಡೆಗೆ ಸಂಚರಿಸುತ್ತಿತ್ತು ಎನ್ನಲಾಗಿದೆ. ಸ್ಥಳಕ್ಕೆ ಆಗಮಿಸಿದ ನಗರ ಪೊಲೀಸರು ಆಗಮಿಸಿ ರಸ್ತೆಯಲ್ಲಿ ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಿದರು.

ತಲೆ ಮೇಲೆ ಕಲ್ಲು ಹಾಕಿ ಯುವಕನ ಬರ್ಬರ ಹತ್ಯೆ

• ಉದಯವಾಹಿನಿ ಕಲಬುರಗಿ

ತಲೆ ಮೇಲೆ ಕಲ್ಲು ಎತ್ತಿ ಹಾಕಿ ಯುವಕನನ್ನು ಬರ್ಬರ ಹತ್ಯೆಗೈದ ಘಟನೆ ನಗರದ ರಾಜಾಪುರ ಕ್ರಾಸ್ ಹತ್ತಿರ ತಡರಾತ್ರಿ ನಡೆದಿದೆ. ಪ್ರಶಾಂತ ನಗರದ ರೇವಣಸಿದ್ದಪ್ಪ ತಂದೆ ರಾಮಣ್ಣ ಪಾಳೆಕಾರ್ (33) ಕೊಲೆಯಾದ ಯುವಕನಾಗಿದ್ದು, ಸ್ನೇಹಿತರ ಜೊತೆಗೆ ಸಿಗರೇಟ್ ಸೇದಲು ಬಂದಾಗ ಗಲಾಟೆಯಾಗಿ ಕೊಲೆ ನಡೆದಿದೆ ಎನ್ನಲಾಗಿದೆ.

ಸ್ನೇಹಿತರೆ ಕೊಲೆ ಮಾಡಿ ಪರಾರಿಯಾಗಿರುವ ಆಗಿರುವ ಶಂಕೆ ವ್ಯಕ್ತವಾಗಿದ್ದು, ಈ ಕುರಿತು ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸುದ್ದಿ ತಿಳಿದು ವಿಶ್ವವಿದ್ಯಾಲಯ ಠಾಣೆ ಪೊಲೀಸರು, ಶ್ವಾನದಳ ಮತ್ತು ಬೆರಳಚ್ಚು ತಜ್ಞರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಭದ್ರಾ ನದಿಯಲ್ಲಿ ಮುಳುಗಿ ರಾಜಸ್ಥಾನದ ಇಬ್ಬರು ಪ್ರವಾಸಿಗರು ಸಾವು

• ಉದಯವಾಹಿನಿ ಚಿಕ್ಕಮಗಳೂರು

ಭದ್ರಾ ನದಿಯಲ್ಲಿ ಈಜಲು ತೆರಳಿದ್ದ ರಾಜಸ್ಥಾನ ಮೂಲದ ಇಬ್ಬರು ಪ್ರವಾಸಿಗರು ಸಾವನ್ನಪ್ಪಿರುವ ಘಟನೆ ಕಳಸ ತಾಲ್ಲೂಕಿನ ಸಂಜೆ ಮೆಟ್ಟಿಲು ತೂಗು ಸೇತುವೆ ಬಳಿ ನಡೆದಿದೆ.

ಮೃತರನ್ನು ಜಗದೀಶ್ (33) ಹಾಗೂ ಚೋಟಾಸಿಂಗ್ (28) ಎಂದು ಗುರುತಿಸಲಾಗಿದೆ. ರಾಜಸ್ಥಾನದಿಂದ 12 ಜನ ಸ್ನೇಹಿತರು ಪ್ರವಾಸಕ್ಕೆಂದು ಎರಡು ಕಾರಿನಲ್ಲಿ ಕಳಸಕ್ಕೆ ಬಂದಿದ್ದರು. ಕಳಸ ಸಮೀಪದ ಭದ್ರಾ ನದಿಗೆ ನಿರ್ಮಿಸಿರುವ ತೂಗು ಸೇತುವೆ ಬಳಿ ಸೆಲ್ಫಿ ಕ್ಲಿಕ್ಕಿಸಿಕೊಂಡು ಈಜಲು ಹೋಗಿದ್ದಾಗ ಈ ದುರ್ಘಟನೆ ಸಂಭವಿಸಿದೆ. ಸಂಜೆ ಮೆಟ್ಟಿಲು ಸಮೀಪದ ತೂಗುಸೇತುವೆ ಜಾಗ ಅತ್ಯಂತ ಅಪಾಯಕಾರಿಯಾಗಿದೆ. ಭಾರೀ ಆಳ ಇರುವ ಜಾಗವಾಗಿದ್ದು, ಈ ಸ್ಥಳದಲ್ಲಿ ಮಾಹಿತಿ ಇಲ್ಲದವರು ಈಜುವುದು ಕಷ್ಟ.

ಆದರೆ, ರಾಜಸ್ಥಾನದಿಂದ ಬಂದವರಿಗೆ ಸ್ಥಳದ ಪರಿಚಯ ಇಲ್ಲದ ಕಾರಣ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಮಲ್ಪೆಯ ಮುಳುಗು ತಜ್ಞ ಭಾಸ್ಕರ್, ಇಬ್ಬರ ಮೃತದೇಹಗಳನ್ನು ಮೇಲಕ್ಕೆ ಎತ್ತಿದ್ದಾರೆ. ಅವರು ನೀರಿನಲ್ಲಿ ಮುಳುವಾಗ ಜೊತೆಗಿದ್ದ ಸ್ನೇಹಿತರು ಎಳೆಯುವ ಪ್ರಯತ್ನ ಮಾಡಿದರೂ ನದಿ ಆಳವಿದ್ದ ಕಾರಣ ಸಾಧ್ಯವಾಗಿಲ್ಲ ಎಂದು ತಿಳಿದು ಬಂದಿದೆ.

ಜಾನಪದ ಕಲೆ ಅತೀ ಪ್ರಾಚೀನವಾದದ್ದು, ಮಾನವನ ಸಂಸ್ಕೃತಿ, ಪರಂಪರೆಯೊಂದಿಗೆ ಹಾಸು ಹೊಕ್ಕಾಗಿದೆ

ಜಾನಪದ ಕಲೆ ಉಳಿಸಿ ಬೆಳೆಸಬೇಕಾದ ಅಗತ್ಯವಿದೆ: ಈಶ್ವರ ಖಂಡ್ರೆ

• ಉದಯವಾಹಿನಿ ಬೀದರ

ಜಾನಪದ ಕಲೆ ಅತೀ ಪ್ರಾಚೀನವಾದದ್ದು, ಮಾನವನ ಸಂಸ್ಕೃತಿ, ಪರಂಪರೆಯೊಂದಿಗೆ ಹಾಸು ಹೊಕ್ಕಾಗಿದೆ. ಜಾನಪದ ಕಲೆಯನ್ನು ಉಳಿಸಿ ಬೆಳೆಸಬೇಕಾದದ್ದು ಎಲ್ಲರ ಜವಾಬ್ದಾರಿಯಾಗಿದೆಯೆಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ತಿಳಿಸಿದರು.

ಕರ್ನಾಟಕ ಜಾನಪದ ಅಕಾಡೆಮಿ ರಂಗಮಂದಿರದಲ್ಲಿ ಹಮ್ಮಿಕೊಂಡ 2023–2024ನೇ ಸಾಲಿನ ಗೌರವ ಪ್ರಶಸ್ತಿ, ತಜ್ಞ ಪ್ರಶಸ್ತಿ ಪ್ರಧಾನ ಹಾಗೂ ಪುಸ್ತಕ ಬಹುಮಾನ ವಿತರಣಾ ಸಮಾರಂಭ ಬೆಂಗಳೂರಿನಿಂದ ನೇರವಾಗಿ ವಿತರಣಾ ಸಮಾರಂಭದಲ್ಲಿ ಮೊಬೈಲ್ ಮುಖಾಂತರ ಸಂದೇಶ ನೀಡಿದರು.

ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಒಣಕೆಯ ಮೂಲಕ ಭತ್ತ ಕುಟ್ಟುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜೀವ ವಿಕಾಸದಲ್ಲಿ ಜಾನಪದ ಪ್ರಮುಖ ಪಾತ್ರ ವಹಿಸುತ್ತದೆ. ಅಮ್ಮನ ಲಾಲಿ ಹಾಡಿನಿಂದ ಮನುಷ್ಯ ಮಣ್ಣಾಗುವ ತನಕ ಜಾನಪದವಿದೆ. ನೈತಿಕತೆ ಮರೆಯಾಗುತ್ತಿರುವ ಇಂದಿನ ದಿನಮಾನಗಳಲ್ಲಿ ಜಾನಪದ ನೈತಿಕತೆಯು ಅಸ್ತ್ರವಾಗಿದೆಯೆಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ, ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಹಲತುಂಬಿ ಮೂರ್ತಿ, ಮಂಜುನಾಥ ರಾಮಣ್ಣ, ಮೆಹಬೂಬ ಕಿಲ್ಲೇದಾರ, ಶಿವಮೂರ್ತಿ ಭೀಮಬಾಯಿ, ಡಾ.ನಿಂಗಪ್ಪ ಮುದೆನೂರ ಸೇರಿದಂತೆ ಇನ್ನಿತರ ಅಕಾಡೆಮಿ ಸದಸ್ಯರು, ಕರ್ನಾಟಕ ಜಾನಪದ ಅಕಾಡೆಮಿ ಬೆಂಗಳೂರಿನ ಲೆಕ್ಕಾಧಿಕಾರಿ ಸುರೇಶ ನಾಯ್ಕ, ಶ್ರೀಮತಿ ಎನ್.ನಮ್ರತಾ ಸೇರಿದಂತೆ ಇನ್ನಿತರ ಅಕಾಡೆಮಿ ಸದಸ್ಯರು ಉಪಸ್ಥಿತರಿದ್ದರು.

ಮೆರವಣಿಗೆಯಲ್ಲಿ ಬಸವರಾಜ ಧನ್ನೂರ, ಪರ್ನಾಡಿಂಸ್ ಹಿಪ್ಪಳಗಾಂವ, ಗೀತಾ ರೆಡ್ಡಿ, ಬೀದರ ವಿಶ್ವ ವಿದ್ಯಾಲಯದ ಕುಲಸಚಿವರಾದ ಸುರೇಖಾ, ಕನ್ನಡ ಸಾಹಿತ್ಯ ಪರಿಷತ್ತಿನ ಬೀದರ ಸುರೇಶ ಚನ್ನಶೆಟ್ಟಿ, ಸಿದ್ರಾಮಪ್ಪ ಮಾಸಿಮಾಡ, ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಶಿಂಧೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

> ಕರ್ನಾಟಕವು ಜಾನಪದದ ತವರಾಗಿದೆ. ಎಲ್ಲಾ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆಯ ತಾಯಿಬೇರು ಜಾನಪದ. ಮನುಷ್ಯನ ಎಲ್ಲಾ ಹಂತಗಳಲ್ಲಿ ಜನಮಾನಸದಲ್ಲಿ ಜಾನಪದ ಹಾಸುಹೊಕ್ಕಾಗಿದೆ. ಮನುಷ್ಯ ಅಧುನಿಕತೆಗೆ ಎಷ್ಟೇ ಒಗ್ಗಿಕೊಂಡರು ಜಾನಪದ ಅತೀ ಮಹತ್ವದ ಕ್ಷೇತ್ರವಾಗಿದೆ. ಯಾವುದೇ ಜಾತಿ ಮತ ಧರ್ಮಕ್ಕೆ ಸೀಮಿತವಾಗದೇ ಜಾನಪದವು ಈಗಲೂ ಉಳಿದುಕೊಂಡಿದ್ದು ಮಾನವೀಯ ಮೌಲ್ಯಗಳನ್ನು ಬೆಳೆಸುವುದರಲ್ಲಿ ಮಹತ್ವದ ಪಾತ್ರ ವಹಿಸಿದೆಯೆಂದರು. ಕಲ್ಯಾಣ ಕರ್ನಾಟಕದ ಎಲ್ಲಾ ಜಾನಪದ ಸಾಹಿತಿ ಕಲಾವಿದರ ಕಾರ್ಯಕ್ರಮಕ್ಕೆ ಕೆಕೆಆರ್‌ಡಿಬಿಯಿಂದ ಅನುದಾನ ನೀಡುವುದಾಗಿ ತಿಳಿಸಿದರು –ಈಶ್ವರ ಖಂಡ್ರೆ, ಸಚಿವ

2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಪುರಸ್ಕೃತರು

ಬಿ.ಪಿ.ಪರಮೇಶ್ವರಪ್ಪ (ಭಜನೆ), ಸಿದ್ದರಾಜು ಆರ್. (ತಂಬೂರಿ ಪದ), ಜಯಂತಿ (ಪಾಡ್ದನ), ಎನ್.ಗಣೇಶ ಗಂಗೊಳ್ಳಿ (ಜಾನಪದ ಗಾಯನ), ಎಸ್.ಆರ್.ಸರೋಜ (ಬುಡಕಟ್ಟು ಕೋಲಾಟ), ಕಮಲಾ ಮರಗನ್ನವರ (ಚೌಡಿಕೆ ಪದ), ಪ್ರಭು ಬಸಪ್ಪ ಕುಂದರಗಿ (ಜಾನಪದ ಸಂಗೀತ), ಸೋಮಣ್ಣ ದುಂಡಪ್ಪ ಧನಗೊಂಡ (ಡೊಳ್ಳು ಕುಣಿತ), ಗಂಗಪ್ಪ ಮ. ಕರಡಿ (ಕರಡಿ ಮಜಲು), ಗಣಪು ಬಡವಾ ಗೌಡ (ಹಾಲಕ್ಕಿ ಸುಗ್ಗಿ ಕುಣಿತ), ಗಿರಿಜವ್ವ ಹನುಮಪ್ಪ ಬಣಕಾರ (ಸೋಬಾನೆ ಪದ), ಡಾ.ಗೋವಿಂದಪ್ಪ ರಾಮಚಮದ್ರಪ್ಪ (ಹಗಲುವೇಷ), ಬೋರಮ್ಮ (ತತ್ವಪದ ಗಾಯನ), ಮಾರುತಿ ಕೋಳಿ (ಜಾನಪದ ಗಾಯನ), ಯಲ್ಲಮ್ಮ (ತತ್ವಪದ), ಹೆಚ್.ಚಂದ್ರಶೇಖರ ಹಡಪದ (ಭಜನೆ). ಕೆ.ಶಂಕರಪ್ಪ (ಹಗಲುವೇಷ), ಗೋಪಣ್ಣ (ತತ್ವಪದ/ಭಜನೆ).

ಹೆಸರು: ಜಾನಪದ ಲೇಖನ ಗುಚ್ಚ ಬೆಂಗಳೂರು), ಡಾ.ಕುರುವ ಬಸವರಾಜು (2022 ಪ್ರಕಾರ: ಗದ್ಯ ಪುಸ್ತಕ ಹೆಸರು: ಭೌತಿಕ ವಸ್ತು ವಿಜ್ಞಾನ ಜಾನಪದ ಮತ್ತು ವಸ್ತು ಸಂಗ್ರಹಾಲಯಗಳ ಕುರಿತು ಲೇಖನಗಳು), ಡಾ.ನಾಗ ಹೆಚ್.ಹುಬ್ಬಿ (**2022 ಪ್ರಕಾರ:** ಸಂಶೋಧನೆ ಪುಸ್ತಕ ಹೆಸರು: ಆದಿವಾಸಿ ಸಂಸ್ಕೃತಿಕ ಬೆಂಗಳೂರು), ವ.ನಂ. ಶಿವರಾಮು (**2023 ಪ್ರಕಾರ:** ಸಂಶೋಧನೆ **ಪುಸ್ತಕದ ಹೆಸರು:** ಜನಪದ ಜಾನಪದ ಮತ್ತು ಕ್ಷೇತ್ರ ಕಾರ್ಯ ಮೈಸೂರು), ಡಾ.ವಿಜಯಶ್ರೀ ಸಬರದ (2023 ಪ್ರಕಾರ: ಸಂಕೀರ್ಣ ಪುಸ್ತಕದ **ಹೆಸರು:** ಸಬರದ ಮತ್ತು ಜಾನಪದ ಬೆಂಗಳೂರು).

ಪುಸ್ತಕ ಬಹುಮಾನ ವಿಜೇತರು: ಬಿ.ಎಸ್. ಸ್ವಾಮಿ (2022 ಪ್ರಕಾರ: ಸಂಕೀರ್ಣ ಪುಸ್ತಕದ

2024ನೇ ಸಾಲಿನ ತಜ್ಞ ಪ್ರಶಸ್ತಿ ಪುರಸ್ಕೃತರು: ಡಾ.ಮೈಲಹಳ್ಳಿ ರೇವಣ್ಣ (ಡಾ.ಜೀ.ಶಂ.ಪ.ತಜ್ಞ ಪ್ರಶಸ್ತಿ), ಡಾ.ವೆಂಕಟೇಶ ಇಂದ್ವಾಡಿ (ಡಾ.ಬಿ.ಎಸ್. ಗದ್ದಗಿಮಠ ತಜ್ಞ ಪ್ರಶಸ್ತಿ).

ಮಹಿಳಾ ಸಬಲೀಕರಣ ಕ್ಷೇತ್ರದಲ್ಲಿ ನರಸಮ್ಮ ಆವುಂಟಿಗೆ ಪ್ರಶಸ್ತಿ ಪ್ರಧಾನ

• ಉದಯವಾಹಿನಿ, ಚಿಂಚೋಳಿ

ಕರ್ನಾಟಕ ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಗೊಯಿಲ್ ಹಾಗೂ ಕೈಗಾರಿಕಾ ಮತ್ತು ವಾಣಿಜ್ಯ ವಿಭಾಗದ ಆಯುಕ್ತರಾದ ರಂಜನ್ ಕೃಷ್ಣವರಿಂದ ತಾಲ್ಲೂಕಾ ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ನರಸಮ್ಮ ಲಕ್ಷ್ಮಣ ಆವುಂಟಿರು ಮಹಿಳಾ ಸಬಲೀಕರಣದಲ್ಲಿ ಅತ್ಯುತ್ತಮ ಸಾಧನೆಗೈದ ಪ್ರಯುಕ್ತ ಪ್ರಶಸ್ತಿ ಪ್ರದಾನ ಗೌರವ ಸನ್ಮಾನ ಮಾಡಲಾಯಿತು. ಬೆಂಗಳೂರನಲ್ಲಿ ಸರಕಾರದ ಸಹಯೋಗದಲ್ಲಿ ಜರುಗಿದ ಕೇನರಾ ಬ್ಯಾಂಕ್, ಸಿಡಿಬಿ ಸಂಸ್ಥೆ, ಬೈಟಿ ಸೋಲೆಷನ್‌ದಿಂದ ಆಯೋಜಿಸಿದ ಮಹಿಳಾ ಉದ್ಯಮಿಗಳ ವೇದಿಕೆ ವಿಷೇಶ ನಗರ ಗ್ರಾಮೀಣ ಮಹಿಳಾ ಉದ್ಯಮಿಗಳ 2025ರ ಕಾರ್ಯಗಾರ ಹಾಗೂ ಮಹಿಳಾ ದಿನಾಚರಣೆಯ ಅಂಗವಾಗಿ ರಾಜ್ಯದಲ್ಲಿ ವಿವಿದ ಕ್ಷೇತ್ರದಲ್ಲಿ ಸೇವೆ ಮಾಡಿದ ಸಾಧಕರಿಗೆ ಗೌರವ ಸನ್ಮಾನ ಪ್ರಶಸ್ತಿ ಪ್ರಧಾನ ಮಾಡಲಾಯಿತು. ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ಹಾಗೂ ಜನಜಾಗೃತಿ ವೇದಿಕೆ ಜಿಲ್ಲಾ ಉಪಾಧ್ಯಕ್ಷೆ ನರಸಮ್ಮ ಲಕ್ಷ್ಮಣ ಆವುಂಟಿಯವರಿಗೆ ಮಹಿಳಾ ಸಬಲಿಕರಣದಲ್ಲಿ ಗಣನೀಯ ಸೇವೆ ಸಲ್ಲಿಸದ್ದಕ್ಕಾಗಿ 2023–24ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ರಾಜ್ಯ ಸರಾಕಾರದದಿಂದ ನೀಡಿದ ರಾಜ್ಯ ಮಟ್ಟದ ಅತ್ಯುತ್ತಮ ಸ್ತ್ರೀ ಶಕ್ತಿ ಒಕ್ಕೊಟ ಪ್ರಶಸ್ತಿ,ಪ್ರಥಮ ಸ್ಥಾನ ಪಡೆದಿದರು.

ಮೆಕ್ಸಿಕೋ ಅಂತರಾಷ್ಟ್ರೀಯ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದುಕೊಂಡಿದ್ದು ಜೋತೆಯಲ್ಲಿ ತಾಲ್ಲೂಕಾ ಜಿಲ್ಲಾ ರಾಜ್ಯ ಮಟ್ಟದ ಅನೇಕ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಮಹಿಳಾ ಸಾದಕಿಯರಾದ ಕಲಬುರ್ಗಿಯ ಶ್ರೀದೇವಿ ಎಸ್.ಕಾಳೆಬಾಗ, ಬಸ್ಸಮ್ಮ ಗುತ್ತೆದಾರ,ಅನ್ನಪೂರ

ಬಲೂಚಿಸ್ತಾನದಲ್ಲಿ ಪಾಕಿಸ್ತಾನದ ಸೇನಾ ತುಕಡಿಯ ಮೇಲೆ ಆತ್ಮಾಹುತಿ ಬಾಂಬ್ ದಾಳಿ

ದಾಳಿಯ ಹೊಣೆ ಹೊತ್ತಿದೆ ಬಲೂಚ್ ಲಿಬರೇಷನ್ ಆರ್ಮಿ

ವಾಹನದಲ್ಲಿ ಸ್ಫೋಟಕ ತುಂಬಿ ದಾಳಿ

ಇಸ್ಲಮಾಬಾದ್: ಬಲೂಚಿಸ್ತಾನದಲ್ಲಿ ಪಾಕಿಸ್ತಾನದ ಸೈನಿಕರಿದ್ದ ರೈಲಿನ ಮೇಲೆ ನಡೆದ ದಾಳಿ, ಅಪಹರಣದ ಘಟನೆ ಮಾಸುವ ಮುನ್ನವೇ ಭಾನುವಾರ ಸೇನಾ ತುಕಡಿ ಮೇಲೆ ಮತ್ತೊಂದು ದಾಳಿ ನಡೆದಿದೆ. ಘಟನೆಯಲ್ಲಿ ಏಳು ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿದ್ದು, 21 ಮಂದಿ ಗಾಯಗೊಂಡಿದ್ದಾರೆ. ಕ್ವೆಟ್ಟಾದಿಂದ ತಫ್ತಾನ್‌ಗೆ ತೆರಳುತ್ತಿದ್ದ ಸೇನಾ ತುಕಡಿಯ ಮೇಲೆ ಈ ದಾಳಿ ನಡೆದಿದೆ. ಬಲೂಚ್ ಲಿಬರೇಷನ್ ಆರ್ಮಿ (ಬಿಎಲ್‌ಎ) ಈ ದಾಳಿಯ ಹೊಣೆ ಹೊತ್ತಿದ್ದು, 90 ಸೈನಿಕರನ್ನು ಹತ್ಯೆ ಮಾಡಲಾಗಿದೆ ಎಂದು ಹೇಳಿಕೊಂಡಿದೆ. ತನ್ನ ಮಜೀದ್ ಬ್ರಿಗೇಡ್ ಎಂಬ ಫಿದಾಯೀನ್ ಘಟಕವು ನೋಷ್ಕಿಯ ಆರ್‌ಸಿಡಿ ಹೆದ್ದಾರಿಯಲ್ಲಿರುವ ರಖ್ನಿನ್ ಮಿಲ್ ಬಳಿ ಸೇನಾ ತುಕಡಿಯ ಮೇಲೆ ವಾಹನದಲ್ಲಿ ಜೋಡಿಸಲಾದ ಸುಧಾರಿತ ಸ್ಫೋಟಕದ ಮೂಲಕ ದಾಳಿಯನ್ನು ನಡೆಸಿದೆ ಎಂದು ಬಲೂಚ್ ಲಿಬರೇಷನ್ ಆರ್ಮಿ ಹೇಳಿದೆ. ತುಕಡಿಯು ಎಂಟು ಬಸ್‌ಗಳನ್ನು ಒಳಗೊಂಡಿತ್ತು.

ಇವುಗಳಲ್ಲಿ ಸ್ಫೋಟದ ತೀವ್ರತೆಗೆ ಒಂದು ಬಸ್ ಸಂಪೂರ್ಣವಾಗಿ ನಜ್ಜುಗುಜ್ಜಾಗಿದೆ, ಎಂದು ಬಿಎಲ್‌ಎ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ಸ್ಥಳದಿಂದ ಸಂಗ್ರಹಿಸಿದ ಸಾಕ್ಷ್ಯಗಳ ಪ್ರಕಾರ ಆತ್ಮಾಹುತಿ ದಾಳಿಕೋರನು ಸ್ಫೋಟಕಗಳಿಂದ ತುಂಬಿದ ವಾಹನವನ್ನು ಫ್ರಂಟಿಯರ್ ಕಾರ್ಪ್ಸ್ (ಎಫ್‌ಸಿ) ತುಕಡಿಯೊಳಗೆ ನುಗ್ಗಿಸಿದ್ದಾನೆ, ಎಂದು ವಿವರಿಸಿದ್ದಾರೆ. ಗಾಯಾಳುಗಳಿಗೆ ನೋಷ್ಕಿ ಟೀಚಿಂಗ್ ಆಸ್ಪತ್ರೆ ಮತ್ತು ಎಫ್‌ಸಿ ಕ್ಯಾಂಪ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ತುರ್ತು ಕ್ರಮಗಳನ್ನು ಜಾರಿಗೊಳಿಸಲಾಗಿದೆ ಎಂದು ಡಾನ್ ವರದಿ ಮಾಡಿದೆ. ಹಲವಾರು ಗಾಯಾಳುಗಳ ಪರಿಸ್ಥಿತಿ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಹೆಚ್ಚಾಗಬಹುದು ಎಂದು ಅಧಿಕಾರಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ಬಲೂಚಿಸ್ತಾನದಲ್ಲಿ ಬಂಡುಕೋರ ಚಟುವಟಿಕೆಗಳು ಹೆಚ್ಚಾಗಿದ್ದು, ಬಿಎಲ್ ಎನಂಥ ಪ್ರತ್ಯೇಕತಾವಾದಿ ಸಂಘಟನೆಗಳು ಭದ್ರತಾ ಪಡೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುತ್ತಿವೆ. ಇತ್ತೀಚೆಗೆ ನಡೆದ ರೈಲು ಅಪಹರಣ ಘಟನೆಯಲ್ಲಿ 28 ಸೈನಿಕರು ಸಾವಿಗೀಡಾಗಿದ್ದನ್ನು ಇಲ್ಲಿ ಸ್ಮರಿಸಬಹುದು. ಇದೇ ಘಟನೆಯಲ್ಲಿ ಹತ್ತಾರು ನಾಗರಿಕರೂ ಪ್ರಾಣ ಕಳೆದುಕೊಂಡಿದ್ದರು.

ಸ್ಫೋಟದ ಬಳಿಕ ದಾಳಿ

ಸ್ಫೋಟದ ಬಳಿಕ ತನ್ನ ಫತೇಹ್ ಸ್ಕ್ವಾಡ್ ಮತ್ತೊಂದು ಬಸ್ ಅನ್ನು ಸುತ್ತುವರೆದಿದ್ದು, ಬಸ್‌ನಲ್ಲಿದ್ದ ಎಲ್ಲಾ ಸೈನಿಕರನ್ನು ವ್ಯವಸ್ಥಿತವಾಗಿ ಹತ್ಯೆ ಮಾಡಿದೆ ಎಂದು ಬಿಎಲ್‌ಎ ಹೇಳಿಕೊಂಡಿದೆ. ಘಟನೆ ಸಂಬಂಧ ಪಾಕಿಸ್ತಾನದ ದೈನಿಕ ಡಾನ್‌ಗೆ ಪ್ರತಿಕ್ರಿಯೆ ನೀಡಿರುವ ನೋಷ್ಕಿ ಸ್ಟೇಷನ್ ಹೌಸ್ ಆಫೀಸರ್ (ಎಸ್‌ಎಚ್‌ಒ) ಜಫರುಲ್ಲಾ ಸುಮಲಾನಿ ದಾಳಿಯನ್ನು ದೃಢಪಡಿಸಿದ್ದಾರೆ, ಪ್ರಾಥಮಿಕ ತನಿಖೆಗಳ ಪ್ರಕಾರ ಇದು ಆತ್ಮಾಹುತಿ ಬಾಂಬ್ ದಾಳಿಯಾಗಿದೆ ಎಂದು ಹೇಳಿದ್ದಾರೆ.

90 ಸೈನಿಕರ ಹತ್ಯೆ

ಭಾನುವಾರ ಬಲೂಚಿಸ್ತಾನದಲ್ಲಿ ಪಾಕಿಸ್ತಾನದ ಸೇನಾ ತುಕಡಿಯ ಮೇಲೆ ನಡೆದ ದಾಳಿಯಲ್ಲಿ ಏಳು ಸೈನಿಕರು ಸಾವನ್ನಪ್ಪಿದ್ದು, 21 ಮಂದಿ ಗಾಯಗೊಂಡಿದ್ದಾರೆ. ಬಲೂಚ್ ಲಿಬರೇಷನ್ ಆರ್ಮಿ ಈ ದಾಳಿಯ ಹೊಣೆ ಹೊತ್ತಿದ್ದು, 90 ಸೈನಿಕರನ್ನು ಹತ್ಯೆಗೈದಿರುವುದಾಗಿ ಹೇಳಿದೆ. ಬಲೂಚಿಸ್ತಾನದ ಬಂಡುಕೋರ ಪಡೆಯು ಆರ್‌ಸಿಡಿ ಹೆದ್ದಾರಿಯಲ್ಲಿರುವ ಸೇನಾ ತುಕಡಿಯ ಮೇಲೆ ವಾಹನದಲ್ಲಿ ಸ್ಫೋಟಕ ತುಂಬಿ ದಾಳಿ ನಡೆಸಿದೆ.

ಯೆಮೆನ್ ಮೇಲೆ ಅಮೆರಿಕ ನಡೆಸಿದ ದಾಳಿಗೆ

31 ಹೌತಿ ಉಗ್ರರು ಬಲಿ

ವಾಷಿಂಗ್ಟನ್: ಹೌತಿ ಬಂಡುಕೋರ ರಿರುವ ಯೆಮೆನ್ ಮೇಲೆ ಅಮೆರಿಕ ದೊಡ್ಡ ಪ್ರಮಾಣದ ದಾಳಿ ನಡೆಸಿದ್ದರಿಂದ ಕನಿಷ್ಠ 31 ಜನರು ಸಾವನ್ನಪ್ಪಿದ್ದಾರೆ. ಮಾತ್ರವಲ್ಲ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್-ಮೈತ್ರಿ ಹೌತಿಗಳಿಗೆ ಅವರ ಸಮಯ ಮುಗಿದಿದೆ ಎಂದು ಎಚ್ಚರಿಸಿದ್ದಾರೆ. ಈ ಗುಂಪಿಗೆ ಬೆಂಬಲವನ್ನು ತಕ್ಷಣ ನಿಲ್ಲಿಸುವ ಅಗತ್ಯವಿದೆ ಎಂದು ಟ್ರಂಪ್ ಇರಾನ್‌ಗೆ ಎಚ್ಚರಿಕೆ ನೀಡಿದ್ದಾರೆ. ಯೆಮೆನ್ ರಾಜಧಾನಿ ಸನಾ ಮೇಲೆ ಅಮೆರಿಕ ನಡೆಸಿದ ದಾಳಿಯಲ್ಲಿ ಕನಿಷ್ಠ 13 ನಾಗರಿಕರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ, ಹೌತಿ ಭದ್ರಕೋಟೆಯಾದ ಉತ್ತರ ಪ್ರಾಂತ್ಯದ ಸಾದಾದಲ್ಲಿ ನಾಲ್ಕು ಮಕ್ಕಳು ಮತ್ತು ಒಬ್ಬ ಮಹಿಳೆ ಸೇರಿದಂತೆ 11 ಜನರು ಸಾವನ್ನಪ್ಪಿದ್ದಾರೆ. ಸ್ಫೋಟಗಳು ಹಿಂಸಾತ್ಮಕವಾಗಿದ್ದವು ಮತ್ತು ನೆರೆಹೊರೆಯನ್ನು ಭೂಕಂಪದಂತೆ ನಡುಗಿಸಿದವು. ಅವರು ನಮ್ಮ ಮಹಿಳೆಯರು ಮತ್ತು ಮಕ್ಕಳನ್ನು ಭಯಭೀತಗೊಳಿಸಿದರು ಎಂದು ನಿವಾಸಿಯೊಬ್ಬರು ಸುದ್ದಿ ಸಂಸ್ಥೆ ರಾಯಿಟರ್ಸ್‌ಗೆ ತಿಳಿಸಿದರು.

ಜನವರಿಯಲ್ಲಿ ಟ್ರಂಪ್ ಅಧಿಕಾರ ವಹಿಸಿಕೊಂಡ ನಂತರ ನಡೆದ ಮೊದಲ ದಾಳಿಯನ್ನು ಹೌತಿಗಳ ರಾಜಕೀಯ ಬ್ಲ್ಯಾಕ್‌ಮೇಲ್ ಯುದ್ಧ ಅಪರಾಧ ಎಂದು ಬಣ್ಣಿಸಿದೆ. ಯೆಮೆನ್ ಸಶಸ್ತ್ರ ಪಡೆಗಳು ಪ್ರತೀಕಾರ ತೀರಿಸಿಕೊಳ್ಳಲು ಸಂಪೂರ್ಣವಾಗಿ ಸಿದ್ಧವಾಗಿವೆ ಎಂದು ಅದು ಹೇಳಿದೆ.

ಸುಂಟರಗಾಳಿಗೆ 33 ಅಮೆರಿಕನ್ನರು ಬಲಿ

ಹೂಸ್ಟನ್: ಮಧ್ಯ ಅಮೆರಿಕಾದಾದ್ಯಂತ ಸುಂಟರಗಾಳಿ, ಹಿಂಸಾತ್ಮಕ ಬಿರುಗಾಳಿಗಳಿಗೆ ಕನಿಷ್ಠ 33 ಜನರು ಸಾವನ್ನಪ್ಪಿದ್ದಾರೆ ಮತ್ತು ನೂರಾರು ಮಂದಿ ಗಾಯಗೊಂಡಿದ್ದಾರೆ.

ಈ ವಾರಾಂತ್ಯದಲ್ಲಿ ಇನ್ನಷ್ಟು ಸುಂಟರಗಾಳಿಗಳು ಬರಲಿವೆ ಎಂದು ಮುನ್ಸೂಚಕರು ಎಚ್ಚರಿಸಿದ್ದಾರೆ. ಈ ಮಧ್ಯೆ, ಬಿರುಗಾಳಿಗೆ ಮನೆಗಳ ಛಾವಣಿಗಳು ಹಾರಿ ಹೋಗಿವೆ ಮತ್ತು ದೊಡ್ಡ ಟ್ರಕ್‌ಗಳು ಪಲ್ಟಿಯಾಗಿವೆ ಎಂದು ವರದಿಯಾಗಿದೆ. ಕಾನ್ಸಾಸ್‌ನಲ್ಲಿ 50 ಕ್ಕೂ ಹೆಚ್ಚು ವಾಹನಗಳನ್ನು ಒಳಗೊಂಡ ಅಪಘಾತದಲ್ಲಿ ಎಂಟು ಜನರು ಸಾವನ್ನಪ್ಪಿದ್ದಾರೆ. ಇದು ತೀವ್ರ ಧೂಳಿನ ಬಿರುಗಾಳಿ ಸಮಯದಲ್ಲಿ ಕಡಿಮೆ ಗೋಚರತೆ ಯಿಂದಾಗಿ ಸಂಭವಿಸಿದೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ.

ಮಿಸೌರಿ ರಾಜ್ಯ ಹೆದ್ದಾರಿ ಗಸ್ತು ಚಂಡಮಾರುತ ಸಂಬಂಧಿತ 12 ಸಾವುನೋವುಗಳನ್ನು ದೃಢಪಡಿಸಿದೆ ಮತ್ತು ಹವಾಮಾನದಿಂದ ನಾಶವಾದ ಮರೀನಾದಲ್ಲಿ ದೋಣಿಗಳು ಒಂದರ ಮೇಲೊಂದರಂತೆ ರಾಶಿ ಬಿದ್ದಿರುವ ಚಿತ್ರಗಳನ್ನು ಹಂಚಿಕೊಂಡಿದೆ. ಮರಗಳು ಮತ್ತು ವಿದ್ಯುತ್ ಮಾರ್ಗಗಳು ಉರುಳಿಬಿದ್ದಿವೆ ಮತ್ತು ಕಟ್ಟಡಗಳಿಗೆ ಹಾನಿಯಾಗಿದೆ ಎಂದು ರಾಜ್ಯ ಪೊಲೀಸರು ವರದಿ ಮಾಡಿದ್ದಾರೆ. ಕೆಲವು ಪ್ರದೇಶಗಳು ಸುಂಟರಗಾಳಿ, ಗುಡುಗು ಮತ್ತು ದೊಡ್ಡ ಆಲಿಕಲ್ಲುಗಳಿಂದ ತೀವ್ರವಾಗಿ ಪರಿಣಾಮ ಬೀರಿವೆ.

ಇದು ನಾನು ಅನುಭವಿಸಿದ ಅತ್ಯಂತ ಭಯಾನಕ ವಿಷಯವಾಗಿತ್ತು, ಅದು ತುಂಬಾ ವೇಗವಾಗಿತ್ತು. ನಮ್ಮ ಕಿವಿಗಳು ಸ್ಫೋಟಗೊಳ್ಳುತ್ತಿದ್ದವು ಎಂದು ಮಿಸ್ ರಿಯ ತನ್ನ ಮನೆಯಿಂದ ಸ್ಥಳಾಂತರಿಸಲ್ಪಟ್ಟ ಅಲಿಸಿಯಾ ವಿಲ್ಲನ್ ಟಿವಿ ಸ್ಟೇಷನ್ ಕೆಎಸ್ಟಿಕೆಗೆ ತಿಳಿಸಿದ್ದಾರೆ.

ಐಎಸ್‌ಎಸ್ ತಲುಪಿದ ನಾಸಾ ಸಿಬ್ಬಂದಿ

ಸುನಿತಾ ವಾಪಸಾತಿ ಹಾದಿ ಸುಗಮ

ವಾಷಿಂಗ್ಟನ್: ನಾಸಾದ ಬದಲಿ ಸಿಬ್ಬಂದಿ ಭಾನುವಾರ ಬೆಳಿಗ್ಗೆ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ (ಐಎಸ್‌ಎಸ್) ಯಶಸ್ವಿಯಾಗಿ ಬಂದಿಳಿದಿದ್ದು, ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲೋರ್ ಅವರ ಬಹುನಿರೀಕ್ಷಿತ ಮರಳುವಿಕೆಯಲ್ಲಿ ನಿರ್ಣಾಯಕ ಹಂತವನ್ನು ಪೂರ್ಣಗೊಳಿಸಿದ್ದಾರೆ. ಸ್ಪೇಸ್‌ಎಕ್ಸ್ ಡ್ರಾಗನ್ ಬಾಹ್ಯಾಕಾಶ ನೌಕೆಯಲ್ಲಿ ಪ್ರಾರಂಭಿಸಲಾದ ಕ್ರೂ -10 ಮಿಷನ್, ಕ್ರೂ -9 ಗಗನಯಾತ್ರಿಗಳ ನಿರ್ಗಮನವನ್ನು ಸುಲಭಗೊಳಿಸುವ ಗುರಿಯನ್ನು ಹೊಂದಿರುವ ವೇಗವರ್ಧಿತ ಸಮಯವನ್ನು ಅನುಸರಿಸಿ ಭಾರತೀಯ ಕಾಲಮಾನ ಇಂದು ಬೆಳಿಗ್ಗೆ 9:40 ಕ್ಕೆ ಐಎಸ್‌ಎಸ್‌ಗೆ ಆಗಮಿಸಿತು. ನಾಲ್ಕು ಸದಸ್ಯರ ಕ್ರೂ -10 ತಂಡದಲ್ಲಿ ನಾಸಾ ಗಗನಯಾತ್ರಿಗಳಾದ ಅನ್ನೆ ಮೆಕ್ಕ್ಲೈನ್ ಮತ್ತು ನಿಕೋಲ್ ಅಯರ್ಸ್, ಜಪಾನ್‌ನ ಟಕುಯಾ ಒನಿಶಿ ಮತ್ತು ರಷ್ಯಾದ ಕಿರಿಲ್ ಪೆಸ್ಕೊವ್ ಇದ್ದಾರೆ.

ಬಾಹ್ಯಾಕಾಶ ನೌಕೆಯ ಸಿಬ್ಬಂದಿ ಮತ್ತು ಐಎಸ್‌ಎಸ್ ತಂಡದ ಮೇಲ್ವಿಚಾರಣೆಯಲ್ಲಿ ಸುಗಮ ಸ್ವಾಯತ್ತ ಡಾಕಿಂಗ್ ಕುಶಲತೆಯ ನಂತರ, ಹೊಸದಾಗಿ ಆಗಮಿಸಿದವರನ್ನು ಅಸ್ತಿತ್ವದಲ್ಲಿರುವ ಎಕ್ಸ್‌ಡಿಷನ್ 72 ಸಿಬ್ಬಂದಿ ಸ್ವಾಗತಿಸಿದರು. ಅವರ ಮಿಷನ್ ಮುಂದಿನ ಆರು ತಿಂಗಳಲ್ಲಿ ವಿಸ್ತರಿಸಲಿದ್ದು, ಬಾಹ್ಯಾಕಾಶ ನಿಲ್ದಾಣದಲ್ಲಿ ನಿರ್ಣಾಯಕ ಕಾರ್ಯಾಚರಣೆಗಳ ಮೇಲ್ವಿಚಾರಣೆ ನಡೆಸಲಿದೆ.

ಸಿಬ್ಬಂದಿ ಹಸ್ತಾಂತರ ಅವಧಿಯ ನಂತರ ಕ್ರೂ -9 ಸದಸ್ಯರಾದ ಹೇಗ್, ವಿಲಿಯಮ್ಸ್, ವಿಲೋರ್ ಮತ್ತು ಗೋರ್ಬುನೊವ್ ಭೂಮಿಗೆ ಮರಳುವ ಮೊದಲು ಬಾಹ್ಯಾಕಾಶ ನಿಲ್ದಾಣದಲ್ಲಿನ ಸಿಬ್ಬಂದಿಗಳ ಸಂಖ್ಯೆ 11 ಕ್ಕೆ ಹೆಚ್ಚಾಗುತ್ತದೆ. ವಿಲಿಯಮ್ಸ್ ಮತ್ತು ವಿಲೋರ್ ಗೆ. ಇದು ಅನಿರೀಕ್ಷಿತವಾಗಿ ದೀರ್ಘಕಾಲದ ಕಾರ್ಯಾಚರಣೆಯ ಅಂತಿಮ ಹಂತವನ್ನು ಸೂಚಿಸುತ್ತದೆ. ಆರಂಭದಲ್ಲಿ ಜೂನ್ 5, 2024 ರಂದು ಬೋಯಿಂಗ್‌ನ ಸ್ಟಾರ್‌ಲೈನರ್ ಕ್ಯಾಪ್ಸಲ್‌ನಲ್ಲಿ ಅಲ್ಪಾವಧಿಯ ಪರೀಕ್ಷಾ ಹಾರಾಟಕ್ಕಾಗಿ ಉಡಾವಣೆ ಮಾಡಿದ ಇವರಿಬ್ಬರು ತಾಂತ್ರಿಕ ವೈಫಲ್ಯಗಳಿಂದಾಗಿ ಕಕ್ಷೆಯಲ್ಲಿ ಸಿಲುಕಿಕೊಂಡಿದ್ದರು.

ಸರಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವುದು ತುಷ್ಟೀಕರಣದ ಪರಾಕಾಷ್ಠೆ

ಭಾರತೀಯ ಸಂವಿಧಾನದ ಮೂಲ ಆಶಯಕ್ಕೆ ವಿರುದ್ಧ

ರಾಯ್ಚೂರ: ಸರಕಾರಿ ಗುತ್ತಿಗೆಗಳಲ್ಲಿ ಶೇ.4ರಷ್ಟನ್ನು ಮುಸ್ಲಿಮರಿಗೆ ಮೀಸಲಿಡುವ ಕರ್ನಾಟಕದ ಆಡಳಿತಾರೂಢ ಕಾಂಗ್ರೇಸ್ ನಿರ್ಧಾರವು ತುಷ್ಟೀಕರಣದ ಉತ್ತುಂಗದಲ್ಲಿದೆ ಮತ್ತು ಭಾರತೀಯ ಸಂವಿಧಾನದ ಮೂಲ ಆಶಯಕ್ಕೆ ವಿರುದ್ಧವಾಗಿದೆ ಎಂದು ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣುದೇವ್ ಸಾಯಿ ಹೇಳಿದ್ದಾರೆ.

ಈ ಅಸಾಂವಿಧಾನಿಕ ನಿರ್ಧಾರವನ್ನು ತಕ್ಷಣವೇ ಹಿಂತೆಗೆದುಕೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸೂಚನೆ ನೀಡುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಸಂಸದ ರಾಹುಲ್ ಗಾಂಧಿ ಅವರಿಗೆ ಸಾಯಿ ಒತ್ತಾಯಿಸಿದ್ದಾರೆ. ಕಾಂಗ್ರೇಸ್ ಎಲ್ಲೆಲ್ಲಿ ಅಧಿಕಾರಕ್ಕೆ ಬಂದರೂ ಸಂವಿಧಾನದ ಮೂಲ ಆಶಯವನ್ನು ಕತ್ತು ಹಿಸುಕಲು ಪ್ರಯತ್ನಿಸುತ್ತಿದೆ ಎಂದು ಅವರು ಆರೋಪಿಸಿದರು. ಮುಸ್ಲಿಂ ಗುತ್ತಿಗೆದಾರರಿಗೆ ಸರ್ಕಾರಿ ಟೆಂಡರ್ ಗಳಲ್ಲಿ ಶೇ.4ರಷ್ಟು ಮೀಸಲಾತಿ ನೀಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ (ಕೆಟಿಪಿಪಿ) ಕಾಯ್ದೆಗೆ ತಿದ್ದುಪಡಿ ತರಲು ಸಿದ್ದರಾಮಯ್ಯ ಸರ್ಕಾರ ಒಪ್ಪಿಗೆ ನೀಡಿದೆ. ಈ ನಿರ್ಧಾರವು ಸಮಾಜದಲ್ಲಿ ದ್ವೇಷವನ್ನು ಹರಡಲು ಕಾಂಗ್ರೇಸ್‌ನ ಯೋಜಿತ ಪಿತೂರಿಯಾಗಿದೆ. ನ್ಯಾಯಾಲಯಗಳು ಈಗಾಗಲೇ ಧರ್ಮ ಆಧಾರಿತ ಮೀಸಲಾತಿಯನ್ನು ಅಸಾಂವಿಧಾನಿಕ ಎಂದು ಘೋಷಿಸಿವೆ. ಆದ್ದರಿಂದ ಈ ನಿರ್ಧಾರವೂ ಸರಿ ಇಲ್ಲ. ಈ ಕೂಡಲೆ ತನ್ನ ನಿರ್ಧಾರದಿಂದ ಕರ್ನಾಟಕ ಸರ್ಕಾರ ಹಿಂದೆ ಸರಿಯಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಸೆಂಟ್ರಲ್ ಬ್ಯಾಂಕ್ ಕಚೇರಿಯಲ್ಲಿ ಬೆಂಕಿ ಅವಘಡ

ಮುಂಬೈ: ಮಹಾರಾಷ್ಟ್ರದ ಅಮರಾವತಿಯಲ್ಲಿರುವ ಸೆಂಟ್ರಲ್ ಬ್ಯಾಂಕ್ ಶಾಖಾ ಕಚೇರಿಯಲ್ಲಿ ಸಂಭವಿಸಿದ ಭಾರಿ ಬೆಂಕಿ ಅವಘಡದಲ್ಲಿ ಲಕ್ಷಾಂತರ ರೂಪಾಯಿ ನಗದು, ಪ್ರಮುಖ ದಾಖಲೆಗಳು ಸುಟ್ಟುಹೋಗಿವೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಬ್ಯಾಂಕ್ ತೆರೆದ ಸ್ವಲ್ಪ ಸಮಯದ ನಂತರ ಬ್ಯಾಂಕಿನಲ್ಲಿ ಅಳವಡಿಸಲಾದ ಹವಾನಿಯಂತ್ರಣ ಸಾಧನದಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ಎಷ್ಟು ಭೀಕರವಾಗಿತ್ತೆಂದರೆ ಅದು ಇಡೀ ಬ್ಯಾಂಕ್ ಆವರಣವನ್ನು ಆವರಿಸಿತು. ಬೆಂಕಿ ಹೊತ್ತಿಕೊಂಡ ತಕ್ಷಣ, ಬ್ಯಾಂಕ್ ಸಿಬ್ಬಂದಿ ಭಯಭೀತರಾಗಿ ಹೊರಗೆ ಓಡಿಹೋದರು, ಇದರಿಂದಾಗಿ ಯಾವುದೇ ಜೀವ ಅಥವಾ ಆಸ್ತಿಪಾಸ್ತಿ ನಷ್ಟ ಸಂಭವಿಸಿಲ್ಲ ಎಂದು ಅವರು ಹೇಳಿದರು. ಬ್ಯಾಂಕಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಎಂಬ ಮಾಹಿತಿ ಬಂದ ಕೂಡಲೇ ಅಗ್ನಿಶಾಮಕ ದಳದ ತಂಡ ಸ್ಥಳಕ್ಕೆ ತಲುಪಿ ಬೆಂಕಿ ನಂದಿಸುವ ಕಾರ್ಯಾಚರಣೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸ್ಥಳೀಯರ ದೊಡ್ಡ ಗುಂಪು ಸ್ಥಳದಲ್ಲಿ ಜಮಾಯಿಸಿತು. ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಸಹ ಹರಸಾಹಸ ಪಟ್ಟರು. ಎಲ್ಲಾ ದಾಖಲೆಗಳು ಮತ್ತು ಪೀಠೋಪಕರಣಗಳು ಸುಟ್ಟು ಭಸ್ಮವಾಗಿವೆ ಎಂದು ಚಂದೂರು ರೈಲ್ವೆ ಪೊಲೀಸ್ ಠಾಣೆಯ ಎಸ್ ಎಚ್ ಒ ಅಜಯ್ ಅದ್ರಿ ಹೇಳಿದ್ದಾರೆ.

ಬ್ಯಾಂಕ್ ಆಡಳಿತದಿಂದ ದೂರು ನೀಡಲಾಗಿದೆ. ಘಟನೆಯಲ್ಲಿ ಲಕ್ಷಾಂತರ ರೂಪಾಯಿ ಮೌಲ್ಯದ ನಗದು ಸುಟ್ಟುಹೋಗಿದೆ. ಬೆಂಕಿಯ ನಿಖರವಾದ ಕಾರಣವನ್ನು ಕಂಡುಹಿಡಿಯಲು ಪೊಲೀಸರು ಪ್ರಯತ್ನಿಸುತ್ತಿದ್ದಾರೆ. ಇಷ್ಟು ದೊಡ್ಡ ಬೆಂಕಿಗೆ ನಿಖರವಾಗಿ ಕಾರಣವೇನು ಎಂಬುದನ್ನು ದೃಢಪಡಿಸಲು ವಿಧಿವಿಜ್ಞಾನ ತಂಡವನ್ನು ಸಹ ಕರೆಯಬಹುದು ಎಂದು ಹೇಳಿದ್ದಾರೆ.

ಹಿಂದೂಗಳ ಮೇಲಿನ ಹಲ್ಲೆ ತಡೆಯಲು ಆಗಲಿಲ್ಲ: ಯೋಗಿ

ಗೋರಖ್‌ಪುರ: ಮಹಾಕುಂಭ ವ್ಯವಸ್ಥೆಗಳನ್ನು ಟೀಕಿಸಿದ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಹೇಳಿಕೆಗೆ ತಿರುಗೇಟು ನೀಡಿದ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಪ್ರಯಾಗರಾಜ್‌ನ ಮಹಾಕುಂಭ ಮೇಳವನ್ನು 'ಮೃತ್ಯುಕುಂಭ' ಎಂದು ಹೇಳಿದ್ದವರು ಹೋಳಿ ಸಮಯದಲ್ಲಿ ಹಿಂದೂಗಳ ಮೇಲಿನ ದಾಳಿಯನ್ನು ನಿಯಂತ್ರಿಸಲು ಸಾಧ್ಯವಿಲ್ಲ ಎಂದು ಹೇಳಿದರು. ಗೋರಖ್‌ಪುರ ಪತ್ರಕರ್ತರ ಪ್ರೆಸ್ ಕ್ಲಬ್ ಗೆ ಹೊಸದಾಗಿ ಆಯ್ಕೆಯಾದ ಪದಾಧಿಕಾರಿಗಳ ಪ್ರಮಾಣವಚನ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಯೋಗಿ ಆದಿತ್ಯನಾಥ, ಮೊದಲ ಬಾರಿಗೆ ಜನರು ತಮಿಳುನಾಡಿನಿಂದ ಮಹಾ ಕುಂಭಕ್ಕೆ ಬಂದರು. ಕೇರಳದಿಂದಲೂ ಭಕ್ತರು ಬಂದರು. ಉತ್ತರ ಪ್ರದೇಶದ ಜನಸಂಖ್ಯೆ 25 ಕೋಟಿ ಮತ್ತು ಇಲ್ಲಿ ಹೋಳಿ ಶಾಂತಿಯುತವಾಗಿ ಮುಗಿಯಿತು. ಆದರೆ, ಪಶ್ಚಿಮ ಬಂಗಾಳದಲ್ಲಿ, ಹೋಳಿ ಸಮಯದಲ್ಲಿ ಹಲವಾರು ದಾಳಿಗಳು ನಡೆದವ ಎಂದು ಅವರು ಹೇಳಿದರು. ಹೋಳಿ ದಿನದಂದು, ಪಶ್ಚಿಮ ಬಂಗಾಳದ ಉತ್ತರ 24 ಪರಗಣ ಜಿಲ್ಲೆಯಲ್ಲಿ ಆಚರಣೆಯ ಸಮಯದಲ್ಲಿ ನಡೆದ

ಶ್ರೀಕೃಷ್ಣ ದೇಗುಲಕ್ಕೆ ಭೇಟಿ ನೀಡಿದ ಪ್ರೇಮ್, ಶರಣ್ಯ ಶೆಟ್ಟಿ

ಲವ್ಲಿ ಸ್ಟಾರ್ ಪ್ರೇಮ್ ಮತ್ತು ಶರಣ್ಯ ಶೆಟ್ಟಿ ಉಡುಪಿ ಶ್ರೀಕೃಷ್ಣ ದೇಗುಲಕ್ಕೆ ಭೇಟಿ ನೀಡಿದ್ದಾರೆ. ಚಿತ್ರತಂಡದ ಜೊತೆ ಪ್ರೇಮ್ ಹಾಗೂ ಶರಣ್ಯ ಶ್ರೀಕೃಷ್ಣ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಪ್ರೇಮ್ ನಟನೆಯ ಹೊಸ ಸಿನಿಮಾಗೆ ಶರಣ್ಯ ಶೆಟ್ಟಿ ನಾಯಕಿಯಾಗಿದ್ದಾರೆ. ಹಾಗಾಗಿ ಈ ಸಿನಿಮಾದ ಶೂಟಿಂಗ್‌ಗೆ ಚಾಲನೆ ಸಿಗುವ ಮುನ್ನ ಚಿತ್ರತಂಡದೊಂದಿಗೆ ಉಡುಪಿಯ ಶ್ರೀಕೃಷ್ಣ ದೇಗುಲಕ್ಕೆ ಭೇಟಿ ನೀಡಿದ್ದಾರೆ. ಈ ಕುರಿತು ಸೋಶಿಯಲ್ ಮೀಡಿಯಾದಲ್ಲಿ ನಟಿ ಪೋಸ್ಟ್ ಹಂಚಿಕೊಂಡಿದ್ದಾರೆ.

ಅಂದಹಾಗೆ, ಲವ್ಲಿ ಸ್ಟಾರ್ ಪ್ರೇಮ್ ಹೊಸ ಸಿನಿಮಾಗೆ ತೇಜಸ್ ಆ್ಯಕ್ಷನ್ ಕಟ್ ಹೇಳ್ತಿದ್ದಾರೆ. ಚಿತ್ರದಲ್ಲಿ ಪ್ರೇಮ್ ಪೊಲೀಸ್ ಅಧಿಕಾರಿಯಾಗಿ ಕಾಣಿಸಿಕೊಳ್ಳಲಿದ್ದಾರೆ. ಶರಣ್ಯ ಅವರಿಗೂ ಉತ್ತಮ ಪಾತ್ರ ಸಿಕ್ಕಿದೆ. ಈ ಸಿನಿಮಾ ಮುಹೂರ್ತ ಕಾರ್ಯಕ್ರಮ ಈಗಾಗಲೇ ನೆರವೇರಿದೆ. ಸದ್ಯದಲ್ಲೇ ಶೂಟಿಂಗ್ ಕೂಡ ಶುರುವಾಗಲಿದೆ.

ಸಿನಿಮಾಗೆ ತೇಜಸ್ ಆ್ಯಕ್ಷನ್ ಕಟ್

ನಟಿ ಭಾಗ್ಯ ಶ್ರೀ ಹಣೆಗೆ ಪೆಟ್ಟು- ಆಸ್ಪತ್ರೆಗೆ ದಾಖಲು

ಶಿವಣ್ಣನಟನೆಯ 'ಅಮ್ಮಾವ್ರ ಗಂಡ' ಸಿನಿಮಾದಲ್ಲಿ ನಾಯಕಿಯಾಗಿ ನಟಿಸಿದ್ದ ಭಾಗ್ಯ ಶ್ರೀ ಹಣೆಗೆ ಪೆಟ್ಟಾಗಿದೆ. ಸದ್ಯ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಡ್ ಮೇಲೆ ಮಲಗಿರುವ ನಟಿಯ ಫೋಟೋ ವೈರಲ್ ಆಗ್ತಿದ್ದಂತೆ ಫ್ಯಾನ್ಸ್ ಆತಂಕಗೊಂಡಿದ್ದಾರೆ. ಆದಷ್ಟು ಬೇಗ ಭಾಗ್ಯ ಶ್ರೀ ಅವರು ಚೇತರಿಸಿಕೊಳ್ಳಲಿ ಎಂದು ಜನರು ಪ್ರಾರ್ಥಿಸುತ್ತಿದ್ದಾರೆ. ನಟಿ ಭಾಗ್ಯ ಶ್ರೀ ಪಿಕಲ್‌ಬಾಲ್ ಆಡುವಾಗ ಪೆಟ್ಟು ಮಾಡಿಕೊಂಡಿದ್ದಾರೆ. ಆ ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ವೈದ್ಯರು ಸರ್ಜರಿ ಮಾಡಿದ್ದು, ನಟಿಯ ಹಣೆಗೆ 13 ಹೊಲಿಗೆ ಹಾಕಿದ್ದಾರೆ. ಆಪರೇಷನ್ ಥಿಯೇಟರ್‌ನಲ್ಲಿ ಭಾಗ್ಯ ಶ್ರೀ ಮಲಗಿರುವ ಫೋಟೋ ವೈರಲ್ ಆಗುತ್ತಿದೆ. ಇದನ್ನು ನೋಡಿ ಅಭಿಮಾನಿಗಳಿಗೆ ಗಾಬರಿಗೊಂಡಿದ್ದಾರೆ. ಅವರ ಆರೋಗ್ಯದ ಕುರಿತು ಭಾಗ್ಯ ಶ್ರೀ ಅವರಿಂದಾಗಲಿ, ಕುಟುಂಬ ಕಡೆಯಿಂದ ಯಾವುದೇ ಪ್ರತಿಕ್ರಿಯೆ ಸಿಕ್ಕಿಲ್ಲ. ಆದರೆ ಆತಂಕಪಡುವಂಥದ್ದು ಏನಾಗಿಲ್ಲ ಎಂದು ಹೇಳಲಾಗುತ್ತಿದೆ. ನಟಿಯ ಕಡೆಯಿಂದ ಸ್ಪಷ್ಟನೆ ಸಿಗುವವರೆಗೂ ಕಾದುನೋಡಬೇಕಿದೆ. ಇನ್ನೂ 1989ರಲ್ಲಿ 'ಮೈನೆ ಪ್ಯಾರ್ ಕಿಯಾ' ಚಿತ್ರದಲ್ಲಿ ಸಲ್ಮಾನ್ ಖಾನ್‌ಗೆ ನಾಯಕಿಯಾಗಿ ನಟಿಸಿದರು. ಬಹುಭಾಷಾ ನಟಿಯಾಗಿ ಗುರುಸಿಕೊಂಡಿದ್ದಾರೆ. ಕನ್ನಡದಲ್ಲೂ ಶಿವಣ್ಣ ಜೊತೆ ಭಾಗ್ಯ ಶ್ರೀ ತೆರೆಹಂಚಿಕೊಂಡಿದ್ದಾರೆ.

ಸಮಂತಾ ನಿರ್ಮಾಣದ ಚೊಚ್ಚಲ ಸಿನಿಮಾ ರಿಲೀಸ್‌ಗೆ ರೆಡಿ

ಸ್ಯಾಂಡಲ್‌ವುಡ್ ಬ್ಯೂಟಿ ಸಮಂತಾ ಬೇಡಿಕೆ ನಟಿಯರಲ್ಲಿ ಒಬ್ಬರಾಗಿದ್ದಾರೆ. ಈಗ ನಿರ್ಮಾಪಕರಾಗಿ ಹೊಸಬರ ಕನಸಿಗೆ ಅವರು ಸಾಥ್ ನೀಡುತ್ತಿದ್ದಾರೆ. ಇದೀಗ ನಟಿಯ ನಿರ್ಮಾಣದ ಚೊಚ್ಚಲ ಸಿನಿಮಾ ರಿಲೀಸ್‌ಗೆ ಸಜ್ಜಾಗಿದೆ. ಈ ಕುರಿತು ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಸಮಂತಾ ನಿರ್ಮಾಣದ 'ಶುಭಂ' ಸಿನಿಮಾ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ. ನಮ್ಮ 'ಶುಭಂ' ಸಿನಿಮಾ ಚಿತ್ರೀಕರಣ ಮುಗಿದಿದ್ದು, ರಿಲೀಸ್‌ಗೆ ರೆಡಿಯಾಗಿದೆ. ಇನ್ನಷ್ಟು ಸುದ್ದಿಗಳನ್ನು ಶೀಘ್ರವೇ ಹಂಚಿಕೊಳ್ಳುತ್ತೇನೆ ಎಂದಿದ್ದಾರೆ. ಸಿನಿಮಾ ರಿಲೀಸ್ ಡೇಟ್ ಬಗ್ಗೆ ಅಧಿಕೃತವಾಗಿ ತಿಳಿಸಬೇಕಿದೆ. ಸಮಂತಾ ನಿರ್ಮಾಣ ಮಾಡಿರುವ ಈ ಸಿನಿಮಾ ರೆಟ್ರೋ ಕಾಲದ ಕತೆ ಹೊಂದಿದ್ದು, ಹಾಸ್ಯ ಮಿಶ್ರಿತ ಕೌಟುಂಬಿಕ ಕತೆಯುಳ್ಳ ಸಿನಿಮಾ ಆಗಿದೆ. ಈ ಸಿನಿಮಾದಲ್ಲಿ ಹಲವು ಹೊಸ ನಟ-ನಟಿಯರು ನಟಿಸಿದ್ದಾರೆ. ಸಿನಿಮಾದ ನಿರ್ದೇಶಕರು ಕೂಡ ಹೊಸಬರೇ ಆಗಿದ್ದಾರೆ. ಚಿತ್ರಕ್ಕೆ ಪ್ರವೀಣ್ ಕಂಡ್ರೇಗುಳ ಅವರು ಆ್ಯಕ್ಷನ್ ಕ್ಟನ್ ಕಟ್ ಹೇಳಿದ್ದಾರೆ.

ಇನ್ನೂ 'ಮಾ ಈಂಟಿ ಬಂಗಾರಂ' ಸಿನಿಮಾ, ನಿರ್ದೇಶಕ ನಂದಿನಿ ರೆಡ್ಡಿ ಜೊತೆ ಹೊಸ ಚಿತ್ರ, ಬಾಲಿವುಡ್ ಸಿನಿಮಾಗಳಲ್ಲಿ ಸಮಂತಾ ತೊಡಗಿಸಿಕೊಂಡಿದ್ದಾರೆ.

ಕಾಟೇರನ ಹುಡುಗಿಯ ಮಸ್ತ್ ಪೋಸ್ ಹೇಗಿ ಕಾಣ್ತಾರೆ ನೋಡಿ

ದಾಸ ದರ್ಶನ್ ಕಾಟೇರ ಚಿತ್ರದ ನಾಯಕಿ ಆರಾಧನಾ ಬದಲಾಗಿದ್ದಾರೆ. ಅದೆಷ್ಟು ಅಂದ್ರೆ ಸಡನ್ ಆಗಿ ಗುರುತೇ ಸಿಗೋದಿಲ್ಲ. ಆ ಮಟ್ಟಿಗೇನೆ ಚೇಂಜ್ ಆಗಿದ್ದಾರೆ. ಹಾಗೇನೆ ಈ ಒಂದು ಹೊಸ ಲುಕ್ ಅಲ್ಲಿಯೇ ಇದೀಗ ಮತ್ತೊಂದು ಗ್ಲಾಮರಸ್ ಫೋಟೋ ಶೂಟ್ ಮಾಡಿಸಿದ್ದಾರೆ. ಆ ಎಲ್ಲಾ ಫೋಟೋಗಳ ಒಂದು ಗ್ಯಾಲರಿ ಸ್ಟೋರಿ ಇಲ್ಲಿದೆ ನೋಡಿ. ಆರಾಧನಾ, ಕಾಟೇರ ನಾಯಕಿ, ದರ್ಶನ್ ಹೀರೋನ್, ಆರಾಧನಾ ಮಾಡ್ರನ್ ಲುಕ್, ಕನ್ನಡ ಸಿನಿಮಾ ನಾಯಕಿ ಸ್ಯಾಂಡಲ್‌ವುಡ್‌ನ ಕಾಟೇರ ಚಿತ್ರದ ನಾಯಕಿ ನಟಿ ಆರಾಧಾನಾ ಹೊಸ ಚಿತ್ರಯಾವಾಗ ಅನೌನ್ಸ್ ಆಗುತ್ತದೆ. ಕಾಟೇರ ಬಂದು 2 ವರ್ಷಗಳೇ ಕಳೆದು ಹೋಗಿದೆ. ಅಲ್ಲಿಂದ ಇಲ್ಲಿವರೆಗೂ ಒಂದೇ ಒಂದು ಸಿನಿಮಾ ಕೂಡ ಅನೌನ್ಸ್ ಆಗಿಲ್ಲ. ಕಾಟೇರ ರಿಲೀಸ್ ಆದ ಸಮಯದಲ್ಲಿ ಒಂದು ದೊಡ್ಡ ಪ್ರೊಜೆಕ್ಟ್‌ನ ಸುದ್ದಿ ಕೂಡ ಇತ್ತು. ಆರಾಧನಾ, ಕಾಟೇರ ನಾಯಕಿ, ದರ್ಶನ್ ಹೀರೋನ್, ಆರಾಧನಾ ಮಾಡ್ರನ್ ಲುಕ್, ಕನ್ನಡ ಸಿನಿಮಾ ನಾಯಕಿ ಆದರೆ, ಹೋಗ್ತಾ ಹೋಗ್ತಾ ಏನೂ ಸುದ್ದಿನೇ ಇಲ್ಲ ನೋಡಿ. ಹಾಗಂತ ಆರಾಧಾನ ಸುದ್ದಿಯಲ್ಲಿ ಇಲ್ಲ ಅನ್ಕೋಬೇಡಿ. ಬದಲಾಗಿ ಆರಾಧನಾ ಸೋಷಿಯಲ್ ಮೀಡಿಯಾ ಪೇಜ್ ಅಲ್ಲಿ ಸಾಕಷ್ಟು ಆ್ಯಕ್ಟೀವ್ ಆಗಿದ್ದಾರೆ. ಅದೆಷ್ಟು ಅಂದ್ರೆ ವಾರದಲ್ಲಿ ಒಂದೋ ಎರಡೋ ಪೋಸ್ಟ್ ಹಾಕ್ತಾನೇ ಇರ್ತಾರೆ. ಇಲ್ವೋ ಒಂದಿಲ್ಲ ಒಂದು ರೀಲ್ಸ್ ವಿಡಿಯೋ ಕೂಡ ಇರ್ತವೆ. ಆರಾಧನಾ ಒಳ್ಳೆ ನಟಿನೂ ಆಗಿದ್ದಾರೆ. ದರ್ಶನ್ ರಂತಹ ಸೂಪರ್ ಸ್ಟಾರ್ ಎದುರು ನಟಿಸೋದು ಅಷ್ಟು ಸುಲಭವೇನೂ ಅಲ್ಲ ಬಿಡಿ. ಮೊದಲ ಚಿತ್ರದಲ್ಲಿಯೇ ಮೊದಲ ದಿನವೇ ದರ್ಶನ್‌ಗೆ ಕತ್ತಿಗೆ ಕತ್ತಿ ಹಿಡಿಯೋ ದೃಶ್ಯದಲ್ಲಿ ಅಭಿನಯಿಸಿದ್ದಾರೆ. ಅಷ್ಟೇ ಅಲ್ಲ, ಅಲ್ಲಿದ್ದವರಿಂದಲೂ ಭೇಷ್ ಅಂತಲೂ ಕರೆಸಿಕೊಂಡಿದ್ದಾರೆ. ಇಷ್ಟೆಲ್ಲ ಪ್ರತಿಭೆಯನ್ನ ತೋರಿದ್ದ ಆರಾಧನಾ ಒಳ್ಳೆ ಡ್ಯಾನ್ಸರ್ ಕೂಡ ಆಗಿದ್ದಾರೆ. ಬೇರೆ ಬೇರೆ ಭಾಷೆಯ ಹಾಡುಗಳಿಗೆ ರೀಲ್ಸ್ ಮಾಡೋದು ಇದೆ. ಅಷ್ಟೇ ಇಷ್ಟಪಟ್ಟು ಅಮ್ಮನ ಚಿತ್ರದ ಹಾಡುಗಳಿಗೆ ಅಮ್ಮನ ಜೊತೆಗೆ ಡ್ಯಾನ್ಸ್ ಮಾಡೋದು ಇದೆ. ಇದನ್ನೆಲ್ಲ ಮೆಚ್ಚೋ ಕಾಮೆಂಟ್ ವೀರರು, ಆರಾಧನಾ ಮಾಡ್ರನ್ ಲುಕ್‌ಗೆ ಮನಸೋಯಿಚ್ಚೆ ಕಾಮೆಂಟ್ ಹೊಡೀತಾರೆ.

ಶೋಲ್ಡರ್‌ಲೆಸ್ ಡ್ರೆಸ್‌ನಲ್ಲಿ ಮಿಂಚಿದ ನಟಿ ಸಂಗೀತಾ

ಸ್ಯಾಂಡಲ್‌ವುಡ್ ಬ್ಯೂಟಿ ಸಂಗೀತಾ ಭಟ್ ಅವರು ಫ್ಯಾಷನ್ ವಿಚಾರದಲ್ಲಿ ಒಂದಿಷ್ಟು ಹೊಸ ಪ್ರಯೋಗಗಳನ್ನು ಮಾಡುತ್ತಲೇ ಇರುತ್ತಾರೆ. ಇದೀಗ ಅವರು ಶೋಲ್ಡರ್‌ಲೆಸ್ ಡ್ರೆಸ್‌ನಲ್ಲಿ ಕಂಗೊಳಿಸಿದ್ದಾರೆ. ಬೋಲ್ಡ್ ಆಗಿ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ. ಹೊಸ ಫೋಟೋಶೂಟ್ ಅನ್ನು ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಕ್ರೀಮ್ ಬಣ್ಣದ ಡ್ರೆಸ್ ಅನ್ನು ನಟಿ ಧರಿಸಿದ್ದಾರೆ. ಶೋಲ್ಡರ್‌ಲೆಸ್ ಡ್ರೆಸ್‌ನಲ್ಲಿ ಅವರು ಮಿಂಚಿದ್ದಾರೆ. ವಿವಿಧ ಭಂಗಿಗಳಲ್ಲಿ ಸಂಗೀತಾ ಮಸ್ತ್ ಆಗಿ ಪೋಸ್ ನೀಡಿದ್ದಾರೆ. ನಟಿಯ ಹೇರ್ ಸ್ಟೈಲ್ ಕೂಡ ವಿಭಿನ್ನವಾಗಿದೆ.

ಪತ್ನಿ ಸಂಗೀತಾ ಅಂದಕ್ಕೆ 'ಭಾಗ್ಯಲಕ್ಷ್ಮಿ' ಸೀರಿಯಲ್ ಖ್ಯಾತಿಯ ಸುದರ್ಶನ್ ರಂಗಪ್ರಸಾದ್ ಅವರು ವಾವ್ ಎಂದು ಕಾಮೆಂಟ್ ಮಾಡಿದ್ದಾರೆ. ಪತ್ನಿಯ ಸ್ಟೈಲೀಶ್ ಲುಕ್‌ಗೆ ಅವರು ಮೆಚ್ಚುಗೆ ಸೂಚಿಸಿದ್ದಾರೆ.

ಇನ್ನೂ ಕನ್ನಡ, ತಮಿಳು, ತೆಲುಗು ಸಿನಿಮಾಗಳಲ್ಲಿ ಸಂಗೀತಾ ನಟಿಸಿದ್ದಾರೆ. ಕನ್ನಡದ ಪ್ರೀತಿ ಗೀತಿ ಇತ್ಯಾದಿ, ಎರಡನೇ ಸಲ, ಕಿಸ್ಮತ್, ರೂಪಾಂತರ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ.

ಮಯಾಂಕ್‌ನನ್ನು ಐಪಿಎಲ್‌ನಿಂದ ಹೊರಗಿಡಲು ಲಕ್ನೋ ಕುತಂತ್ರ

ಲಕ್ನೋ ಸೂಪರ್ ಜೈಂಟ್ಸ್ ತಂಡದ ಮೂವರು ಪ್ರಮುಖ ವೇಗಿಗಳು ಗಾಯದಿಂದ ಬಳಲುತ್ತಿದ್ದಾರೆ. ಐಪಿಎಲ್ 2025 ಆರಂಭಕ್ಕೆ ಕಡಿಮೆ ಸಮಯ ಉಳಿದಿರುವಾಗ, ಲಕ್ನೋ ತಂಡವು ಎನ್‌ಸಿಎಗೆ ಅವರ ಗಾಯದ ಬಗ್ಗೆ ಸುಳ್ಳು ವರದಿ ನೀಡುವಂತೆ ವಿನಂತಿಸಿದೆ. ಈ ವಿಚಿತ್ರ ಬೇಡಿಕೆಯಿಂದ ಎನ್‌ಸಿಎ ಅಧಿಕಾರಿಗಳು ಆಶ್ಚರ್ಯಚಕಿತರಾಗಿದ್ದಾರೆ. ಈ ಕ್ರಮದಿಂದ ಬದಲಿ ಆಟಗಾರನನ್ನು ತಂಡಕ್ಕೆ ಸೇರಿಸಿಕೊಳ್ಳುವುದು ಲಕ್ನೋ ತಂಡದ ಯೋಜನೆಯಾಗಿದೆ.

2025 ರ ಐಪಿಎಲ್ ಆರಂಭವಾಗಲು ಈಗ 1 ವಾರಕ್ಕಿಂತ ಕಡಿಮೆ ಸಮಯ ಉಳಿದಿದೆ. ಆದರೆ ಇನ್ನೂ ಲಕ್ನೋ ಸೂಪರ್ ಜೈಂಟ್ಸ್‌ನ 3 ಪ್ರಮುಖ ವೇಗಿಗಳಾದ ಮೊಹ್ಸಿನ್ ಖಾನ್, ಆವೇಶ್ ಖಾನ್ ಮತ್ತು ಮಯಾಂಕ್ ಯಾದವ್ ಅವರಿಗೆ ಟೂರ್ನಮೆಂಟ್‌ನಲ್ಲಿ ಆಡಲು ಎನ್‌ಸಿಎ ನಿಂದ ಗ್ರೀನ್ ಸಿಗ್ನಲ್ ಸಿಕ್ಕಿಲ್ಲ. ಇದರಿಂದ ಲಕ್ನೋ ತಂಡಕ್ಕೆ ಆರಂಭದಲ್ಲೇ ವಿಘ್ನ ಎದುರಾಗಿದೆ.

ಹೀಗಾಗಿ ಇದೀಗ ಗಾಯದಿಂದ ಚೇತರಿಸಿಕೊಳ್ಳುತ್ತಿರುವ ಬೌಲರ್‌ಗಳನ್ನು ಇಡೀ ಟೂರ್ನಿಯಿಂದಲೇ ಹೊರಗಿಟ್ಟು, ಮತ್ತೊಬ್ಬ ವೇಗಿಯನ್ನು ತಂಡಕ್ಕೆ ಸೇರಿಸಿಕೊಳ್ಳಲು ಲೆಕ್ಕಾಚಾರ ಹಾಕಿಕೊಂಡಿರುವ ಲಕ್ನೋ ಫ್ರಾಂಚೈಸಿ, ಎನ್‌ಸಿಎ ಅಧಿಕಾರಿಗಳ ಬಳಿ, ತನ್ನ ತಂಡದ ಗಾಯಗೊಂಡ ವೇಗಿಗಳ ಸುಳ್ಳು ವರದಿ ನೀಡಿ ಎಂದು ಕೇಳಿಕೊಳ್ಳುತ್ತಿದೆ ಎಂದು ವರದಿಯಾಗಿದೆ. ವರದಿಯ ಪ್ರಕಾರ, ಇಂಜುರಿಯಿಂದ ಚೇತರಿಸಿಕೊಳ್ಳುತ್ತಿರುವ ಲಕ್ನೋ ತಂಡದ ಪ್ರಮುಖ ವೇಗದ ಬೌಲರ್ ಮಾಯಾಂಕ್ ಯಾದವ್ ಅನ್‌ಫಿಟ್ ಎಂಬ ಸುಳ್ಳು ವರದಿ ನೀಡಿ ಎಂದು ಓಆಂ ಅಧಿಕಾರಿಗಳ ಬಳಿ ಲಕ್ನೋ ಫ್ರಾಂಚೈಸಿ ಬೇಡಿಕೆ ಇಟ್ಟಿದೆ ಎಂದು ಬಿಸಿಸಿಐ ಮೂಲವೊಂದು ಬಹಿರಂಗಪಡಿಸಿದೆ. 'ಐಪಿಎಲ್ ತಂಡವೊಂದು ಇಂತಹ ವಿಚಿತ್ರ ಬೇಡಿಕೆಯನ್ನು ಇಡುತ್ತಿರುವುದು ಇದೇ ಮೊದಲು. ಲಕ್ನೋ ಫ್ರಾಂಚೈಸಿಯ ಈ ವಿನಂತಿಯನ್ನು ಕೇಳಿ ಎನ್‌ಸಿಎ ಅಧಿಕಾರಿಗಳು ಕೂಡ ಆಶ್ಚರ್ಯಚಕಿತರಾಗಿದ್ದಾರೆ ಎಂದು ವರದಿಯಾಗಿದೆ.

ವಾಸ್ತವವಾಗಿ, ಐಪಿಎಲ್ ನಿಯಮಗಳ ಪ್ರಕಾರ, ಯಾವುದೇ ಫ್ರಾಂಚೈಸಿ ಯಾವುದೇ ಆಟಗಾರನನ್ನು ಕೈಬಿಡದ ಹೊರತು ಅವರ ಬದಲಿ ಆಟಗಾರನನ್ನು ತಂಡಕ್ಕೆ ಹೊಸದಾಗಿ ಆಯ್ಕೆ ಮಾಡಲು ಸಾಧ್ಯವಿಲ್ಲ. ಅದಕ್ಕಾಗಿಯೇ ಲಕ್ನೋ ಎನ್‌ಸಿಎ ಮುಂದೆ ಇಂತಹ ಬೇಡಿಕೆಯನ್ನು ಇಟ್ಟಿದೆ.



10 ತಂಡಗಳ ನಾಯಕರ ಹೆಸರು ಫೈನಲ್ 9 ಮಂದಿ ಭಾರತೀಯರದ್ದೇ ಆರ್ಭಟ

ಐಸಿಸಿ ಚಾಂಪಿಯನ್ಸ್ ಟ್ರೋಫಿ, ಡಬ್ಲ್ಯೂಪಿಎಲ್ ಬಳಿಕ ಕ್ರಿಕೆಟ್ ಪ್ರಿಯರ ಚಿತ್ತ ಈಗ ಐಪಿಎಲ್ ಕಡೆ ತಿರುಗಿದೆ. ಪ್ರತಿಷ್ಠಿಯ 18ನೇ ಆವೃತ್ತಿಯ ಈ ಕ್ರೀಡಾಕೂಟ ಆರಂಭಕ್ಕೆ ದಿನಗಣನೆ ಆರಂಭವಾಗಿದ್ದು, ಕ್ರಿಕೆಟ್ ಪ್ರೇಮಿಗಳು ತುದಿಗಾಲಲ್ಲಿ ಕಾಯುತ್ತಿದ್ದಾರೆ. ಈಗಾಗಲೇ ಎಲ್ಲಾ ಹತ್ತು ಫ್ರಾಂಚೈಸ್‌ಗಳು ತಮ್ಮತಮ್ಮ ನಾಯಕರ ಹೆಸರನ್ನು ಆಯಾ ಫ್ರಾಂಚೈಸಿಗಳು ಅಂತಿಮಗೊಳಿಸಿವೆ.

ಹಿಂದೆಲ್ಲಾ ಟೂರ್ನಿಗಳಲ್ಲಿ ವಿದೇಶಿ ಆಟಗಾರರೇ ಹೆಚ್ಚಾಗಿ ನಾಯಕರಾಗಿದ್ದ ಉದಾಹರಣೆಗಳಿವೆ. ಆದರೆ, ಈ ಬಾರಿಯ ಐಪಿಎಲ್‌ನಲ್ಲಿ ಒಬ್ಬರು ಮಾತ್ರವೇ ವಿದೇಶಿ ಆಟಗಾರ ನಾಯಕನಾಗಿದ್ದು, ಮಿಕ್ಕೆಲ್ಲ ತಂಡಗಳಿಗೆ ಟೀಂ ಇಂಡಿಯಾದ ಆಟಗಾರರೇ ನಾಯಕರಾಗಿರುವುದು ವಿಶೇಷ. ಈ ಮೊದಲು ಆಸ್ಟ್ರೇಲಿಯಾದ ಸ್ಟಾರ್ ಆಟಗಾರರಾದ ಡೇವಿಡ್ ವಾರ್ನರ್, ಆಡಂ ಗಿಲ್ಕ್ರಿಸ್ಟ್, ಶೇನ್ ವಾರ್ನ್, ಸ್ಟೀವನ್ ಸ್ಮಿತ್, ಕ್ಯಾಮರೂನ್ ವೈಟ್, ಶ್ರೀಲಂಕಾದ ಕುಮಾರ ಸಂಗಕ್ಕರ, ನ್ಯೂಜಿಲ್ಯಾಂಡ್ ದೇಶದ ಕೇನ್ ವಿಲಿಯಮ್ಸನ್, ಡೇನಿಯಲ್ ವೆಟ್ಟೋರಿ, ಬ್ರೆಂಡನ್ ಮಕಲಂ ಮುಂತಾದ ವಿದೇಶಿ ಆಟಗಾರರು ಫ್ರಾಂಚೈಸ್ ನಾಯಕರಾಗಿದ್ದರು.

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನೂ ಮೂವರು ವಿದೇಶಿ ಆಟಗಾರರು ಮುನ್ನಡೆಸಿದ್ದರು. 2009ರಲ್ಲಿ ಕೆವಿನ್ ಪೀಟರ್ಸನ್, 2011 ಮತ್ತು 2012ರಲ್ಲಿ ಡೇನಿಯಲ್ ವೆಟ್ಟೋರಿ ಮತ್ತು 2022, 2023 ಮತ್ತು 2024ರ ಆವೃತ್ತಿಯಲ್ಲಿ ದಕ್ಷಿಣ ಆಫ್ರಿಕಾದ ಫಾಫ್ ಡುಪ್ಲೆಸಿಸ್ ನಾಯಕರಾಗಿದ್ದರು. ಇದೇ ರೀತಿ ಬಹುತೇಕ ಎಲ್ಲಾ ಫ್ರಾಂಚೈಸ್ ನಾಯಕರೂ ಕೆಲವು ಆವೃತ್ತಿಗಳಲ್ಲು ನಾಯಕರಾಗಿದ್ದರು. ಉದಾಹರಣೆಗೆ, ಮುಂಬೈ ಇಂಡಿಯನ್ಸ್ ತಂಡವನ್ನು ದಕ್ಷಿಣ ಆಫ್ರಿಕಾದ ಶಾನ್ ಪೊಲಾಕ್ (2008), ವೆಸ್ಟ್ ಇಂಡೀಸ್ ತಂಡದ ಡ್ವೇನ್ ಬ್ರಾವೋ (2010) ಮತ್ತು ಕೀರನ್ ಪೊಲಾರ್ಡ್ (2014 – 2021) ಸ್ಟ್ರ್ಯಾಂಡ್ ಇನ್ ನಾಯಕರಾಗಿದ್ದರು. ಆದ್ರೆ 18ನೇ ಆವೃತ್ತಿಯಲ್ಲಿ ಭಾರತೀಯರ ಆರ್ಭಟವೇ ಜೋರಾಗಿದೆ. 10 ತಂಡಗಳ ಪೈಕಿ 9 ಮಂದಿ ಭಾರತೀಯರೇ ನಾಯಕರಾಗಿ ಮಿಂಚುತ್ತಿದ್ದಾರೆ.

ಐಪಿಎಲ್‌ನ 10 ತಂಡಗಳು ಮತ್ತು ನಾಯಕರ ಪಟ್ಟಿ

- ಮುಂಬೈ ಇಂಡಿಯನ್ಸ್ – ಹಾರ್ದಿಕ್ ಪಾಂಡ್ಯ
- ರಾಯಲ್ ಚಾಲೆಂಜರ್ಸ್ ಬೆಂಗಳೂರು – ರಜತ್ ಪಾಟೀದಾರ್
- ಕೋಲ್ಕತ ನೈಟ್ ರೈಡರ್ಸ್ – ಅಜಿಂಕ್ಯ ರಹಾನೆ
- ಚೆನ್ನೈ ಸೂಪರ್ ಕಿಂಗ್ಸ್ – ರುತುರಾಜ್ ಗಾಯಕ್ವಾಡ್
- ಗುಜರಾತ್ ಟೈಟನ್ಸ್ – ಶುಭ್ಮನ್ ಗಿಲ್
- ರಾಜಸ್ಥಾನ ರಾಯಲ್ಸ್ – ಸಂಜು ಸ್ಯಾಮ್ಸನ್
- ಲಕ್ನೋ ಸೂಪರ್ ಜೈಂಟ್ಸ್ – ರಿಷಭ್ ಪಂತ್
- ಪಂಜಾಬ್ ಕಿಂಗ್ಸ್ – ಶ್ರೇಯಸ್ ಐಯ್ಯರ್
- ಡೆಲ್ಲಿ ಕ್ಯಾಪಿಟಲ್ಸ್ – ಅಕ್ಷರ್ ಪಟೇಲ್
- ಸನ್ ರೈಸರ್ಸ್ ಹೈದರಾಬಾದ್ – ಪ್ಯಾಟ್ ಕಮ್ಮಿನ್ಸ್ (ಆಸ್ಟ್ರೇಲಿಯಾ).

ಸಿಎಸ್‌ಕೆ ಹೆಸರನ್ನು ಕೇಳುತ್ತಿದ್ದಂತೆ ಗ್ಲಾಸ್ ಪುಡಿಗಟ್ಟಿದ ರೋಹಿತ್

ಐಪಿಎಲ್ 2025ರಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಮುಂಬೈ ಇಂಡಿಯನ್ಸ್ ನಡುವಿನ ಪಂದ್ಯಕ್ಕೆ ಭಾರಿ ನಿರೀಕ್ಷೆ ಇದೆ. ಮುಂಬೈನ ಮಾಜಿ ನಾಯಕ ರೋಹಿತ್ ಶರ್ಮಾ ಅವರು ಸಿಎಸ್‌ಕೆ ಪಂದ್ಯದ ಬಗ್ಗೆ ಕೇಳಿ ಕೋಪದಿಂದ ಜ್ಯೂಸ್ ಗ್ಲಾಸ್ ಒಡೆದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಎರಡೂ ತಂಡಗಳು ಐಪಿಎಲ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ್ದು, ಈ ಪಂದ್ಯಕ್ಕೆ ಭಾರಿ ಕುತೂಹಲವಿದೆ.

18ನೇ ಆವೃತ್ತಿಯ ಐಪ